ಸಂಪುಟ: ೦೭/ ಸಂಚಿಕೆ: ೧೬೬/ಬುಧವಾರ ದಿನಾಂಕ : ೨೦-೦೮-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 166/ THURSDAY Date : 20-08-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಬೆಳಗಾವಿಯಲ್ಲಿ ಭಾರಿ ಮಳೆ: ರೆಡ್ ಅಲರ್ಟ್ ಘೋಷಣೆ

### ಅವಶ್ಯಕತೆ ಇದ್ದರೆ ಮಾತ್ರ ಮನೆಯಿಂದ ಹೊರಬರುವಂತೆ ಜಿಲ್ಲಾಧಿಕಾರಿ ಸೂಚನೆ



**ಬೆಳಗಾವಿ** : ಜಿಲ್ಲೆಯಲ್ಲಿ ಬಹಳಷ್ಟು ಮಳೆ ಆಗುತ್ತಿದೆ. ಹೀಗಾಗಿ, ಇಂದು (ಮಂಗಳವಾರ) ಮತ್ತು ನಾಳೆ(ಬುಧವಾರ) ರೆಡ್ ಅಲರ್ಟ್ ಘೋಷಿಸಲಾಗಿದೆ. ಅವಶ್ಯಕತೆ ಇದ್ದರೆ ಮಾತ್ರ ಜನರು ಹೊರಗಡೆ ಬರಬೇಕು. ಮಕ್ಕಳ ಸುರಕ್ಷತೆ ದೃಷ್ಟಿಯಿಂದ ನಿನ್ನೆ ಮತ್ತು ಇಂದು ಶಾಲೆಗಳಿಗೆ ರಜೆ ಘೋಷಿಸಿದ್ದೆವು. ಬುಧವಾರವೂ ಜಿಲ್ಲೆಯ ಎಲ್ಲ ಅಂಗನವಾಡಿ, ಪ್ರಾಥಮಿಕ-ಪ್ರೌಢಶಾಲೆಗಳು ಮತ್ತು ಪದವಿಪೂರ್ವ ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದ್ದಾರೆ.

ತಮ್ಮ ಕಚೇರಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕಳೆದ ಎರಡು ದಿನಗಳಿಂದ ಜಿಲ್ಲೆಯಲ್ಲಿ ಮಳೆ ಪ್ರಮಾಣ ಹೆಚ್ಚಾಗಿದೆ. ಆ ಹಿನ್ನೆಲೆಯಲ್ಲಿ ಇಂದು(ಮಂಗಳವಾರ) ಬೆಳಗ್ಗೆ ನಾನು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ಜಿ.ಪಂ. ಸಿಇಒ ಅವರು ಕೂಡಿಕೊಂಡು ವಿಪತ್ತು ನಿರ್ವಹಣಾ ಪ್ರಾಧಿಕಾರದ ಜೊತೆಗೆ ಸಭೆ ಮಾಡಿದ್ದೇವೆ ಎಂದಿದ್ದಾರೆ.

ನಿನ್ನೆ ಕೊಯ್ನಾ ಜಲಾಶಯದಿಂದ ಕೃಷ್ಣಾ ನದಿಗೆ 53 ಸಾವಿರ ಕ್ಯೂಸೆಕ್ ನೀರು ಬಿಡುವ ಮಾಹಿತಿ ಸಿಕ್ಕಿದೆ. ಆ ನೀರು ನಮ್ಮ ಜಿಲ್ಲೆ ತಲುಪಲು ಸುಮಾರು 40 ಗಂಟೆ ಬೇಕಾಗುತ್ತದೆ. ಮುನ್ನೆಚ್ಚರಿಕೆ ಕ್ರಮವಾಗಿ ನಮ್ಮ ಜಲಸಂಪನ್ಮೂಲ ಇಲಾಖೆಯ ಎಸಿಎಸ್ ಅವರು ಆಲಮಟ್ಟಿ ಜಲಾಶಯದಿಂದ ಇಂದು ಬೆಳಗ್ಗೆಯಿಂದಲೇ 1.5 ಲಕ್ಷ ಕ್ಯೂಸೆಕ್ ನೀರನ್ನು ಬಿಡಲು ಸೂಚಿಸಿದ್ದಾರೆ. ಅದನ್ನು ಮುಖ್ಯ ಇಂಜಿನಿಯರ್ ನಿರ್ವಹಣೆ ಮಾಡುತ್ತಿದ್ದಾರೆ. ರಾಜಾಪುರ ಬ್ಯಾರೇಜ್ ಬಳಿ 70 ಸಾವಿರ ಕ್ಯೂಸೆಕ್ ನೀರು ಹರಿಯುತ್ತಿದೆ. ಕಲ್ಲೋಳ ಬ್ಯಾರೇಜ್??ನಲ್ಲಿ ವೇದಗಂಗಾ ಮತ್ತು ದೂಧಗಂಗಾ ನದಿಗಳ 93 ಸಾವಿರ ಕ್ಯೂಸೆಕ್ ನೀರು ಹರಿಯುತ್ತಿದೆ. ಇದರ ಜೊತೆಗೆ ಘಟಪ್ರಭಾ ನೀರು ಸೇರಿಕೊಂಡು ಹಿಪ್ಪರಗಿ ಬ್ಯಾರೇಜ್ ಮೂಲಕ ಆಲಮಟ್ಟಿ ಜಲಾಶಯಕ್ಕೆ ಸೇರುತ್ತದೆ ಎಂದಿದ್ದಾರೆ.

ಕೃಷ್ಣಾ ನದಿ ಪಾತ್ರದಲ್ಲಿ ಸದ್ಯಕ್ಕೆ ಆತಂಕ ಇಲ್ಲ: ಕೃಷ್ಣಾ ನದಿಗೆ 2 ಲಕ್ಷ ಕ್ಯೂಸೆಕ್ ನೀರು ಹರಿದು ಬಂದರೆ ಪ್ರವಾಹ ಸೃಷ್ಟಿಯಾಗುತ್ತದೆ. ಹಾಗಾಗಿ, ಸದ್ಯಕ್ಕೆ ಕೃಷ್ಣಾ ನದಿ ಪಾತ್ರದಲ್ಲಿ ಯಾವುದೇ ಆತಂಕದ ಸ್ಥಿತಿ ನಿರ್ಮಾಣ ಆಗಿಲ್ಲ. ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ಜಿಲ್ಲಾಡಳಿತ ಕೈಗೊಂಡಿದೆ. ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಎಲ್ಲ ಶಾಸಕರಿಗೆ ಮಳೆ ಕುರಿತು ಮಾಹಿತಿ ನೀಡಿದ್ದೇವೆ. ನದಿ ನೀರು ನುಗ್ಗುವ ಸಾಧ್ಯತೆ ಇರುವ ಗ್ರಾಮಗಳಲ್ಲಿನ ಜನರಿಗೆ ತಿಳುವಳಿಕೆ ನೀಡುವಂತೆ ತಹಶಿಲ್ದಾರ್ ಗಳಿಗೆ ಸೂಚಿಸಿದ್ದೇವೆ. ಮಹಾರಾಷ್ಟ್ರದಿಂದ ಬರುವ ನೀರಿನಲ್ಲಿ ಇನ್ನೂ 60 ಸಾವಿರ ಕ್ಯೂಸೆಕ್ ಹೆಚ್ಚಾಗುವ ಸಾಧ್ಯತೆಯಿದೆ. ಹಾಗಾಗಿ, ಎಲ್ಲೆಲ್ಲಿ ತೊಂದರೆ ಆಗುತ್ತದೆಯೋ ಅಲ್ಲಿ ಕಾಳಜಿ ಕೇಂದ್ರಗಳನ್ನು ಸಿದ್ಧತೆ ಮಾಡಿಕೊಳ್ಳುವಂತೆ ಆದೇಶಿಸಿದ್ದೇನೆ. ಅದೇ ರೀತಿ ಪೊಲೀಸ್ ಇಲಾಖೆ ಕೂಡ ಸರ್ವ ಸನ್ನದ್ಧವಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

53 ಸಾವಿರ ಕ್ಯೂಸೆಕ್ ಬಂದರೆ ಗೋಕಾಕಿಗೆ ಪ್ರವಾಹ: ಘಟಪ್ರಭಾ ಮತ್ತು ಮಾರ್ಕಂಡೇಯ ನದಿಗಳಿಂದ ಗೋಕಾಕ್ ತಾಲೂಕಿನ ಲೋಳಸೂರ ಸೇತುವೆಯಲ್ಲಿ ಸದ್ಯಕ್ಕೆ 43 ಸಾವಿರ ಕ್ಯೂಸೆಕ್ ನೀರು ಹರಿಯುತ್ತಿದೆ. 53 ಸಾವಿರ ಕ್ಯೂಸೆಕ್ ನೀರು ಬಂದರೆ ಗೋಕಾಕ್ ನಗರದಲ್ಲಿ ಪರಿಣಾಮ ಬೀರುತ್ತದೆ. ಹಾಗಾಗಿ, ಎಚ್ಚರಿಕೆ ವಹಿಸುವಂತೆ ಗೋಕಾಕ್ ತಹಶಿಲ್ದಾರ್ ಅವರಿಗೆ ಸೂಚಿಸಲಾಗಿದೆ. ಗೋಕಾಕ್‌ನ ಕೆಲ ಪ್ರದೇಶದಲ್ಲಿ ಕಳೆದ ವರ್ಷ ಸಮಸ್ಯೆ ಆಗಿತ್ತು. ಹಾಗಾಗಿ, ಈ ಬಾರಿಯೂ ಅವರಿಗೆ ಅಲ್ಲಿನ ಮುನ್ಸಿಪಲ್ ಶಾಲೆಯಲ್ಲಿ ಕಾಳಜಿ ಕೇಂದ್ರ ತೆರೆದು ವ್ಯವಸ್ಥೆ ಕಲ್ಪಿಸಲಾಗುತ್ತದೆ ಎಂದು ಮೊಹಮ್ಮದ್ ರೋಷನ್ ಹೇಳಿದ್ದಾರೆ.

ಮಲಪ್ರಭೆಯ ಆತಂಕ ಇಲ್ಲ: ಮಲಪ್ರಭಾ ನದಿಯಲ್ಲಿ 14 ಸಾವಿರ ಕ್ಯೂಸೆಕ್ ನೀರು ಹರಿಯುತ್ತಿದೆ. ಹಾಗಾಗಿ, ಯಾವುದೇ ಆತಂಕದ ಪರಿಸ್ಥಿತಿ ಇಲ್ಲ. 25 ಸಾವಿರ ಕ್ಯೂಸೆಕ್ ನೀರು ಹರಿದರೆ ರಾಮದುರ್ಗ ತಾಲೂಕಿನಲ್ಲಿ ಸಮಸ್ಯೆ ಉದ್ಭವಿಸುತ್ತದೆ. ಸದ್ಯಕ್ಕೆ ಮಲಪ್ರಭಾ ನದಿಗೆ ವಾಡಿಕೆಯಷ್ಟು ನೀರು ಹರಿಯುತ್ತಿದೆ ಎಂದಿದ್ದಾರೆ.

30 ಕಾಳಜಿ ಕೇಂದ್ರ ತೆರೆದಿದ್ದೇವೆ: ರೈತ ಬಾಂಧವರು ಮೋಟಾರ್ ಪರೀಕ್ಷಿಸಲು ನದಿ ದಂಡೆಯ ಬಳಿ ಹೋಗಬಾರದು. ನೀರು ನಿಂತಿರುವಾಗ ಎಲ್ಲಿ ಗುಂಡಿ ಇದೆ ಅಂತಾ ಗೊತ್ತಾಗುವುದಿಲ್ಲ. ಹಾಗಾಗಿ, ಎಲ್ಲರೂ ಎಚ್ಚರಿಕೆ ವಹಿಸಬೇಕು. ಕಂದಾಯ, ಪೊಲೀಸ್, ಅಗ್ನಿಶಾಮಕದಳದ ಅಧಿಕಾರಿಗಳು ನೀಡುವ ಸೂಚನೆಯನ್ನು ಜಿಲ್ಲೆಯ ಜನರು ಕಟ್ಟು ನಿಟ್ಟಾಗಿ ಪಾಲಿಸಬೇಕು. ನಮಗೆ ಸದ್ಯಕ್ಕೆ 30 ಕಾಳಜಿ ಕೇಂದ್ರಗಳ ಅವಶ್ಯಕತೆ ಇದೆ. ಇದೇ ರೀತಿ ಮಳೆ ಮುಂದುವರಿದರೆ ಮತ್ತೆ 20 ಕೇಂದ್ರಗಳ ಅವಶ್ಯಕತೆ ಇರುತ್ತದೆ. ಆದರೆ, ಮುನ್ನೆಚ್ಚರಿಕೆಯಾಗಿ 550 ಕಾಳಜಿ ಕೇಂದ್ರಗಳನ್ನು ಸಿದ್ಧತೆಯಲ್ಲಿ ಇಟ್ಟುಕೊಂಡಿದ್ದೇವೆ ಎಂದು ಹೇಳಿದ್ದಾರೆ.

ಮೃತ ಮಹಿಳೆ ಕುಟುಂಬಕ್ಕೆ ಪರಿಹಾರ: ದುರಾದೃಷ್ಟವಶಾತ್ ಗೋಕಾಕಿನಲ್ಲಿ ಮನೆ ಬಿದ್ದು ಓರ್ವ ಮಹಿಳೆ ಸಾವನ್ನಪ್ಪಿದ್ದಾರೆ. ಬಹಳ ಹಳೆಯ ಮನೆಯಲ್ಲಿ ಅವರು ವಾಸವಿದ್ದರು. ಅವರ ಕುಟುಂಬಕ್ಕೆ ನಾನು ಸಾಂತ್ವನ ಹೇಳುತ್ತೇನೆ. ಮೃತರಿಗೆ ಪರಿಹಾರಧನ ತಕ್ಷಣ ನೀಡಲಾಗುವುದು. ಗಾಯಾಳುಗಳು ಏಳು ದಿನ ಆಸ್ಪತ್ರೆಯಲ್ಲಿ ದಾಖಲಾದರೆ ಅವರಿಗೂ ಪರಿಹಾರ ವಿತರಿಸುವಂತೆ ಅಲ್ಲಿನ ತಹಶಿಲ್ದಾರ್ ಅವರಿಗೆ ಸೂಚಿಸಿದ್ದೇನೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

## ರೇಬಿಸ್ ಲಸಿಕೆಗಳ ಕೊರತೆಯಾಗದಂತೆ ಎಚ್ಚರ ವಹಿಸಿ: ರಾಹುಲ್ ಶಿಂಧೆ



**ಬೆಳಗಾವಿ,** : ನಾಯಿ ಕಡಿತದಿಂದಾಗುವ ಮರಣಗಳನ್ನು ತಡೆಗಟ್ಟಲು ರೇಬಿಸ್ ಲಸಿಕೆಗಳನ್ನು (ಎ.ಆರ್ವಿ) ಜಿಲ್ಲೆಯ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ತುರ್ತು ಚಿಕಿತ್ಸೆ ನೀಡಲು ದಾಸ್ತಾನು ಇಟ್ಟುಕೊಂಡು ನಾಯಿ ಕಡಿತದಿಂದ ಮರಣ ಆಗದಂತೆ ಮುಂಜಾಗೃತ ಕ್ರಮ ತೆಗೆದುಕೊಳ್ಳಲು ಆರೋಗ್ಯ ಅಧಿಕಾರಿಗಳಿಗೆ ಜಿಪಂ ಸಿ.ಇ.ಓ ರಾಹುಲ್ ಶಿಂಧೆ ಸೂಚಿಸಿದರು.

ನಗರದ ಜಿ.ಪಂ ಸಭಾಂಗಣದಲ್ಲಿ ಸೋಮವಾರ (ಆ.18) ನಡೆದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿದ ಅವರು ಮಾತನಾಡಿ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಭೌತಿಕ & ಚಿಟಂ; ಆರ್ಥಿಕ ಪ್ರಗತಿ ಪರಿಶೀಲನೆ ಮಾಡಿ ಕುಂಠಿತ ಪ್ರಗತಿ ಹೊಂದಿರುವ ತಾಲ್ಲೂಕಾ ಆರೋಗ್ಯ ಅಧಿಕಾರಿಗಳಿಗೆ ಪ್ರಗತಿ ಸಾಧಿಸಿ ವರದಿಯನ್ನು ಸಲ್ಲಿಸಲು ತಿಳಿಸಿದರು.

ಸಮುದಾಯ ಆರೋಗ್ಯ ಕೇಂದ್ರಗಳ ವಿಜನ್ ಸೆಂಟರ್‌ಗಳಲ್ಲಿ ಅರ್ಹ ಫಲಾನುಭವಿಗಳಿಗೆ ಕಣ್ಣಿನ ಶಸ್ತ್ರ ಚಿಕಿತ್ಸೆ ಮಾಡಿಕೊಳ್ಳಲು ಕಣ್ಣಿನ ತಪಾಸಣಾ ಶಿಭಿರಗಳನ್ನು ಏರ್ಪಡಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು. ರಾಷ್ಟ್ರೀಯ ಓರಲ್ ಹೆಲ್ತ್ ಕಾರ್ಯಕ್ರಮದಡಿ ಜಿಲ್ಲೆಯ ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಸಗಿ ದಂತ ಮಾಹಾ ವಿದ್ಯಾಲಯ ಕಾಲೇಜಿನ ಸಹಯೋಗದೊಂದಿಗೆ ಮೊಬೈಲ್ ಡೆಂಟಲ್ ವ್ಯಾನಗಳನ್ನು ಬಳಿಸಿಕೊಂಡು ದಂತ ಚಿಕಿತ್ಸಾ ಶಿಭಿರಗಳನ್ನು ಹಮ್ಮಿಕೊಳ್ಳುವಂತೆ ಆರೋಗ್ಯ ಅಧಿಕಾರಿಗಳಿಗೆ ತಿಳಿಸಿದರು.

ಮಳೆಯಿಂದಾಗ ನೀರಿಗೆ ಸಂಬಂಧಿಸಿದ ಕಾಯಿಲೆಗಳು ಹೆಚ್ಚುತ್ತಿರುವುದರಿಂದ ಸಾರ್ವಜನಿಕರಿಗೆ ಕುದಿಸಿ ಆರಿಸಿ ನೀರು ಕುಡಿಯುವಂತೆ ಸಾರ್ವಜನಿಕರಿಗೆ ಮನವರಿಕೆ ಮಾಡಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು, ರಾಷ್ಟ್ರೀಯ ಲಸಿಕಾ ಕಾರ್ಯಕ್ರಮದಡಿ 0-5 ವರ್ಷದೊಳಗಿನ ಮಕ್ಕಳಿಗೆ ಲಸಿಕಾ ವೇಳಾಪಟ್ಟಿ ಪ್ರಕಾರ ಲಸಿಕೆಗಳನ್ನು ನೀಡಿ ಪ್ರಗತಿ ಕುಂಠಿತವಾಗದಂತೆ ಪ್ರಗತಿ ಸಾಧಿಸಲು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿ.ಪಂ ಉಪಕಾರ್ಯದರ್ಶಿ ಬಸವರಾಜ ಅಡವಿಮಠ, ಮುಖ್ಯ ಯೋಜನಾಧಿಕಾರಿ ಗಂಗಾಧರ ದಿವಟರ್, ಜಿಲ್ಲಾಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಐ.ಪಿ ಗಡಾದ, ಚಿಕ್ಕೋಡಿ ಅಪರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎಸ್.ಎಸ್. ಗಡೇದ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಕೇಶವ, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ. ಚಾಂದನಿ ದೇವಡಿ, ಜಿಲ್ಲಾ ಆರ್ಸಿ.ಹೆಚ್ ಅಧಿಕಾರಿ ಡಾ. ಎಸ್ ಎಸ್ ಸಾಯನ್ನವರ, ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ.ಗೀತಾ ಕಾಂಬಳೆ, ಜಿಲ್ಲಾ ರೋಗವಾಹಕ ಆಶ್ರೀತರೋಗಗಳ ನಿಯಂತ್ರಣಾ ಅಧಿಕಾರಿ ಡಾ.ವಿವೇಕ ಹೊನ್ನಳ್ಳಿ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ಸಂಜಯ ದೊಡಮನಿ, ಹಾಗೂ ತಾಲೂಕಾ ಆರೋಗ್ಯ ಅಧಿಕಾರಿಗಳು ಮತ್ತು ಸಾರ್ವಜನಿಕ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿಗಳು ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಧರ್ಮಸ್ಥಳ ಪ್ರಕರಣದಲ್ಲಿ ಶೀಘ್ರವೇ ಸತ್ಯಾಸತ್ಯತೆ ಹೊರಬರಲಿದೆ : ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್



ಬೆಂಗಳೂರು : ಧರ್ಮಸ್ಥಳದ ಹೆಸರಿಗೆ ಕಳಂಕ ಬರಬಾರದು ಎಂಬ ಕಾರಣಕ್ಕೆ ಸರಕಾರ ಎಸ್‌ಐಟಿ ರಚನೆ ಮಾಡಿದೆ. ಈ ಕುರಿತು ಶೀಘ್ರವೇ ಸತ್ಯಾಸತ್ಯತೆ ತಿಳಿಯಲಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಪಟ್ಟಂತೆ ಈಗಾಗಲೇ ಗೃಹ ಸಚಿವರು ಉತ್ತರವನ್ನು ಕೊಟ್ಟಿದ್ದಾರೆ. ಅದಷ್ಟು ಬೇಗ ಸತ್ಯ ಹೊರಬೀಳಲಿದೆ ಎಂದರು.

ಸೌಹಾರ್ದಯುತ ಸಭೆ :

ನಿನ್ನೆ ಶ್ರಾವಣ ಸೋಮವಾರ ಆದ ಕಾರಣ ಎಲ್ಲಾ ವೀರಶೈವ-ಲಿಂಗಾಯತ ಸಮುದಾಯದ ಸಚಿವರು, ಶಾಸಕರು, ವಿಧಾನಪರಿಷತ್ ಸದಸ್ಯರು ಪೂಜೆಯಲ್ಲಿ ಪಾಲ್ಗೊಂಡು ಊಟಕ್ಕೆ ಸೇರಿದ್ದೆವು. ಇದೊಂದು ಸೌಹಾರ್ದಯುತ ಸಭೆ ಆಗಿತ್ತು. ಕೇವಲ ಜಾತಿಗಣತಿ ವಿಷಯ ಅಲ್ಲ, ನಮ್ಮ ಸಮಾಜದ ಅಭಿವೃದ್ಧಿ ಬಗ್ಗೆಯೂ ಚರ್ಚೆ ನಡೆಸಲಾಯಿತು ಎಂದು ತಿಳಿಸಿದರು.

## ಕೃಷ್ಣಾ ಜಲಾನಯನ ಪ್ರದೇಶದಲ್ಲಿ ಬಾರಿ ಮಳೆ ; ಕೃಷ್ಣಾ ನದಿ ನೀರಿನಲ್ಲಿ ಹೆಚ್ಚಳ

**ರಬಕವಿ-ಬನಹಟ್ಟಿ,** : ಮಹಾರಷ್ಟ್ರದ ಕೃಷ್ಣಾ ಜಲಾನಯನ ಪ್ರದೇಶಗಳಲ್ಲಿ ಬಾರಿ ಮಳೆ ಮತ್ತು ಕೋಯ್ನಾ ಜಲಾಶಯದಿಂದ ನೀರು ಹರಿದು ಬರುತ್ತಿರುವುದರಿಂದ ಸಮೀಪದ ಕೃಷ್ಣಾನದಿ ತುಂಬಿ ಹರಿಯುತ್ತಿದೆ.

ಮಹಾರಾಷ್ಟ್ರದ ರಾಜಾಪೂರ ಜಲಾಶಯದಿಂದ ನೀರು ಭಾರಿ ಪ್ರಮಾಣದಲ್ಲಿ ಕೃಷ್ಣಾ ನದಿಗೆ ಹರಿದು ಬರುತ್ತಿದ್ದು, ಮತ್ತೊಮ್ಮೆ ಪ್ರವಾಹ ಬೀತಿ ಎದುರಾಗಿದೆ.

ಮಹಾರಾಷ್ಟ್ರದ ಕೃಷ್ಣಾ ಜಲಾನಯನ ಪ್ರದೇಶಗಳಾದ ಕೊಯ್ನಾ 192 ಮಿ.ಮೀ., ನೌಜಾ 316 ಮಿ.ಮೀ., ಮಹಾಬಳೇಶ್ವರ 151 ಮಿ.ಮೀ., ಮಳೆಯಾಗಿರುವುದರಿಂದ ಹಿಪ್ಪರಗಿ ಜಲಾಶಯಕ್ಕೆ ಅಪಾರ ಪ್ರಮಾಣದ ನೀರು ಹರೀದು ಬರುತ್ತಿದೆ. ಉತ್ತಮ ಮಳೆಯಾಗುತ್ತಿರುವುದರಿಂದ ಇಂದು ಹಿಪ್ಪರಗಿ ಜಲಾಶಯಕ್ಕೆ ಒಟ್ಟು 75000 ಕ್ಯೂಸೆಕ್ ನೀರು ಹರಿದು ಬರುತ್ತಿದ್ದು, 24250 ಕ್ಯೂಸೆಕ್ಸ್ ನೀರನ್ನು ಮುಂದೆ ಹರಿ ಬೀಡಲಾಗುತ್ತಿದೆ. 6 ಟಿಎಂಸಿ ಸಾಮರ್ಥ್ಯದ ಹಿಪ್ಪರಗಿ ಜಲಾಶಯದಲ್ಲಿ ನೀರಿನ ಮಟ್ಟ 521.76 ಮೀ. ಇದೆ. ಮುಂದಿನ ನಾಲ್ಕು ದಿನಗಳಕಾಲ ಬಾರಿ ಮಳೆಯ ಮುನ್ಸೂಚನೆ ಬಂದಿದ್ದು, ಸದ್ಯಕ್ಕೆ ಕೃಷ್ಣಾ ನದಿ ತೀರದ ಜನರಿಗೆ ಯವುದೇ ರೀತಿ ಆತಂಕ ಇಲ್ಲ. ಆದರೆ ನದಿಯ ಹರಿವು ಹೆಚ್ಚಾಗಿರುವುದರಿಂದ ಯಾರು ಸಹ ನದಿ ಪಾತ್ರದ ಕಡೆ ತೆರಳಬಾರದು. ಈ ಕುರಿತು ಹೆಚ್ಚಿನ ಗಮನ ನೀಡಬೇಕು ಎಂದು ಜಮಖಂಡಿ ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ ತಿಳಿಸಿದ್ದಾರೆ.



## ನಿರಂತರ ಮಳೆ ; ಜನಜೀವನ ಅಸ್ತವ್ಯಸ್ತ : ತುಂಬಿ ಹರಿಯುತ್ತಿರುವ ಹಳ್ಳ



**ರಬಕವಿ-ಬನಹಟ್ಟಿ,** : ಕಳೆದ ಮೂರನಾಲ್ಕು ದಿನಗಳಿಂದ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ತಾಲೂಕಿನ ಜನಜೀವನ ಅಸ್ತವ್ಯಸ್ತಗೊಂಡಿದೆ. ಗ್ರಾಮೀಣ ಪ್ರದೇಶ ಸೇರಿದಂತೆ ನಗರದಲ್ಲಿ ನಿರಂತರವಾಗಿ ಮಳೆ ಸುರಿಯುತ್ತಿದೆ. ಸಮೀಪದ ಕೆರೆ, ಹಳ್ಳಗಳು ತುಂಬಿ ಹರಿಯುತ್ತಿವೆ. ಇಂದು ಮಂಗಳವಾರ ಸಂತೆಯ ದಿನವೂ ಕೂಡಾ ನಿಂತರವಾಗಿ ಮಳೆ ಸುರಿಯುತ್ತಿರುವುದಿಂದ ತರಕಾರಿ ವ್ಯಾಪಾರಸ್ತರಿಗೆ ತುಂಬಾ ತೊಂದರೆಯುಂಟಾಯಿತು. ಮಾರುಕಟ್ಟೆಗೆ ಬರುವ ಗ್ರಾಮೀಣ ಜನರು ಕೂಡಾ ತಾವು ಬೆಳೆದ ಬೆಳೆಯನ್ನು ತರಲು ಹಿಂದೇಟು ಹಾಕುತ್ತಿದ್ದಾರೆ.

ತಾಲೂಕಿನ ಗ್ರಾಮೀಣ ಪ್ರದೇಶದಲ್ಲಿ ಮಳೆ ಅಬ್ಬರ ಜೋರಾಗಿರುವ ಕಾರಣ ಕೃಷಿ ಚಟುವಟಿಕೆ ಸೇರಿದಂತೆ ಎಲ್ಲ ತರಹದ ಕೆಲಸ ಕಾರ್ಯಗಳುಗೆ ಅಡಚಣೆಯುಂಟಾಗಿದೆ.

ಸತತ ಮಳೆಯಿಂದಾಗಿ ಹಲವು ಕಡೆಗಳಲ್ಲಿ ಮನೆಗಳು ಸೋರುತ್ತಿದ್ದು ಜನರು ಆತಂಕದಲ್ಲಿಯೇ ದಿನದೂಡುವಂತಾಗಿದೆ. ತಗ್ಗು ಪ್ರದೇಶಗಳು ನೀರಿನಿಂದ ಆವೃತವಾಗಿವೆ. ನಗರ ಪ್ರದೇಶದಲ್ಲಿ ಗಟಾರುಗಳು ತುಂಬಿ ಹರಿದು ಸಾರ್ವಜನಿಕರು ಓಡಾಡದಂತಹ ಸ್ಥಿತಿ ನಿರ್ಮಾಣವಾಗಿದೆ.

## ರಾಜ್ಯಾದ್ಯಂತ ಅಕ್ರಮ ಮರಳುಗಾರಿಕೆ ತಡೆಗಟ್ಟಲು ಬಿಗಿ ಕ್ರಮ : ಸಚಿವ ಚಲುವರಾಯಸ್ವಾಮಿ

ಬೆಂಗಳೂರು, : ರಾಜ್ಯಾದ್ಯಂತ ಅಕ್ರಮ ಮರಳುಗಾರಿಕೆ ತಡೆಗಟ್ಟಲು ಜಿಪಿಎಸ್ ಅಳವಡಿಕೆ ಹಾಗೂ ಸ್ಕ್ವಾಡ್ ತಂಡವನ್ನು ಬಿಗಿಗೊಳಿಸಲಾಗುವುದು ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ.

ಮಂಗಳವಾರ ವಿಧಾನಪರಿಷತ್ತಿನ ಪ್ರಶ್ನೋತ್ತರ ಅವಧಿಯಲ್ಲಿ ಬಿಜೆಪಿ ಸದಸ್ಯೆ ಹೇಮಾಲತ ನಾಯಕ್ ಅವರ ಪ್ರಶ್ನೆಗೆ ತೋಟಗಾರಿಕೆ ಸಚಿವರ ಪರವಾಗಿ ಉತ್ತರಿಸಿದ ಎನ್.ಚಲುವರಾಯಸ್ವಾಮಿ, ಅಕ್ರಮ ಮರಳುಗಾರಿಕೆ ತಡೆಗಟ್ಟುವುದು ಸರಕಾರದ ಮೊದಲ ಆದ್ಯತೆ ಎಂದರು.

ಮರಳುಗಾರಿಕೆ ನಡೆಯುವ ಕಡೆಗಳಲ್ಲಿ ಜಿಪಿಎಸ್ ಅಳವಡಿಕೆ ಮತ್ತು ಈಗಿರುವ ಸ್ಕ್ವಾಡ್ ತಂಡವನ್ನು ಮತ್ತಷ್ಟು ಬಲಪಡಿಸಲಾಗುವುದು. ಅಕ್ರಮ ಮರಳುಗಾರಿಕೆ ತಡೆಗಟ್ಟಲು ಜಿಲ್ಲಾಧಿಕಾರಿಗಳು, ತಹಸೀಲ್ದಾರ್ ಸೇರಿದಂತೆ ಮತ್ತಿತರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದರು.



ರಾಜ್ಯ ಸರಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗದಂತೆ ಬಿಗಿಯಾದ ಕಾನೂನು ಕ್ರಮಗಳನ್ನು ತೆಗೆದುಕೊಂಡಿದ್ದೇವೆ. ಸರಕಾರಕ್ಕೆ ಬರಬೇಕಾದ ರಾಜಸ್ವವನ್ನು ಸಂಗ್ರಹಿಸಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಸೂಚಿಸಲಾಗಿದೆ. ಎಲ್ಲದರೂ ನಿರ್ದಿಷ್ಟ ಪ್ರಕರಣಗಳಿದ್ದರೆ ಸರಕಾರ ಕಾನೂನು ಕ್ರಮ ತೆಗೆದುಕೊಳ್ಳಲಿದೆ ಎಂದು ಎನ್.ಚಲುವರಾಯಸ್ವಾಮಿ ಆಶ್ವಾಸನೆ ನೀಡಿದರು.

## ಕಟ್ಟಡದ ಸ್ವಾಧೀನ ಪತ್ರ ಇಲ್ಲದೇ ಇದ್ದರೆ ವಿದ್ಯುತ್ ಸಂಪರ್ಕ ಕಲ್ಪಿಸಲು ಅವಕಾಶವಿಲ್ಲ: ಸಚಿವ ಕೆ.ಜೆ.ಜಾರ್ಜ್

**ಬೆಂಗಳೂರು:** ಕಟ್ಟಡದ ಸ್ವಾಧೀನ ಪತ್ರ ಇಲ್ಲದೇ ಇದ್ದರೆ ವಿದ್ಯುತ್ ಸಂಪರ್ಕ ಕಲ್ಪಿಸಲು ಅವಕಾಶವಿಲ್ಲ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ವಿಧಾನಸಭೆಯಲ್ಲಿ ತಿಳಿಸಿದ್ದಾರೆ.

ಸದನದಲ್ಲಿ ಬಿಜೆಪಿ ಶಾಸಕ ಡಾ.ಸಿ.ಎನ್.ಅಶ್ವತ್ಥನಾರಾಯಣ ಮಾಡಿದ ಆಕ್ಷೇಪಕ್ಕೆ ಮಧ್ಯಪ್ರವೇಶಿಸಿ ಮಾತನಾಡಿದ ಸಚಿವ ಜಾರ್ಜ್ ಅವರು, ಸ್ವಾಧೀನ ಪತ್ರವಿಲ್ಲದೆ ವಿದ್ಯುತ್ ಸಂಪರ್ಕ ಕಲ್ಪಿಸಬಾರದು ಎಂದು ಸುಪ್ರೀಂಕೋರ್ಟ್ ಆದೇಶವಿದೆ. ಅಲ್ಲದೆ ಕಳೆದ ಮಾ.13 ರಂದು ಈ ಸಂಬಂಧ ಕೆಇಆರ್‌ಸಿ ಆದೇಶವಿದೆ. ಕಾಯ್ದೆಗೆ ತಿದ್ದುಪಡಿಯಾಗದ ಹೊರತು ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದಿಲ್ಲ ಎಂದು ಹೇಳಿದರು.

ಈ ವೇಳೆ ಮಧ್ಯಪ್ರವೇಶಿಸಿ ಮಾತನಾಡಿದ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು, ವಿದ್ಯುತ್ ಸಂಪರ್ಕಕ್ಕಾಗಿ 4 ಲಕ್ಷ ಮಂದಿ ಅರ್ಜಿ ಸಲ್ಲಿಸಿದ್ದಾರೆ. ಸ್ವಾಧೀನ ಪತ್ರ ಹಾಗೂ ಕಟ್ಟಡ ಮುಕ್ತಾಯದ ಪ್ರಮಾಣ ಪತ್ರವಿಲ್ಲದೆ ವಿದ್ಯುತ್ ಸಂಪರ್ಕ ಕಲ್ಪಿಸಬಹುದೆಂಬ ಸುಪ್ರೀಂಕೋರ್ಟ್‌ನ ಆದೇಶವಿದ್ದರೆ ನೀಡಲಿ. ಇಂದೇ ಸರ್ಕಾರ ಆದೇಶ ಹೊರಡಿಸಿ ಪ್ರತಿಯೊಬ್ಬರಿಗೂ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು ಎಂದರು.

ಈ ಸಂಬಂಧ ವಿಸ್ತೃತವಾಗಿ ಮಾಹಿತಿ ನೀಡುವ ಭರವಸೆ ನೀಡಿದ ಅವರು, 4 ಲಕ್ಷ ಅರ್ಜಿದಾರರಲ್ಲಿ ಸುಪ್ರೀಂ ಕೋರ್ಟ್ ಆದೇಶಕ್ಕೂ ಮುನ್ನ ಹಣ ಪಾವತಿಸಿದವರು ಇದ್ದಾರೆ. ಗಮನ ಸೆಳೆಯುವ ಸೂಚನೆ ವಿಚಾರದಲ್ಲಿ ಈ ಬಗ್ಗೆ ಸಮಗ್ರ ಉತ್ತರ ನೀಡುವುದಾಗಿ ಭರವಸೆ ನೀಡಿದರು. ಇದಕ್ಕೂ ಮುನ್ನ ಮಾತನಾಡಿದ ಶಾಸಕ ಅಶ್ವತ್ಥನಾರಾಯಣ, ಕೆಇಆರ್‌ಸಿ ಆದೇಶವಿಲ್ಲದಿದ್ದರೂ ವಿದ್ಯುತ್ ಸಂಪರ್ಕ ಕೊಡುತ್ತಿಲ್ಲ. ಅಕ್ರಮ-ಸಕ್ರಮ ನಿಯಮಕ್ಕೆ ಸಂಬಂಧಿಸಿದ ಸುಪ್ರೀಂ ಕೋರ್ಟ್‌ನ ಮಧ್ಯಂತರ ಆದೇಶದಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಬಹುದು ಎಂದು ಹೇಳಿದೆ. ಶೇ.15 ರಷ್ಟು ವಿನಾಯಿತಿ ಕೊಟ್ಟರೆ ಉಪಯೋಗವಿಲ್ಲ. ಕೊಡುವುದಾದರೆ ಕೆಲವರಿಗೆ ಮಾತ್ರ ಏಕೆ ಕೊಡಬೇಕು. ಎಲ್ಲರಿಗೂ ವಿನಾಯಿತಿ ಕೊಡಿ. ದಂಡವಿಲ್ಲದೆ ವಿನಾಯಿತಿ ನೀಡಿ. 1 ಲಕ್ಷ ರೂ. ಕೋಟಿ ಸಂಗ್ರಹಿಸುವ ಉದ್ದೇಶವಿದೆ ಎಂದು ದೂರಿದರು.

ಸಾಲ ಮಾಡಿ ಮನೆ ಕಟ್ಟಿ ವಿದ್ಯುತ್ ಸಂಪರ್ಕಕ್ಕಾಗಿ ಕಾಯುತ್ತಿದ್ದಾರೆ. ಅವರಿಗೊಂದು ಪರಿಹಾರ ಒದಗಿಸಿ ಎಂದು ಹಲವು ಬಿಜೆಪಿ ಶಾಸಕರು ಆಗ್ರಹಿಸಿದರು. ಈ ವಿಚಾರದಲ್ಲಿ ಬಿಜೆಪಿ ಮತ್ತು ಆಡಳಿತ ಪಕ್ಷದ ಶಾಸಕರ ನಡುವೆ ಮಾತಿನ ವಾಗ್ವಾದ ಸಹ ನಡೆಯಿತು.

ಇದಕ್ಕೂ ಮುನ್ನ 2025 ನೇ ಸಾಲಿನ ಕರ್ನಾಟಕ ನಗರ ಪಾಲಿಕೆಗಳ (ತಿದ್ದುಪಡಿ) ವಿಧೇಯಕವನ್ನು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಸದನದಲ್ಲಿ ಮಂಡಿಸಿ ಪರ್ಯಾಲೋಚಿಸಬೇಕೆಂದು ಕೋರಿದರು. ಇದರ ಬಗ್ಗೆ ಹಲವಾರು ಶಾಸಕರು ಸಲಹೆ, ಸೂಚನೆಗಳನ್ನು ನೀಡಿದರು. ನಂತರ ಈ ವಿಧೇಯಕವನ್ನು ಮತಕ್ಕೆ ಹಾಕಿದಾಗ ಧ್ವನಿಮತದ ಮೂಲಕ ಅಂಗೀಕಾರ ದೊರೆಯಿತು.

## ಕಂಪ್ಲಿ ಸೇತುವೆ ಮುಳುಗಡೆ; ಬಳ್ಳಾರಿ - ಗಂಗಾವತಿ ಸಂಪರ್ಕ ಸ್ಥಗಿತ

**ಬಳ್ಳಾರಿ:** ಮಲೆನಾಡು ಭಾಗದಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ತುಂಗಭದ್ರಾ ಜಲಾಶಯದಿಂದ 1 ಲಕ್ಷ ಕ್ಯೂಸೆಕ್ ನೀರನ್ನು ಬಿಡುಗಡೆ ಮಾಡಲಾಗಿದೆ. ಪರಿಣಾಮ ಕಂಪ್ಲಿ ಸೇತುವೆ ಮುಳುಗಡೆಯಾಗಿದ್ದು, ಬಳ್ಳಾರಿ - ಗಂಗಾವತಿ ಸಂಪರ್ಕ ಸ್ಥಗಿತಗೊಂಡಿದೆ.

ಮಲೆನಾಡು ಪ್ರದೇಶ ಸೇರಿದಂತೆ ತುಂಗಭದ್ರಾ ಜಲಾನಯನ ಪ್ರದೇಶದಲ್ಲಿ ಉತ್ತಮ ಮಳೆಯಾಗುತ್ತಿದೆ. ಮಳೆ ಪ್ರಮಾಣ ಹೆಚ್ಚಾದ ಹಿನ್ನೆಲೆಯಲ್ಲಿ ತುಂಗಭದ್ರಾ ಜಲಾಶಯಕ್ಕೆ ಒಳಹರಿವು ಕೂಡ ಗಣನೀಯವಾಗಿ ಹೆಚ್ಚಾಗಿದೆ. ಸದ್ಯ 1,07,500 ಕ್ಯೂಸೆಕ್ ನೀರಿನ ಒಳ ಹರಿವು ಇದೆ. ಜಲಾಶಯದ ಸುರಕ್ಷತಾ ದೃಷ್ಟಿಯಿಂದ 26 ಗೇಟ್‌ಗಳ ಮೂಲಕ 1,06,548 ಕ್ಯೂಸೆಕ್ ನೀರು ರಿಲೀಸ್ ಮಾಡಲಾಗಿದೆ.

ಏಕಾಏಕಿ ಅಪಾರ ಪ್ರಮಾಣದ ನೀರು ನದಿಗೆ ರಿಲೀಸ್ ಮಾಡಿರುವುದರಿಂದ ಬಳ್ಳಾರಿ ಜಿಲ್ಲೆಯ ಕಂಪ್ಲಿ ಸೇತುವೆ ಸಂಪೂರ್ಣವಾಗಿ ಮುಳುಗಡೆಯಾಗಿದೆ. ಪರಿಣಾಮ ಬಳ್ಳಾರಿ - ಗಂಗಾವತಿ ಸಂಪರ್ಕ ಕಡಿತವಾಗಿದ್ದು, ವಾಹನ ಸಂಚಾರವನ್ನು ನಿರ್ಬಂಧಿಸಲಾಗಿದೆ. ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಬ್ಯಾರಿಕೇಡ್ ಅಳವಡಿಸಿ, ಪೊಲೀಸರ ನಿಯೋಜನೆ ಮಾಡಲಾಗಿದೆ. ಅಲ್ಲದೇ ನದಿಗೆ ಅಪಾರ ಪ್ರಮಾಣದ ನೀರು ಬಿಡುಗಡೆ ಮಾಡಿರುವುದರಿಂದ ನದಿ ಪಾತ್ರದ ಗ್ರಾಮಗಳ ಜನರು ನದಿ ತೀರಕ್ಕೆ ಹೋಗದಂತೆ ತುಂಗಭದ್ರಾ ಜಲಾಶಯ ಬೋರ್ಡ್ ಎಚ್ಚರಿಕೆ ನೀಡಿದೆ. ಕಲಬುರಗಿ ಜಿಲ್ಲೆಯಲ್ಲಿಯೂ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದ ನದಿ, ಕೆರೆ - ಕಟ್ಟೆಗಳು ತುಂಬಿ ಹರಿಯುತ್ತಿವೆ. ಬೆಣ್ಣೆತೋರಾ ಜಲಾಶಯ ಶೇ.85ರಷ್ಟು ಭರ್ತಿಯಾದ ಹಿನ್ನೆಲೆ ಅಪಾರ ಪ್ರಮಾಣದ ನೀರು ಬಿಡುಗಡೆ ಮಾಡಲಾಗಿದ್ದು, ಹೆಬ್ಬಾಳ ಗ್ರಾಮಸ್ಥರಿಗೆ ಪ್ರವಾಹ ಭೀತಿ ಶುರುವಾಗಿದೆ.

ಬೆಣ್ಣೆತೋರಾ ಜಲಾಶಯ ಒಟ್ಟು 5.297 ಟಿಎಂಸಿ ನೀರು ಶೇಖರಣೆ ಸಾಮರ್ಥ್ಯ ಹೊಂದಿದೆ. ನಿರಂತರ ಮಳೆಯಾಗುತ್ತಿರುವ ಕಾರಣ ಸದ್ಯ 4.487 ಟಿಎಂಸಿ (ಶೇ.85) ನೀರು ಶೇಖರಣೆ ಆಗಿದೆ. 1,600 ಕ್ಯೂಸೆಕ್ ನೀರು ಒಳಹರಿವಿದ್ದು ಮುನ್ನೆಚ್ಚರಿಕೆಯಾಗಿ 3,050 ಕ್ಯೂಸೆಕ್ ನೀರು ಹೊರಗೆ ಹರಿ ಬಿಡಲಾಗಿದೆ ಎಂದು ಕೆಎನ್‌ಎನ್‌ಎಲ್ ಐಪಿಸಿ ವೃತ್ತದ ಸುಪ್ರೀಟೆಂಡಿಂಗ್ ಇಂಜಿನಿಯರ್ ಮಾಹಿತಿ ನೀಡಿದ್ದಾರೆ.

ರಾಜ್ಯದ ಕರಾವಳಿ, ಮಲೆನಾಡು ಜಿಲ್ಲೆಗಳು ಸೇರಿದಂತೆ ಹಲವು ಭಾಗಗಳಲ್ಲಿ ಇನ್ನು ಐದು ದಿನ ಭಾರೀ ಮಳೆಯಾಗಲಿದೆ ಎಂದು ಮುನ್ಸೂಚನೆ ನೀಡಿರುವ ಹವಾಮಾನ ಇಲಾಖೆ, ಐದು ಜಿಲ್ಲೆಗಳಲ್ಲಿ ರೆಡ್‌ಅಲರ್ಟ್ ಘೋಷಣೆ ಮಾಡಿದೆ. ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಹಾಸನ, ಶಿವಮೊಗ್ಗ, ಚಿಕ್ಕಮಗಳೂರು ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಗಾಳಿಯ ವೇಗ ಗಂಟೆಗೆ 40-50ಕಿ.ಮೀ ಬೀಸಲಿದ್ದು, ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ. ಬೆಳಗಾವಿ, ಧಾರವಾಡ, ಹಾವೇರಿ, ಬೀದರ್, ಕಲಬುರಗಿ, ಯಾದಗಿರಿ, ವಿಜಯಪುರ, ರಾಯಚೂರು, ಗದಗ, ಬಾಗಲಕೋಟೆ, ಕೊಪ್ಪಳ ಜಿಲ್ಲೆಗಳಿಗೆ ಎರಡು ದಿನ ಆರೆಂಜ್ ಅಲರ್ಟ್ ಘೋಷಿಸಲಾಗಿದೆ.



# ಶಾಂತಿ- ಸೌಹಾರ್ದತೆಯ ಹಬ್ಬ ಆಚರಣೆಗೆ ಎಲ್ಲರೂ ಸಹಕರಿಸಬೇಕು: ಜಿಲ್ಲಾಧಿಕಾರಿ

**ಬೆಳಗಾವಿ,** :ಗಣೇಶ ಹಬ್ಬ ಅದ್ದೂರಿ ಆಚರಣೆಯಲ್ಲಿ ಬೆಳಗಾವಿ ಜಿಲ್ಲೆ ಮುಂಚೂಣಿಯಲ್ಲಿದೆ. ಪ್ರತಿ ವರ್ಷದಂತೆ ಗಣೇಶ ಹಬ್ಬವನ್ನು ಅದ್ದೂರಿಯಾಗಿ ಆಚರಿಸೋಣ. ಈ ನಿಟ್ಟಿನಲ್ಲಿ ಶಾಂತಿ, ಸೌಹಾರ್ದತೆಯ ಗಣೇಶ ಹಬ್ಬ ಆಚರಣೆಗೆ ಪ್ರತಿಯೊಬ್ಬರೂ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ತಿಳಿಸಿದರು.



ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಸೋಮವಾರ (ಆ.16) ನಡೆದ ಗಣೇಶ ಉತ್ಸವದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗಣೇಶ ಹಬ್ಬದ ಆಚರಣೆಯ ನೆಪದಲ್ಲಿ ಕಾನೂನುಬಾಹಿರ ಚಟುವಟಿಕೆಗಳು ನಡೆಯದಂತೆ ಮುನ್ನೆಚ್ಚರಿಕೆ ವಹಿಸಬೇಕು. ಪರಿಸರ ಹಾಳಾಗದಂತೆ ಮಣ್ಣಿನ ಮೂರ್ತಿಯ ಗಣಪತಿಗಳನ್ನು ಸ್ಥಾಪಿಸುವುದು ಅವಶ್ಯ, ಮೂರ್ತಿ ಸ್ಥಾಪನೆಯ ಮುನ್ನ ಅನುಮತಿ ಪಡೆಯುವದು ಕಡ್ಡಾಯವಾಗಿರುತ್ತದೆ ಎಂದು ತಿಳಿಸಿದರು.

ಗಣೇಶ ವಿಸರ್ಜನೆ ಸಂದರ್ಭದಲ್ಲಿ ಅನಾನೂಕೂಲವಾಗದಂತೆ ವಿಸರ್ಜನಾ ಮಾರ್ಗದಲ್ಲಿನ ಅಪಾಯಕಾರಿ ಗಿಡ ಮರಗಳನ್ನು, ವಿದ್ಯುತ್ ತಂತಿ, ಕೇಬಲ್‌ಗಳ ತೆರವಿಗೆ ಸಂಬಂಧಿಸಿದಂತೆ ಇಲಾಖೆಗಳು ಮಹಾನಗರ ಪಾಲಿಕೆಯೊಂದಿಗೆ ಸಮನ್ವಯ ಸಾಧಿಸಿ ತೆರವಿಗೆ ಕ್ರಮ ವಹಿಸಬೇಕು. ಅಗ್ನಿಶಾಮಕ ಇಲಾಖೆ ಗಣೇಶ ಹಬ್ಬದ ಸಂದರ್ಭದಲ್ಲಿ ದಿನದ ಇಪ್ಪತ್ತನಾಲ್ಕು ಗಂಟೆಯು ಕಾರ್ಯಪ್ರವೃತ್ತರಾಗುವಂತೆ ಸನ್ನಧವಾಗಿರಲು ಸೂಚಿಸಿದ ಅವರು ಹೆಸ್ಕಾಂ ವತಿಯಿಂದ ನಗರದ ಎಲ್ಲ ಗಣೇಶ ಮಂಟಪಗಳಲ್ಲಿ ಸಿಬ್ಬಂದಿಗಳನ್ನು ನಿಯೋಜಿಸಲು ತಿಳಿಸಿದರು.

ಗಣೇಶ ವಿಸರ್ಜನೆ ಸಮಯದಲ್ಲಿ ಸಿಡಿಮದ್ದುಗಳ ಬಳಕೆಯನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ. ಬ್ಯಾನರ್, ಬಂಟಿಂಗ್ ಅಳವಡಿಕೆಗೆ ಅನುಮತಿಯು ಕಡ್ಡಾಯವಾಗಿರುತ್ತದೆ. ಗಣೇಶ ವಿಸರ್ಜನಾ ಸ್ಥಳಗಳಲ್ಲಿ ನುರಿತ ಈಜುಗಾರರನ್ನು ನೇಮಿಸಬೇಕು. ಜೊತೆಗೆ ಗಣೇಶೋತ್ಸವಕ್ಕಾಗಿ ಆಗಮಿಸುವ ಸಾರ್ವಜನಿಕರ ಅನುಕೂಲಕ್ಕಾಗಿ ಸಂಚಾರಿ ಶೌಚಾಲಯ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮಾಡುವಂತೆ ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದ ಅವರು ಗಣೇಶ ಉತ್ಸವದ ಸಂಪೂರ್ಣ ಜವಾಬ್ದಾರಿಯನ್ನು ಸಂಬಂಧಿಸಿದಂತೆ ಇಲಾಖೆಗಳು ವಹಿಸಿಕೊಳ್ಳಬೇಕು. ಎಲ್ಲ ಇಲಾಖೆಯ ಅಧಿಕಾರಿಗಳ ದೂರುಗಳಿಗೆ ತಕ್ಷಣ ಸ್ಪಂದಿಸಬೇಕು. ಮಹಾಮಂಡಳಿಗಳ ಸಮನ್ವಯದೊಂದಿಗೆ ಎಲ್ಲ ಇಲಾಖೆಯ ಅಧಿಕಾರಿಗಳು ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ಸೂಚನೆ ನೀಡಿದರು.

ಪೊಲೀಸ್ ಆಯುಕ್ತ ಭೂಷಣ ಗುಲಾಬರಾವ್ ಭೋರಸೆ ಅವರು ಮಾತನಾಡಿ, ಶಾಂತಿ ಹಾಗೂ ಸಂಭ್ರಮದ ಗಣೇಶೋತ್ಸವ ಆಚರಣೆಗೆ ಎಲ್ಲ ಸ್ಥಳೀಯ ಪೊಲೀಸ್ ಠಾಣೆಗಳ ಅಧಿಕಾರಿಗಳ ಜೊತೆ ಸಭೆ ಕರೆದು ಅಗತ್ಯ ಬಂದೋಬಸ್ತ ಕಲ್ಪಿಸಲು ಸೂಚನೆ ನೀಡಲಾಗಿದೆ. ಪೊಲೀಸ್ ಇಲಾಖೆಗೆ ಸಂಬಂಧಿಸಿದಂತೆ ನಗರದ ದೂರುಗಳನ್ನು 48 ಗಂಟೆಗಳಲ್ಲಿ ಕೂಡಲೇ ಪೊಲೀಸ್ ಇಲಾಖೆಯಿಂದ ಸಮಸ್ಯೆಗಳ ಪರಿಹಾರಕ್ಕೆ ಕ್ರಮ ವಹಿಸಲಾಗುವುದು ಎಂದರು.

ಡಿ.ಜೆ ಅಳವಡಿಕೆಯಲ್ಲಿ ಮಾರ್ಗಸೂಚಿಗಳನ್ನು ಉಲ್ಲಂಘಿಸುವರ ಮೇಲೆ ಕ್ರಮ ಜರುಗಿಸಲಾಗುವದು. ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ರಾತ್ರಿ 10 ಗಂಟೆಯ ನಂತರ ಧ್ವನಿವರ್ಧಕಗಳ ಬಳಕೆಯನ್ನು ನಿಷೇಧಿಸಲಾಗಿರುತ್ತದೆ. ಗಣೇಶ ವಿಸರ್ಜನೆಗೆ ಸಂಬಂಧಿಸಿದಂತೆ ಮೂರ್ತಿಗಳು ಸಂಚರಿಸುವ ರಸ್ತೆಗಳಲ್ಲಿ 64 ಕ್ಕಿಂತ ಹೆಚ್ಚು ಸಣ್ಣ ಮತ್ತು ದೊಡ್ಡ ಆಸ್ಪತ್ರೆಗಳಿದ್ದು, ಸಾರ್ವಜನಿಕರಿಗೆ ತೊಂದರೆಯಾಗದಂತೆ ನಿಗದಿತ ಕಾಲಮಿತಿಯೊಳಗೆ ಗಣೇಶ ಮೂರ್ತಿಗಳನ್ನು ವಿಸರ್ಜನೆ ಮಾಡಿದಲ್ಲಿ, ಆಸ್ಪತ್ರೆಯಲ್ಲಿರುವ ರೋಗಿಗಳಿಗೆ, ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಎಲ್ಲರೂ ಸಹಕರಿಸಬೇಕು ಎಂದು ತಿಳಿಸಿದರು.

ಗಣೇಶ ಮೂರ್ತಿಗಳು ಹೆಚ್ಚು ಎತ್ತರವಾಗಿರದಂತೆ ನೋಡಿಕೊಳ್ಳಬೇಕು. ಇದರಿಂದ ಸಂಭವನೀಯ ಅನಾಹುತಗಳನ್ನು ತಡೆಗಟ್ಟಬಹುದಾಗಿದೆ. ಅನುಮತಿಸಲಾದ ಕಾರ್ಯಕ್ರಮಗಳನ್ನು ನಿಗದಿತ ಸಮಯದೊಳಗಾಗಿ ಪೂರ್ಣಗೊಳಿಸಬೇಕು. ಗಣೇಶ ಮಹಾಮಂಡಳಿಗಳು ಸ್ವಯಂ ಸೇವಕರನ್ನು ನೇಮಿಸುವುದರ ಜೊತೆಗೆ ಗಣೇಶ ವಿಸರ್ಜನೆ ಪ್ರಾರಂಭದಿಂದ ಕೊನೆಯವರೆಗೆ ಕಡ್ಡಾಯವಾಗಿ ಹಾಜರಿರಬೇಕು ಇದರ ಜೊತೆಗೆ ಮಂಡಳಿಗಳ ಮುಖ್ಯಸ್ಥರು ಪೊಲೀಸ್ ಸಿಬ್ಬಂದಿಗಳೊಂದಿಗೆ ನಿರಂತರ ಸಂಪರ್ಕದಲ್ಲಿರಬೇಕು. ಗಣೇಶ ಉತ್ಸವದ ಸಂದರ್ಭದಲ್ಲಿ ಯಾವುದೇ ಗಲಭೆ ಅಥವಾ ಸಾಮಾಜಿಕ ಸ್ವಾಸ್ಥ್ಯ ಹಾಳು ಮಾಡುವವರು ಕಂಡು ಬಂದಲ್ಲಿ ಅಂತಹವರ ವಿರುದ್ಧ ಯಾವುದೇ ಮುಲಾಜಿಲ್ಲದೇ ಕ್ರಮ ಜರುಗಿಸಲಾಗುವದು ಎಂದರು.

ಈ ವೇಳೆ ಮಾತನಾಡಿದ ವಿವಿಧ ಗಣೇಶ ಉತ್ಸವ ಮಹಾ ಮಂಡಳಿಯ ಅಧ್ಯಕ್ಷರು, ಪದಾಧಿಕಾರಿಗಳು, ನಗರದಲ್ಲಿ ಈಗಾಗಲೇ ಸುಮಾರು ವರ್ಷಗಳಿಂದ ಗಣೇಶ ಉತ್ಸವ ಪಾರಂಪರಿಕವಾಗಿ ಅದ್ದೂರಿಯಾಗಿ ಆಚರಿಸುತ್ತಾ ಬಂದಿದೆ. ದೇಶದಲ್ಲೇ ಎರಡನೇ ಅತಿ ದೊಡ್ಡ ಗಣೇಶ ಉತ್ಸವ ಆಚರಣೆ ನಮ್ಮ ಜಿಲ್ಲೆಯಲ್ಲಿ ನಡೆಯುತ್ತದೆ. ಗಣೇಶ ಮೂರ್ತಿ ವಿಸರ್ಜನೆಯ ಸುಮಾರು 8 ಹೊಂಡಗಳಿವೆ ಎಲ್ಲವನ್ನೂ ಸ್ವಚ್ಛಗೊಳಿಸಬೇಕು. ಗಣೇಶ ಮಂಟಪಗಳಿಗೆ ಸೂಕ್ತ ಪೊಲೀಸ್ ಭದ್ರತೆ ನೀಡಬೇಕು ಎಂದು ಮನವಿ ಮಾಡಿಕೊಂಡರು.

ಗಣೇಶ ಮೂರ್ತಿ ವೀಕ್ಷಿಸಲು ಬರುವ ಸಾರ್ವಜನಿಕರಲ್ಲಿ ಮಹಿಳೆಯರು ಹಾಗೂ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಾರೆ ಹಾಗಾಗಿ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು. ನಗರದ ಗಣೇಶ ಉತ್ಸವ ವೀಕ್ಷಣೆಗೆ ಪರ ಊರುಗಳಿಂದ ಆಗಮಿಸುವ ಸಾರ್ವಜನಿಕರ ಅನುಕೂಲಕ್ಕಾಗಿ ತಡರಾತ್ರಿಯ ವರೆಗೆ ಹೊಟೇಲುಗಳನ್ನು ತೆರೆದಿಡಲು ಹಾಗೂ ಸೂಕ್ತ ಸಾರಿಗೆ ವ್ಯವಸ್ಥೆ ಮಾಡುವಂತೆ ಮನವಿ ಮಾಡಿದರು.

ಮಹಾನಗರ ಪಾಲಿಕೆ ಆಯುಕ್ತೆ ಶುಭ ಬಿ, ಹೆಚ್ಚುವರಿ ಪೋಲಿಸ್ ವರಿಷ್ಠಾಧಿಕಾರಿ ಆರ್ಬಿ ಬಸರಗಿ, ಡಿಸಿಪಿ ಭರಮನಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ, ಮಹಾನಗರ ಪಾಲಿಕೆ ನಗರ ಸೇವಕರು, ವಿವಿಧ ಗಣೇಶ ಮಹಾಮಂಡಳಿಗಳ ಅಧ್ಯಕ್ಷರು, ಪದಾಧಿಕಾರಿಗಳು, ಸದಸ್ಯರು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಹುಲ್ಲೂರನಲ್ಲಿ ಎಸ್ ಎನ್ ಡಿ ನ್ಯಾಷನಲ್ ಪಬ್ಲಿಕ್ ಶಾಲೆಯಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ ಆಚರಣೆ



**ಮುದ್ದೇಬಿಹಾಳ:** ಕೃಷ್ಣ ಜನ್ಮಾಷ್ಟಮಿ ನಿಮಿತ್ಯವಾಗಿ ತಾಲೂಕಿನ ಹುಲ್ಲೂರ ಗ್ರಾಮದ ಎಸ್ ಎನ್ ಡಿ ನ್ಯಾಷನಲ್ ಪಬ್ಲಿಕ್ ಶಾಲೆಯಲ್ಲಿ ಕೃಷ್ಣ ಜನ್ಮಾಷ್ಟಮಿಯನ್ನು ಅದ್ದೂರಿಯಾಗಿ ಆಚರಿಸಲಾಯಿತು.

ಶಾಲೆಯ ಮಕ್ಕಳಿಗೆ ಕೃಷ್ಣ ರಾಧೆಯ ಉಡುಗೆ ಹಾಕಿಕೊಂಡು ಮಕ್ಕಳು ವಿಜೃಂಭಿಸಿದರು. ತರಗತಿ ವರ್ಗಾವರು. ಎಲ್ ಕೆ ಜಿ,ಯು ಕೆ ಜಿ, 1 ರಿಂದ 5 ನೇ ತರಗತಿಯ ಮಕ್ಕಳಿಗೆ ಪ್ರಥಮ ದ್ವಿತೀಯ ಅಂತ ಎಲ್ಲ ಪಾಲಕರ ಸಮಕ್ಷಮದಲ್ಲಿ ಬಹುಮಾನ ವಿತರಿಸಲಾಯಿತು.

ಅದರಲ್ಲೂ ಜಾತಿ ಬೇದ ಮರೆತು ಮುಸ್ಲಿ ಸಮುಧಾಯದ 1ನೇ ತರಗತಿಯಲ್ಲಿ ರಿಧಾ ಕರ್ಜಗಿ ಹಾಗೂ ಯುಕೆಜಿ ವಿದ್ಯಾರ್ಥಿನಿ ರಿಫಾ ಕರ್ಜಗಿ ಎರಡು ವಿದ್ಯಾರ್ಥಿಗಳು ಪ್ರಥಮ ಬಹುಮಾನ ಪಡೆದುಕೊಂಡರು.

ರಾಧೆಯ ವೇಧದಲ್ಲಿ ಕಾಣಿಸಿಕೊಂಡರು. ಭಾಗವಹಿಸಿದ ಎಲ್ಲಾ ಮಕ್ಕಳಿಗೆ ಸಂಸ್ಥೆಯ ವತಿಯಿಂದ ಸಮಾಧಾನಕರವಾದ ವಸ್ತುಗಳನ್ನು ನೀಡಲಾಯಿತು.

ನಂತರ ಮೊಸರಿನ ಗಡಿಗೆ ಒಡೆಯುವ ಸ್ಪರ್ಧೆಯನ್ನು ತರಗತಿವಾರು ಪಾಲಕರಿಗಾಗಿ ಏರ್ಪಡಿಸಲಾಗಿತ್ತು.

ಈ ವೇಳೆ ಪಾಲಕರಾದ ವೇದಾಂತ ಯರಜರಿ ಯು ಕೆ ಜಿ ಯಲ್ಲಿ ರೂಪಾ ಹೂಗಾರ, ಗೀತಾ ಪಾಟೀಲ, ಪರಸಪ್ಪ ವಡ್ಡರ, ಎಲ್ಲಾ ಮಕ್ಕಳಿಗೆ ಪ್ರಥಮ ಬಹುಮಾನವನ್ನು ಎಸ್ ಎನ್ ಡಿ ನ್ಯಾಷನಲ್ ಪಬ್ಲಿಕ್ ಸ್ಕೂಲ್ ನ ಅಧ್ಯಕ್ಷ ಎಂ ಎಸ್ ಕೊಪ್ಪ ಅವರು ಬಹುಮಾನ ವಿತರಿಸಿದರು. ಪಾಲಕ ಪ್ರತಿನಿಧಿ ಗೀತಾ ಪಾಟೀಲ ಮಾತನಾಡಿ ಹಳ್ಳಿಯಲ್ಲಿರುವ ನಮ್ಮಂತಹ ಎಲೆಮಾರಿಯ ಕಾಯಿಯಂತಿರುವ ಪ್ರತಿಭೆಗಳನ್ನು ಗುರುತಿಸಿ ಅವರಲ್ಲಿರುವ ಪ್ರತಿಭೆಯನ್ನು ಹೊರಹಾಕಲು ಒಳ್ಳೆಯ ಅವಕಾಶಗಳನ್ನು ಈ ಶಾಲೆ ಒದಗಿಸಿ ಕೊಡುತ್ತಿದೆ.ಈ ಶಾಲೆ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಬೆಳೆಯಲಿ ಎಂದು ಶುಭ ಹಾರೈಸಿದರೂ.

ಇದೇ ವೇಳೆ ಗ್ರಾಮದಲ್ಲಿ ಪಥ ಸಂಚಲನ ಮಾಡಿ ಶ್ರೀ ಸಾಯಿ ಮಾಂದಿರಕ್ಕೆ ಹೋಗಿ ಸಾಯಿ ದರ್ಶನ ಪಡೆದುಕೊಂಡರು.

ಸಂಸ್ಥೆಯ ಅಧ್ಯಕ್ಷರು ಎಲ್ಲರಿಗೂ ಶುಭಾಶಯ ಕೋರಿದರು.

ಎಚ್ ಆರ್ ಬಾಗಲಕೋಟ, ನಿರೂಪಿಸಿದರು. ಶೋಭಾ ವಂದಿಸಿದರು. ನಿರ್ಣಾಯಾಕರಾಗಿ ವಿಜಯಲಕ್ಷ್ಮಿಯವರು ನಿರ್ವಹಿಸಿದರು.

# ವೈದ್ಯಕೀಯ ಕ್ಷೇತ್ರದಲ್ಲಿ ಅಂಗದಾನ ಶ್ರೇಷ್ಠವಾಗಿದೆ: ಡಾ.ಬಡಿಗೇರ



**ಜಮಖಂಡಿ:** ಸುವರ್ಣದಾನ, ಗೋದಾನ, ಭೂದಾನ, ಕನ್ಯಾದಾನಗಳಿಗಿಂತ ವೈಜ್ಞಾನಿಕ ಯುಗದಲ್ಲಿ ಮಾನವ ಅಂಗದಾನ ಶ್ರೇಷ್ಠವಾಗಿದೆ ಎಂದು ಎಜಿಎಂ ಆಯುರ್ವೇದ ಕಾಲೇಜಿನ ಪ್ರಾಚಾರ್ಯ ಡಾ. ಮುರಳಿಧರ ಬಡಿಗೇರ ಹೇಳಿದರು.

ನಗರದ ಎ.ಜಿ.ದೇಸಾಯಿ ವೃತ್ತದಲ್ಲಿ ವಿಶ್ವ ಅಂಗದಾನ ದಿನಾಚರಣೆ ನಿಮಿತ್ತ ಎಜಿಎಂ ಆಯುರ್ವೇದ ಕಾಲೇಜಿನ ಅಂಗದಾನದ ಮಹತ್ವ ಜಾಗೃತಿ ಜಾಥಾ ಮತ್ತು ಅಂಗದಾನದಿಂದ ಜೀವಂತ ಜನರಿಗೆ ಉಪಯೋಗ ಕುರಿತು ಬೀದಿನಾಟಕ ಪ್ರದರ್ಶನ ಕಾರ್ಯಕ್ರಮದಲ್ಲಿ ಮಾತನಾಡಿದರು.

ವಿಜ್ಞಾನದ ಯುಗದಲ್ಲಿ ಅನೇಕ ಸಾಧನೆಗಳನ್ನು ಮಾಡಲಾಗಿದೆ. ದೇಹದ ಬಹುಮುಖ್ಯ ಅಂಗಗಳನ್ನು ಬದಲಾಯಿಸಿ ಕಸಿ ಮಾಡಲಾಗುತ್ತಿದೆ. ಹೃದಯ, ಕಿಡ್ನಿ, ಲಿವರ, ಕಣ್ಣುಗಳು, ಕರಳು ಸಹಿತ ವಿವಿಧ ಅಂಗಗಳನ್ನು ಅವಶ್ಯಕ ಇರತಕ್ಕ ಜನರಿಗೆ ದಾನದರೂಪದಲ್ಲಿ ನೀಡುವ ಕ್ರಮ ಚಾಲನೆಯಲ್ಲಿದೆ. ಅನೇಕ ಬಲ್ಲವರು ದೇಹದಾನ, ನೇತ್ರದಾನಗಳನ್ನು ಮಾಡಿ ಮಾದರಿಯಾಗಿದ್ದಾರೆ. ಈ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ವಿಶ್ವ ಅಂಗದಾನ ಕಾರ್ಯಕ್ರಮ ನಡೆಸಲಾಗುತ್ತಿದೆ ಎಂದರು.

ದೃಷ್ಟಿ ಹೀನ ವ್ಯಕ್ತಿಗೆ ನೇತ್ರದಾನದ ಮೂಲಕ ಪುನ; ವಿಶ್ವವನ್ನು ನೋಡಲು ಅವಕಾಶ ವದಗಿಸಿಕೊಡುವದು ಪುಣ್ಯದ ಕೆಲಸ ಆದ್ದರಿಂದ ಪ್ರತಿಯೊಬ್ಬರು ಅಂಗಾಂಗಗಳ ದಾನ ಹಾಗೂ ಅದರಿಂದಾಗುವ ಪರೋಪಕಾರದ ಬಗ್ಗೆ ತಿಳಿದು ಕೊಳ್ಳಬೇಕು. ಅವಶ್ಯವಿರುವ ವ್ಯಕ್ತಿಗಳಿಗೆ ದಾನ ಮಾಡುವ ಮೂಲಕ ಪರೋಪಕಾರ ಮಾಡಲು ಮುಂದಾಗಬೇಕು ಎಂದರು.

ಕಾಲೇಜಿನ ವಿದ್ಯಾರ್ಥಿಗಳಾದ ಸಚಿನ, ಋಷಿಕೇಶ, ಸೂರಜ, ವಿಶ್ವಜಿತ, ಪ್ರಸನ್ನ, ಬಸವರಾಜ, ರಮೇಶ, ಅಜೀದ, ಕೀರ್ತಿ, ಆಶಾ, ಸಹನಾ, ಶ್ರಾವಣಿ ಮುಂತಾದವರು ಬೀದಿನಾಟಕ ಪ್ರದರ್ಶನ ಮೂಲಕ ಅಂಗಾಂಗ ದಾನದ ಮಹತ್ವ ಪ್ರದರ್ಶಿಸಿದರು. ಡಾ.ಸುನೀತಾ, ಡಾ.ಸಂಗೀತಾ ಚೌಕಿಮಠ, ಡಾ. ಮಾಂತೇಶ ನಿಂಬಾಳ, ಡಾ.ಶಿವಪ್ರಸಾದ, ಡಾ.ಸುನೀಲ ಸಬ್ಸಣ್ಣವರ, ಡಾ. ಅಕ್ಷಯ ಬೀದಿ ನಾಟಕ ನೇತೃತ್ವ ವಹಿಸಿದ್ದರು.

# ಸುಭದ್ರಭವಿಷ್ಯಕ್ಕಾಗಿ ಸ್ಪರ್ಧಾತ್ಮಕ ಪರೀಕ್ಷೆಗಳು ಅನಿವಾರ್ಯ

**ಜಮಖಂಡಿ:** ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಉತ್ತಮ ಉದ್ಯೋಗ, ಹುದ್ದೆ ಜೊತೆಗೆ ಸುಭದ್ರ ಭವಿಷ್ಯಕ್ಕಾಗಿ ಸ್ಪರ್ಧಾತ್ಮಕ ಪರೀಕ್ಷೆಗಳು ಅನಿವಾರ್ಯವಾಗಿವೆ. ಸರ್ಕಾರಿ, ಖಾಸಗಿ ಕ್ಷೇತ್ರಗಳಲ್ಲಿ ನಡೆವ ನೇಮಕಾತಿ ಪ್ರಕ್ರಿಯೆಯಲ್ಲಿ ಪರೀಕ್ಷೆಗಳು ಮುಖ್ಯ ಹಂತವಾಗಿವೆ ಎಂದು ಸಂಪನ್ಮೂಲವ್ಯಕ್ತಿ, ವಿಜಯಪುರದ ಎಸ್.ಆರ್.ಅಕಾಡೆಮಿ ನಿರ್ದೇಶಕ ರಮೇಶ ನಾಯಕ ಹೇಳಿದರು.



ನಗರದ ಸರಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜು ಮತ್ತು ಸ್ನಾತಕೋತ್ತರ ಕೇಂದ್ರ ಸಭಾಭವನದಲ್ಲಿ ವಿಜಯಪುರ ಜಿಲ್ಲೆಯ ಎಸ್.ಆರ್. ಅಕಾಡೆಮಿ, ಐ.ಕ್ಯೂ.ಎ.ಸಿ., ಉದ್ಯೋಗ ಭರವಸಾ ಕೋಶ, ವಿದ್ಯಾರ್ಥಿ ಕಲ್ಯಾಣ ವಿಭಾಗ ಮತ್ತು ರಾಜ್ಯಶಾಸ್ತ್ರ ವಿಭಾಗದ ಸಹಯೋಗದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಪೂರ್ವ ಸಿದ್ಧತೆ ಒಂದು ದಿನದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಯಶಸ್ಸು ಸಾಧಿಸಲು ಪೂರ್ವಸಿದ್ಧತೆ ಅತ್ಯಂತ ಅಗತ್ಯ. ಪೂರ್ವಸಿದ್ಧತೆಯಂದರೇ ಕೇವಲ ಪುಸ್ತಕ ಓದುವುದಲ್ಲ. ಸರಿಯಾದ ಯೋಜನೆ, ಸಮಯ ನಿರ್ವಹಣೆ, ವಿಷಯದ ಆಳ ತಿಳುವಳಿಕೆ, ನಿಯಮಿತ ಅಭ್ಯಾಸ ಒಳಗೊಂಡಿದೆ. ಸ್ಪರ್ಧಾತ್ಮಕ ಪರೀಕ್ಷೆ ತಯಾರಿಯಲ್ಲಿ ಮೊದಲ ಹೆಜ್ಜೆ ಪಠ್ಯಕ್ರಮವನ್ನು ಸಂಪೂರ್ಣವಾಗಿ ಅರ್ಥಮಾಡಿಕೊಳ್ಳುವುದು. ವಿಷಯಗಳನ್ನು ವಿಭಾಗವಾಗಿ ಹಂಚಿಕೊಂಡು ಪ್ರತಿದಿನ ನಿಗದಿತ ಸಮಯದಲ್ಲಿ ಅಧ್ಯಯನ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು. ಸಾಮಾನ್ಯಜ್ಞಾನ, ಪ್ರಸ್ತುತ ಘಟನೆಗಳು, ಗಣಿತ, ತಾರ್ಕಿಕ ಚಿಂತನೆ ಮತ್ತು ಭಾಷಾ ಕೌಶಲ್ಯಗಳಲ್ಲಿ ಸಾಧಿಸಲು ಪ್ರತಿದಿನ ಪತ್ರಿಕೆ ಓದು, ಮಾದರಿ ಪ್ರಶ್ನೆಗಳ ಅಭ್ಯಾಸದಲ್ಲಿ ಭಾಗವಹಿಸಬೇಕು. ಶಾರೀರಿಕ, ಮಾನಸಿಕ ಆರೋಗ್ಯ ಕಾಪಾಡಿಕೊಂಡು ಸರಿಯಾದ ಆಹಾರ ಸೇವನೆ, ವ್ಯಾಯಾಮದಿಂದ ಒತ್ತಡ ಕಡಿಮೆಯಾಗಲಿದೆ. ಸ್ಪರ್ಧಾತ್ಮಕ ಪರೀಕ್ಷೆಗಳ ಪೂರ್ವತಯಾರಿ ಶಿಸ್ತಿನ ಜೀವನ ಶೈಲಿ, ನಿರಂತರ ಪರಿಶ್ರಮ ಅವಲಂಬಿಸಿದೆ. ಸತತವಾದ ಪ್ರಯತ್ನ ಮತ್ತು ಆತ್ಮವಿಶ್ವಾಸದಿಂದ ಯಾವುದೇ ಕ್ಷೇತ್ರದಲ್ಲಿ ಯಶಸ್ಸು ಸಾಧಿಸಬಹುದು ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯೆ ಡಾ. ಸುನಂದಾ ಎಸ್. ಶಿರೂರ ಮಾತನಾಡಿ, ಸ್ಪರ್ಧಾತ್ಮಕ ಪರೀಕ್ಷೆಗಳು ಇಂದಿನ ಯುವಜನತೆ ಕನಸಿನ ಉದ್ಯೋಗ ಪಡೆಯಲು ಪ್ರಮುಖ ದಾರಿಗಳಾಗಿವೆ. ಯಶಸ್ಸು ಪಡೆಯಲು ಕೇವಲ ತಮ್ಮ ಬುದ್ಧಿವಂತಿಕೆ ಸಾಕಾಗದು, ನಿರಂತರ ಅಭ್ಯಾಸ, ಸಮರ್ಪಿತ ಅಧ್ಯಯನ, ಸೂಕ್ತ ತಯಾರಿ ಅವಶ್ಯಕ. ಪೂರ್ವ ತಯಾರಿ ವಿದ್ಯಾರ್ಥಿಗೆ ಮಾರ್ಗಸೂಚಿಯಂತೆ ಕೆಲಸ ನಿರ್ವಹಿಸಿ, ಗುರಿ ಸ್ಪಷ್ಟತೆ ಕಾಣುವಂತೆ ಮಾಡುತ್ತದೆ ಎಂದರು.

ಸಂಪನ್ಮೂಲವ್ಯಕ್ತಿ ರಮೇಶ, ಹನುಮಂತಪ್ಪ ನಾಯಕ, ರಾಹುಲ, ಬಸಣ್ಣವರ ಉಪನ್ಯಾಸ ನೀಡಿದರು. ವೇದಿಕೆಯಲ್ಲಿ ಆರ್.ಎಚ್.ಹಳ್ಳಿ, ಎಸ್. ಕೆ.ಡೆಂಬರೆ, ಬಂದೇನವಾಜ ಕೊರಬು, ಡಾ.ಎಸ್.ಎಸ್.ಸಿದ್ದಾಪೂರ, ಎಚ್. ಶಿವಲೀಲಾ, ಡಾ.ಎಸ್.ಎನ್.ಬಜಂತ್ರಿ, ಡಾ.ಬಿ.ಎನ್.ಜಾಧವ, ಆರ್.ಬಿ.ಶಿತೋಳೆ, ಎ.ಎಸ್.ಪೂಜಾರಿ, ಆರ್.ಎಸ್.ಜಾಧವ, ಡಾ. ಎಸ್.ಎನ್.ಮಣಕವಾಡ, ಪುಷ್ಪಾ ಹುಣಶ್ಯಾಳ, ಪಾಟೀಲ ಸವಿತಾ ಕಲಗೊಂಡ ಸಹಿತ ಹಲ್ರು ಇದ್ದರು.

# ತೇರದಾಳದಲ್ಲಿ ಪ್ರಭುಜ್ಯೋತಿ ಉತ್ಸವ



**ತೇರದಾಳ**–ಪಟ್ಟಣದ ಆರಾಧ್ಯ ದೈವ ಅಲ್ಲಮಪ್ರಭುದೇವರ ಜಾತ್ರಾ ಮಹೋತ್ಸವದ ಮುನ್ನಾದಿನವಾದ ಭಾನುವಾರ ಪ್ರಭುಜ್ಯೋತಿ ಉತ್ಸವ ಭಕ್ತಿಯಿಂದ ಜರುಗಿತು.

ಸಂಪ್ರದಾಯದಂತೆ ವಿರಕ್ತಮಠದಿಂದ ಪ್ರಾರಂಭಗೊಂಡ ಜ್ಯೋತಿಯಾತ್ರೆ ವಾಧ್ಯಮೇಳಗಳೊಂದಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಪ್ರಭುದೇವರ ದೇವಸ್ಥಾನ ತಲುಪಿತು. ಮುತ್ತೈದೆಯರ ಕುಂಭ ಹಾಗೂ ಆರತಿ ಉತ್ಸವಕ್ಕೆ ಮೆರಗು ನೀಡಿದವು. ಇತ್ತ ಉತ್ಸವ ನಡೆಯುವ ಬೀದಿಗಳಲ್ಲಿ ಬಿಡಿಸಿದ ರಂಗೋಲಿ ಸ್ವಾಗತ ಕೋರಿದವು. ನಂತರ ಪ್ರಭುಲಿಂಗೇಶ್ವರ ಅನ್ನಪ್ರಸಾದ ಸಮಿತಿ ನಡೆಸುವ ದಾಸೋಹಕ್ಕೆ ಹರಗುರು ಚರಮೂರ್ತಿಗಳು ಚಾಲನೆ ನೀಡಿದರು. ಅಲ್ಲಮಪ್ರಭುದೇವರ ಜಾತ್ರಾಮಹೋತ್ಸವ ನಿಮಿತ್ತ ಸುಮಾರು 30 ವರ್ಷಗಳಿಂದ ಅನ್ನಪ್ರಸಾದ ಸಮಿತಿ ಹಾಗೂ ಸದ್ಭಕ್ತರು ನಡೆಸುತ್ತಿರುವ ದಾಸೋಹ ಕಾರ್ಯಕ್ಕೆ ಹಾಗೂ ಸಮಿತಿಯವರ ನಿಸ್ವಾರ್ಥ ಸೇವೆಯನ್ನು ಕಾರ್ಯಕ್ರಮದಲ್ಲಿ ಪಾಲ್ಗೊಂಡ ಶ್ರೀಗಳು ಹಾಗೂ ಮುಖಂಡರು ಬಣ್ಣಿಸಿದರು.

# ಕೃಷ್ಣಾರತಿ ಸಂಗೀತೋತ್ಸವದಲ್ಲಿ ಕಲಾವಿದರ ಅಮೋಘ ಪ್ರದರ್ಶನ



**ಜಮಖಂಡಿ:** ತಾಲೂಕಿನ ಹಿಪ್ಪರಗಿಯ ಸಂಗಮೇಶ್ವರ ದೇವಸ್ಥಾನದ ಆವರಣದಲ್ಲಿ ಎಂ.ಆರ್.ಎನ್. ಫೌಂಡೇಶನ ಮತ್ತು ರೈತ ಸೇವಾ ಸಮಿತಿ ಸಹಯೋಗದಲ್ಲಿ ಕೃಷ್ಣಾನದಿ ತೀರದಲ್ಲಿ ನಾಗಾಸಾಧುಗಳ ಮತ್ತು ಕಾಶಿ ವಿಶ್ವನಾಥ ಅರ್ಚಕರ ನೇತೃತ್ವದಲ್ಲಿ ಕೃಷ್ಣಾ ಪುಣ್ಯಸ್ನಾನ, ಕೃಷ್ಣಾರತಿ ಮತ್ತು ಮಾಜಿಸಚಿವ ಮುರಗೇಶ ನಿರಾಣಿ 60ನೇ ವರ್ಷದ ಹುಟ್ಟುಹಬ್ಬ ಆಚರಣೆ, ಸಾಮೂಹಿಕ ದಾಸೋಹ ಮತ್ತು ಸಂಗೀತೋತ್ಸವ ನಡೆಯಿತು.

ರಾಜ್ಯಮಟ್ಟದ ಕಲಾವಿದರಾದ ವಿಜಯಪೂರದ ಬಿಸ್ಲಾ ಅಕಾಡೆಮಿ ಮತ್ತು ಧಾರವಾಡದ ವಾಣಿ ಹರಡಕರ, ಶ್ರೀಧರ ತಂಡದ ಸುಗಮ ಸಂಗೀತ ಸವಿಗಾನಗಳು ಗಮನ ಸೆಳೆಯಿತು. ಗದಗದ ಗಾನಯೋಗಿ ವೀರಶೈವ ಪುಣ್ಯಾಶ್ರಮ ತಂಡದಿಂದ ವಿಶೇಷ ಗಾಯನ ನಡೆಯಿತು. ನೃತ್ಯ ಮತ್ತು ಗಾಯನದಲ್ಲಿ 200ಕ್ಕೂ ಹೆಚ್ಚು ಕಲಾವಿದರು ತಮ್ಮ ಪ್ರತಿಭೆ ಪ್ರದರ್ಶಿಸಿದರು.

ಮಹಿಷಾಸುರ ಮರ್ದನಿ, ರೇಣುಕಾ ಎಲ್ಲಮ್ಮಾ, ಕೃಷ್ಣನ ಮಹಿಮೆ ಆರಾಧನೆ, ಶಾಸ್ತ್ರೀ ಸಂಗೀತದ ಹಾಡುಗಳು ನೆರದಿದ್ದ ಸಾವಿರಾರು ಜನರ ಮನ ರಂಜಿಸಿದವು. ಅಂದಾಜು 13 ಭಕ್ತಿ ಹಾಡುಗಳಿಗೆ ನಡೆದ ನೃತ್ಯ ಕಲಾವಿದರು ಕಲೆ ಗಮನಬ ಸೆಳದವು. ಬೆಳಗ್ಗೆಯಿಂದ ಆರಂಭಗೊಂಡು ಸಂಜೆ ನಡೆದ ಸಂಗೀತೋತ್ಸವದಲ್ಲಿ ಹಿಪ್ಪರಗಿ ಗ್ರಾಮದ ಮಕ್ಕಳು, ಕಲಾವಿದರು, ಜಮಖಂಡಿ ತಾಲೂಕಿನ, ಬಾಗಲಕೋಟೆ, ವಿಜಯಪೂರ, ಬೆಳಗಾವಿ, ಧಾರವಾಡ ಸಹಿತ ಜಿಲ್ಲೆಗಳಿಂದ ಕಲಾವಿದರು ಪಾಲ್ಗೊಂಡಿದ್ದರು.




# ಜನಮನರಂಜಿಸಿದ ಹಾಸ್ಯರಸಮಂಜರಿ ಕಾರ್ಯಕ್ರಮ

**ಬಸವನಬಾಗೇವಾಡಿ,** ಪಟ್ಟಣದ ಆರಾಧ್ಯದೈವ ಮೂಲನಂದೀಶ್ವರ(ಬಸವೇಶ್ವರ) ಜಾತ್ರೆಯಂಗವಾಗಿ ಗುರುವಾರ ಸಂಜೆ ನಂದೀಶ್ವರ ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ಹಾಸ್ಯ ರಸಮಂಜರಿ ಕಾರ್ಯಕ್ರಮವು ರಾತ್ರಿ ಒಂಬತ್ತು ಗಂಟೆಗೆ ಆರಂಭವಾಗಿ ತಡರಾತ್ರಿ ಒಂದು ಗಂಟೆಯವರೆಗೂ ಜರುಗಿ ನೆರೆದ ಜನರ ಮನರಂಜಿಸಿತ್ತು.



ಈ ಕಾರ್ಯಕ್ರಮದಲ್ಲಿ ಮಹನ್ಯ ಪಾಟೀಲ ಅವರ ವ್ಹಿಜಿಎಂ ಇವೆಂಟ್ಸ್ ತಂಡದ ಕಲಾವಿದರಾದ ರಾಘವೇಂದ್ರ(ರಾಗಿಣಿ), ಚಿಲ್ಲರೆ ಮಂಜು, ಮಹನ್ಯ ಗುರು ಪಾಟೀಲ, ಮೌರ್ಯ, ಬಸವರಾಜ, ಸವಿತಾ ಸೇರಿದಂತೆ ಅನೇಕ ಕಲಾವಿದರು ನಡೆಸಿಕೊಟ್ಟ ಹಾಡು, ಹಾಸ್ಯ ಜನರಿಗೆ ಸಂತೋಷ, ರಂಜನೆ ನೀಡಿತು.

ಕಾರ್ಯಕ್ರಮ ಉದ್ಘಾಟಿಸಿದ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಜನಪದ ಗಾಯಕ ಬಸವರಾಜ ಹಾರಿವಾಳ ಮಾತನಾಡಿ, ಜಾತ್ರೆಯಂಗವಾಗಿ ಎಲ್ಲರ ಸಹಕಾರದಿಂದ ಇಂತಹ ಕಾರ್ಯಕ್ರಮ ಆಯೋಜನೆ ಮಾಡುವ ಮೂಲಕ ಎಲ್ಲರೂ ನಮ್ಮವರು ಎಂಬ ಸಂದೇಶ ಸಾರಲು ಪೂರಕವಾಗುತ್ತದೆ. ಬಸವಾದಿ ಶರಣರ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದರು.

ಪಿಐ ಗುರುಶಾಂತ ದಾಶ್ಯಾಳ ಮಾತನಾಡಿ, ಈ ವರ್ಷದ ಜಾತ್ರೆಗೆ ಯಾವುದೇ ಕಪ್ಪು ಚುಕ್ಕೆ ಬಾರದಂತೆ ಎಲ್ಲರ ಸಹಕಾರದೊಂದಿಗೆ ಬಹಳ ಅಚ್ಚುಕಟ್ಟಾಗಿ ನಡೆಯುತ್ತಿದೆ. ನಮ್ಮ ಇಲಾಖೆಯ ಬಂದೋಬಸ್ತಿಗೆ ಎಲ್ಲರೂ ಸಹಕಾರ ನೀಡಿದ್ದು ಸ್ವಾಗತಾರ್ಹ.ಜಾತ್ರಾ ಉತ್ಸವ ಸಮಿತಿ, ಬಸವೇಶ್ವರ ಸೇವಾ ಸಮಿತಿ ಸೇರಿದಂತೆ ಅನೇಕ ಹಿರಿಯರ ಸಹಕಾರ ನೀಡುತ್ತಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಬಸವೇಶ್ವರ ಸೇವಾ ಸಮಿತಿ ಅಧ್ಯಕ್ಷ ಈರಣ್ಣ ಪಟ್ಟಣಶೆಟ್ಟಿ ಮಾತನಾಡಿ, ಈ ವರ್ಷದ ಜಾತ್ರೆಯ ಎಲ್ಲರೂ ಸಹಕಾರ ನೀಡುತ್ತಿರುವದರಿಂದ ಅಭೂತಪೂರ್ವವಾಗಿ ಯಶಸ್ವಿಯಾಗುತ್ತಿದೆ. ಜಾತ್ರೆಯಲ್ಲಿ ಪೊಲೀಸ್ ಇಲಾಖೆ, ಪುರಸಭೆ, ಹೆಸ್ಕಾಂ ಇಲಾಖೆಯು ತುಂಬಾ ಸಹಕಾರ ನೀಡುತ್ತಿರುವದು ಅಭಿನಂದನೀಯ. ಎಲ್ಲ ಸಮುದಾಯಕ್ಕೆ ಸೇರಿದ ಜನರು ಜಾತ್ರಾ ಉತ್ಸವ ಸಮಿತಿಯಲ್ಲಿ ಕಾರ್ಯನಿರ್ವಹಿಸುವ ಮೂಲಕ ಜಾತ್ರೆಯನ್ನು ಯಶಸ್ವಿಯಾಗಿ ಮಾಡುತ್ತಿರುವುದು ಶ್ಲಾಘನೀಯ ಎಂದರು.

ವೇದಿಕೆಯಲ್ಲಿ ಜಾತ್ರಾ ಉತ್ಸವ ಸಮಿತಿ ಅಧ್ಯಕ್ಷ ರವಿ ರಾಠೋಡ, ಸಂಗಯ್ಯ ಕಾಳಹಸ್ತೇಶ್ವರಮಠ, ಬಸವರಾಜ ಗೊಳಸಂಗಿ, ಸುರೇಶಗೌಡ ಪಾಟೀಲ, ಚನ್ನಗೌಡ ಬಿರಾದಾರ, ಚಂದ್ರಶೇಖರಗೌಡ ಪಾಟೀಲ,ಸಿದ್ದಣ್ಣ ಕಲ್ಲೂರ, ರಮೇಶ ಯಳಮೇಲಿ, ರಾಜೇಂದ್ರ ಪತ್ತಾರ, ಬಸವರಾಜ ರಾಯಗೊಂಡ, ಮೀರಾಸಾ ಕೊರಬು, ದಯಾನಂದ ಜಾಲಗೇರಿ, ವಿಶ್ವನಾಥ ನಿಡಗುಂದಿ, ಸಮಿತಿಯ ಪದಾಕಾರಿಗಳಾದ ಮಹೇಶ ಹಿರೇಕುರಬರ, ನಂದೀಶ ಪಾಟೀಲ, ಮಂಜು ಜಾಲಗೇರಿ, ರಮೇಶ ಮಸಬಿನಾಳ, ಸಿದ್ರಾಮ ಪಾತ್ರೋಟಿ, ಲಾಳೇಸಾ ಕೊರಬು ಇತರರು ಇದ್ದರು. ಶಂಕರಗೌಡ ಬಿರಾದಾರ ಸ್ವಾಗತಿಸಿದರು. ಕೊಟ್ರೇಶ ಹೆಗ್ಡಾಳ ನಿರೂಪಿಸಿ,ವಂದಿಸಿದರು.

# ಬನಹಟ್ಟಿಯಲ್ಲಿ ಪ್ರಜಾಸೌಧಕ್ಕೆ ಸ್ಥಳಾವಕಾಶ ಸೂಕ್ತ

**ರಬಕವಿ ಬನಹಟ್ಟಿ:** ಬನಹಟ್ಟಿಯಲ್ಲಿ ತಾಲ್ಲೂಕಾಡಳಿತ ಭವನ ಪ್ರಜಾಸೌಧ ನಿರ್ಮಾಣ ಮಾಡಲು ನೂಲಿನ ಗಿರಣಿಯ ಹತ್ತಿರದ ಸರ್ವೆ ನಂ.12 ರಲ್ಲಿಯ ಸೋಮವಾರ ಪೇಟೆ ಸಮಸ್ತ ದೈವ ಮಂಡಳದ ನಾಲ್ಕು ಎಕರೆಗಿಂತ ಹೆಚ್ಚು ಪ್ರದೇಶವನ್ನು ಸರ್ಕಾರಕ್ಕೆ ಬಿಟ್ಟು ಕೊಡಲಾಗುವುದೆಂದು ಮಂಡಳದ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ತುಂಗಳ ತಿಳಿಸಿದರು.



ಅವರು ಸೋಮವಾರ ಇಲ್ಲಿನ ಭದ್ರನವರ ಕಲ್ಯಾಣ ಮಂಟಪದಲ್ಲಿ ಪ್ರಜಾಸೌಧ ನಿರ್ಮಾಣ ಮಾಡಲು ಹಮ್ಮಿಕೊಂಡ ಸಭೆಯಲ್ಲಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಶಂಕರ ಸೊರಗಾಂವಿ ಮಾತನಾಡಿ, ಈ ಸ್ಥಳ ಕಂದಾಯ ಭೂಮಿಯಾಗಿದ್ದು, ಪ್ರಜಾಸೌಧ ನಿರ್ಮಾಣ ಮಾಡಲು ಯಾವುದೆ ಸಮಸ್ಯೆ ಇಲ್ಲವೆಂದರು.

ನಗರದ ಮುಖಂಡ ಭೀಮಶಿ ಮಗದುಮ್ ಮಾತನಾಡಿ, ಬನಹಟ್ಟಿಯಲ್ಲಿ ಪ್ರಜಾಸೌಧ ನಿರ್ಮಾಣ ಮಾಡುವುದರಿಂದ ತಾಲ್ಲೂಕಿನ ಎಲ್ಲ ಊರಿನ ಮತ್ತು ಗ್ರಾಮೀಣ ಪ್ರದೇಶಗಳ ಜನರಿಗೆ ಅನುಕೂಲವಾಗುವುದು. ನೂಲಿನ ಗಿರಣಿಯ ಹತ್ತಿರದ ಭೂಪ್ರದೇಶ ಅತ್ಯಂತ ಸೂಕ್ತವಾದ ಸ್ಥಳವಾಗಿದೆ.

ಇದು ಕಂದಾಯ ಭೂಮಿಯಾಗಿರುವುದರಿಂದ ಸರ್ಕಾರಕ್ಕೂ ಯಾವುದೇ ತೊಂದರೆಯಾಗುವುದಿಲ್ಲ. ಈಗಾಗಲೇ ಈ ಕುರಿತು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕೂಡಾ ಸಲ್ಲಿಸಲಾಗಿದೆ ಎಂದರು.

ಮತ್ತೊರ್ವ ಯುವ ಮುಖಂಡ ರಾಜೇಂದ್ರ ಭದ್ರನವರ ಮಾತನಾಡಿ, ಬನಹಟ್ಟಿ ನಗರವು ದೊಡ್ಡದಾಗಿದ್ದು, ಅತ್ಯಧಿಕ ಜನಸಂಖ್ಯೆಯನ್ನು ಮತ್ತು ಕ್ಷೇತ್ರದಲ್ಲಿ ಅತಿ ಹೆಚ್ಚು ಮತದಾರರನ್ನು ಹೊಂದಿದೆ. ರಬಕವಿ ಬನಹಟ್ಟಿ ನಗರಸಭೆಯ 31 ಸ್ಥಾನಗಳಲ್ಲಿ ಬನಹಟ್ಟಿ ನಗರಕ್ಕೆ 16 ವಾರ್ಡ್ ಗಳು ಬರುತ್ತವೆ. ಇನ್ನೂ ತಾಲ್ಲೂಕಿನ ದೊಡ್ಡ ಗ್ರಾಮಗಳು ಇದೇ ಭಾಗಕ್ಕೆ ಬರುವುದರಿಂದ ಇಲ್ಲಿಯ ಪ್ರಜಾಸೌಧ ನಿರ್ಮಾಣ ಮಾಡಲು ಕ್ರಮ ತೆಗೆದುಕೊಳ್ಳಬೇಕು ಎಂದು ತಿಳಿಸಿದರು.

ಸಭೆಯಲ್ಲಿ ದುಂಡಪ್ಪ ಮಾಚಕನೂರ, ಶಂಕರ ಜುಂಜಪ್ಪನವರ, ಸುರೇಶ ಚಿಂಡಕ, ಶಿವಾನಂದ ಗಾಯಕವಾಡ, ಶ್ರೀಶೈಲ ಬೀಳಗಿ, ಬಾಳು ಗಣೇಶನವರ ಮಾತನಾಡಿದರು.

ಸಿದ್ದನಗೌಡ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ನಗರಸಭೆಯ ಅಧ್ಯಕ್ಷೆ ವಿದ್ಯಾ ಧಬಾಡಿ, ಶ್ರೀಶೈಲ ಧಬಾಡಿ, ಶ್ರೀಪಾದ ಬಾಣಕಾರ, ಬದ್ರಿನಾರಾಯಣ ಭಟ್ಟಡ, ಗಂಗಪ್ಪ ಮುಗತಿ, ಮಲ್ಲಿಕಾರ್ಜುನ ಬಾಣಕಾರ, ಡಾ.ಪಟ್ಟಣ, ಬಸವರಾಜ ಭದ್ರನವರ, ಬಸವಂತ ಜಾಡಗೌಡ, ಸಿದ್ರಾಮಪ್ಪ ಸವದತ್ತಿ, ಹುಮಾಯುನ ಮುಲ್ಲಾ, ಗಿರೀಶ ಕಾಡದೇವರ, ಪ್ರಶಾಂತ ಕೊಳಕಿ, ಶ್ರೀಶೈಲ ಯಾದವಾಡ, ಶಿವು ಗುಂಡಿ, ಚಂದ್ರಶೇಖರ ಮಿರ್ಜಿ, ಸುಭಾಸ ಹನಗಂಡಿ, ಮಲ್ಲಣ್ಣ ಕಕಮರಿ, ಶಂಕರ ಕೆಸರಗೊಪ್ಪ, ಶಂಕರ ಟಿರಕಿ, ಮಹಾಶಾಂತ ಶೆಟ್ಟಿ ಸೇರಿದಂತೆ ಅನೇಕರು ಇದ್ದರು.

# ನಮ್ಮ ಸಾಧನೆ ಬೇರೆಯವರಿಗೆ ಪ್ರೇರಣೆಯಾಗಬೇಕು



**ಗೋಕಾಕ:** ನಮ್ಮ ಸಾಧನೆ ಬೇರೆಯವರಿಗೆ ಪ್ರೇರಣೆಯಾಗಬೇಕು ಎಂದು ಚೆನ್ನಬಸವೇಶ್ವರ ವಿದ್ಯಾಪೀಠದ ನಿರ್ದೇಶಕ, ನ್ಯಾಯವಾದಿ ಶಂಕರ ಗೋರೋಶಿ ಹೇಳಿದರು.

ಶನಿವಾರದಂದು ನಗರದ ಚೆನ್ನಬಸವೇಶ್ವರ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಹಮ್ಮಿಕೊಂಡ ಶ್ರೀ ಸಿದ್ದಲಿಂಗೇಶ್ವರ ಬಿ.ಸಿ.ಎ ಮಹಾವಿದ್ಯಾಲಯದ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪಾಲಕರ ಧ್ಯೇಯೋದ್ದೇಶಗಳನ್ನು ಈಡೇರಿಸಲು ವಿದ್ಯಾರ್ಥಿಗಳು ತನು,ಮನದಿಂದ ವಿದ್ಯಾಭ್ಯಾಸ ಮಾಡಿ ಅವರಿಗೆ ಕೀರ್ತಿ ತರಬೇಕು. ಸತತ ಪ್ರಯತ್ನದಿಂದ ವಿದ್ಯಾರ್ಥಿಗಳು ಸಾಧಕರಾಗಲು ಸಾಧ್ಯ ಆ ದಿಸೆಯಲ್ಲಿ ವಿದ್ಯಾರ್ಥಿಗಳು ತಮ್ಮ ವಿದ್ಯಾರ್ಥಿ ಜೀವನದಲ್ಲಿ ಉತ್ತಮ ವಿದ್ಯಾಭ್ಯಾಸ ಮಾಡಿ ಸಾಧಕರಾಗಬೇಕು. ಭಾರತ ದೇಶದಲ್ಲಿ ಸಾಧಕರಿಗೆ ಉತ್ತಮ ಅವಕಾಶಗಳು ಇವೆ. ಶ್ರದ್ಧೆ ಮತ್ತು ಭಕ್ತಿಯಿಂದ ನಾವು ನಮ್ಮ ಕೆಲಸಗಳನ್ನು ಮಾಡಿದರೆ ಏನುಬೇಕದರೂ ಸಾಧಿಸಲು ಸಾಧ್ಯ. ಆ ನಿಟ್ಟಿನಲ್ಲಿ ಚೆನ್ನಬಸವೇಶ್ವರ ವಿದ್ಯಾಸಂಸ್ಥೆ ವಿದ್ಯಾರ್ಥಿಗಳನ್ನು ತಯಾರು ಮಾಡುತ್ತಿದೆ ಎಂದು ಹೇಳಿದರು.

ಆಡಳಿತಾಧಿಕಾರಿ ಅಡಿವೇಶ ಗವಿಮಠ ಮಾತನಾಡಿ ಅವಶ್ಯಕತೆ ಹಾಗೂ ಅನುಕೂಲಕ್ಕೆ ತಕ್ಕಂತೆ ವರ್ತಿಸದೆ ವಿಶಿಷ್ಟ ರೀತಿಯಲ್ಲಿ ತಮ್ಮನ್ನು ತಾವು ಅಳವಡಿಸಿಕೊಂಡು ಸಾಧನೆಯ ಹಾದಿಯಲ್ಲಿ ಸಾಗಬೇಕು. ನಮಗೆ ದೊರೆಯುವ ಸೌಲಭ್ಯಗಳನ್ನು ಸದುಪಯೋಗ ಪಡೆಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು. ನಮ್ಮ ಮೇಲೆ ನಮ್ಮಗಿರುವ ನಂಬಿಕೆಯನ್ನು ಗುರುತಿಸಿಕೊಂಡು ಅದನ್ನು ಒಳ್ಳೆಯ ರೀತಿಯಲ್ಲಿ ರೂಪಿಸಿಕೊಳ್ಳಬೇಕು. ಸಾಧಕರಾಗಲು ಸಮಾಜದಲ್ಲಿ ಸಾಕಷ್ಟು ದಾರಿಗಳು ಇವೆ ಅವುಗಳನ್ನು ಹುಡುಕಿಕೊಂಡು ತಮಗೆ ಅನುಕೂಲವಾಗುವ ದಾರಿಯನ್ನು ಆಯ್ಕೆ ಮಾಡಿಕೊಂಡರೆ ಸಾಧನೆ ಕಟ್ಟಿಟ ಬುತ್ತಿ ಹಾಗಾಗಿ ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಕಡೆ ಹೆಚ್ಚು ಗಮನ ಹರಿಸಿ ಓದಬೇಕು ಎಂದು ಹೇಳಿದರು.

ವೇದಿಕೆಯ ಮೇಲೆ ಅರ್ಪಣಾ ಕುಲಕರ್ಣಿ,

# ಗುರುವಂದನೆ -ಸ್ನೇಹ ಸಮ್ಮಿಲನ ನಮ್ಮ ಸಂಸ್ಕೃತಿ- ಪರಂಪರೆ ಗಳ ಪ್ರತೀಕ : ಚನ್ನರಾಜ ಹಟ್ಟಿಹೊಳಿ

**ಬೆಳಗಾವಿ :** ಹಳೆಯ ಘಟನೆಗಳ ಅವಲೋಕನ ನಾವು ಮುಂದೆ ಸಾಗಬೇಕಾದ ದಾರಿಯ ಕುರಿತು ಸ್ಪಷ್ಟತೆ ಒದಗಿಸುತ್ತದೆ. ನಮ್ಮ ಜೀವನದಲ್ಲಿ ದಾರಿ ತೋರಿದ ಶಿಕ್ಷಕರನ್ನು ಸ್ನೇಹಿತರೊಂದಿಗೆ ಗೌರವಿಸುವ ಇಂತಹ ಕಾರ್ಯಕ್ರಮ ನಮ್ಮ ಪರಂಪರೆ, ಸಂಸ್ಕೃತಿಯ ಪ್ರತೀಕ ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಹೇಳಿದರು.

ಬಾಳೇಕುಂದ್ರಿ ಕೆ.ಎಚ್ ಗ್ರಾಮದ ಜನತಾ ವಿದ್ಯಾಲಯದ ಸನ್ 1992–93ನೇ ಸಾಲಿನ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಬಳಗದಿಂದ ಭಾನುವಾರ ಹಮ್ಮಿಕೊಳ್ಳಲಾಗಿದ್ದ ಗುರುವಂದನೆ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ನಮ್ಮ ಜೀವನದಲ್ಲಿ ಬಹಳಷ್ಟು ಅವಿಸ್ಮರಣೀಯ ಘಟನೆಗಳು ನಡೆದಿರುತ್ತವೆ. ಆ ಸಂದರ್ಭದಲ್ಲಿ ನಮ್ಮೊಂದಿಗಿದ್ದವರೊಂದಿಗೆ




ಅಂದಿನ ಘಟನೆಗಳನ್ನು ಸ್ಮರಿಸಿಕೊಳ್ಳುವುದರಲ್ಲಿರುವ ಖುಷಿಯೇ ಬೇರೆ. ಇಂತಹ ಸ್ನೇಹ ಸಮ್ಮಿಲನಗಳು ನಮಗೆ ಅಂತಹ ಅವಕಾಶವನ್ನು ಒದಗಿಸುತ್ತವೆ. ಜೊತೆಗೆ ಈ ರೀತಿ ನಮಗೆ ದಾರಿ ತೋರಿದ ಶಿಕ್ಷಕರನ್ನು ಗೌರವಿಸುವುದು ನಮ್ಮ ಸಂಸ್ಕೃತಿಯ ಶ್ರೇಷ್ಠತೆನ್ನು ತೋರಿಸುತ್ತದೆ ಎಂದು ಚನ್ನರಾಜ ವಿವರಿಸಿದರು.

ಇಂತಹ ಅಪರೂಪದ ಕಾರ್ಯಕ್ಕಮದಲ್ಲಿ ಪಾಲ್ಗೊಂಡಿರುವುದಕ್ಕೆ ನನಗೆ ಬಹಳ ಖುಷಿಯಾಗುತ್ತಿದೆ. ನಾವೆಲ್ಲ ನಮ್ಮ ಬೇರುಗಳನ್ನು ಮರೆಯಬಾರದು. ನಮ್ಮ ಊರು, ಕಲಿತ ಶಾಲೆ, ಹಳೆಯ ಸ್ನೇಹಿತರು, ಕಲಿಸಿದ ಗುರುಗಳು, ತಂದೆ– ತಾಯಿ ಇವರನ್ನೆಲ್ಲ ಜೀವನ ಪೂರ್ತಿ ಸ್ಮರಿಸಬೇಕು. ಅವರ ಕಷ್ಟ ಸುಖಗಳಲ್ಲಿ ಭಾಗಿಯಾಗಬೇಕು. ಅದರಿಂದ ನಮ್ಮಲ್ಲಿ ಸಾರ್ಥಕತೆಯ ಭಾವನೆ ಮೂಡುತ್ತದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ವಿದ್ಯಾಲಯದ ನಿವೃತ್ತ ಉಪಾಧ್ಯಾಯರಾದ ನಮಸಯ್ಯ ಹಿರೇಮಠ್, ಗ್ರಾಮ ಪಂಚಾಯತ್ ಅಧ್ಯಕ್ಷರಾದ ನಮ್ರುತಾ ಜಾಧವ್, ಕಾಂಗ್ರೆಸ್ ಮುಖಂಡರಾದ ನಾಗೇಶ್ ದೇಸಾಯಿ, ಮಹಾಂತೇಶ್ ಮತ್ತಿಕೊಪ್ಪ, ಮಾಜಿ ತಾಲೂಕ ಪಂಚಾಯತ್ ಸದಸ್ಯರಾದ ನಿಲೇಶ್ ಚಂದಗಡ್ಕರ್, ಗ್ರಾಮಸ್ಥರು, ಶಾಲೆಯ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅಪರ ಸರ್ಕಾರಿ ವಕೀಲ ಹುದ್ದೆಗೆ ಅರ್ಜಿ ಆಹ್ವಾನ

**ಹಾವೇರಿ.** ಜಿಲ್ಲೆಯ ಹಿರೇಕೆರೂರು ತಾಲೂಕಿನ ಹಿರಿಯ ಶ್ರೇಣಿ ನ್ಯಾಯಾಲಯದ ಅಪರ ಸರ್ಕಾರಿ ವಕೀಲರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಯು ಕನಿಷ್ಠ 07 ವರ್ಷಗಳ ಕಾಲ ವಕೀಲ ವೃತ್ತಿ ಪೂರೈಸಿರಬೇಕು. ಜಿಲ್ಲಾ ಬಾರ್ ಅಸೋಸಿಯೇಶನ್ನಿನ ಸದಸ್ಯರಾಗಿರಬೇಕು. ಕರ್ನಾಟಕ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತುಗಳು ನಿಯಮ 1977ಗಳನ್ವಯ ಎಲ್ಲಾ ಷರತ್ತುಗಳಿಗೆ ಅರ್ಹನಾಗಿರಬೇಕು.

ಅರ್ಹ ಅಭ್ಯರ್ಥಿಗಳು ತಮ್ಮ ವೈಯಕ್ತಿಕ ವಿವರಗಳೊಂದಿಗೆ ಅಗತ್ಯ ದಾಖಲೆಗಳೊಂದಿಗೆ ಅರ್ಜಿಯನ್ನು ದಿನಾಂಕ 28–08–2025ರೊಳಗಾಗಿ ಖುದ್ದಾಗಿ ಅಥವಾ ಅಂಚೆ ಮೂಲಕ ಹಾವೇರಿ ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಖಣದಾಳ ಗ್ರಾಮದಲ್ಲಿ ಅದ್ದೂರಿಯಾಗಿ ಶ್ರೀ ಕೃಷ್ಣ ಜನ್ಮಾಷ್ಟಮಿ ಆಚರಣೆ



**ಮುಗಳಖೋಡ:** ಸಮೀಪದ ಖಣದಾಳ ಗ್ರಾಮದ ಭಕ್ತರೆಲ್ಲ ಸೇರಿ ಶ್ರೀ ಹುಲಕಾಂತೇಶ್ವರ ಒಳಗಿನ ಮಠದಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿಯನ್ನು ಅದ್ದೂರಿಯಾಗಿ ಆಚರಿಸಿದರು. ಶ್ರೀ ಈರಯ್ಯಾ ಸ್ವಾಮೀಜಿ ಶ್ರೀ ಕೃಷ್ಣನ ಪವಾಡಗಳನ್ನು ಮತ್ತು ಅವನ ವಿವಿಧ ಅವತಾರಗಳನ್ನು ಕುರಿತು ಭಕ್ತರಿಗೆ ತಿಳಿಸಿದರು.

ನಂತರ ಸುಮಂಗಲೆಯರು ಎಲ್ಲರೂ ಸೇರಿ ತೂಗುವ ತೊಟ್ಟಿಲಿನಲ್ಲಿ ಶ್ರೀ ಬಾಲ ಕೃಷ್ಣನ ಮೂರ್ತಿ ಇಟ್ಟು ತೊಟ್ಟಿಲ ತೂಗುತ್ತಾ ಜೋಗುಳ ಹಾಡುತ್ತ ಶನಿವಾರ ರಾತ್ರಿ 12 ಗಂಟೆಗೆ ಶ್ರೀ ಕೃಷ್ಣ ಎಂದು ನಾಮಕರಣ ಮಾಡಿ ಎಲ್ಲರಿಗೂ ಗುಗ್ಗರಿ ಹಂಚಿ ತಮ್ಮ ಭಕ್ತಿಯನ್ನು ಸಮರ್ಪಿಸಿದರು.

ಸ್ಥಾನಿಕ ಮಂಡಳಿಗಳಿಂದ ಭಜನೆ, ಕೀರ್ತನೆ, ಸತ್ಸಂಗ ಹಾಗೂ ಗ್ರಾಮದ ಸ್ವಾಮೀಜಿಗಳಿಂದ ಪ್ರವಚನ ನಡೆಯಿತು. ಆಗಮಿಸಿದ ಮಹಿಳೆಯರ ಉಡಿ ತುಂಬುವ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಭಕ್ತಾದಿಗಳಿಗೆ ಶ್ರೀಮತಿ ಸಂಗೀತಾ ನಿರಪಾದಯ್ಯಾ ಹಿರೇಮಠ ದಂಪತಿಗಳು ದಾಸೋಹದ ಸೇವೆ ಮಾಡಿದರು.

ಈ ಸಂದರ್ಭದಲ್ಲಿ ಗ್ರಾಮದ ಎಲ್ಲ ಸ್ವಾಮೀಜಿಗಳು, ಶ್ರೀ ಗುರು ಹುಲಕಾಂತೇಶ್ವರ ಒಳಗಿನ ಮಠದ ಕಮೀಟಿಯ ಸರ್ವ ಸದಸ್ಯರು, ಹಿರಿಯರು, ಮುಖಂಡರು, ಸೇವಾ ಸಮಿತಿಗಳು ಸೇರಿದಂತೆ ಸುಮಾರು 500ಕ್ಕೂ ಹೆಚ್ಚು ಭಕ್ತಾದಿಗಳು ಭಾಗಿಯಾಗಿದ್ದರು.

# ಗಣೇಶೋತ್ಸವ -ಈದ್ ಮಿಲಾದ್ ಹಬ್ಬವನ್ನು ಹಿಂದೂ-ಮುಸ್ಲಿಮರು ಶಾಂತಿಯುತವಾಗಿ ಹಬ್ಬ ಆಚರಿಸಬೇಕು

**ಗೋಕಾಕ:** ಗಣೇಶೋತ್ಸವ ಮತ್ತು ಈದ್ ಮಿಲಾದ್ ಹಬ್ಬವನ್ನು ಹಿಂದೂ–ಮುಸ್ಲಿಮರು ಪರಸ್ಪರ ಸ್ನೇಹ, ಸೌಹಾರ್ದತೆಯಿಂದ ವರ್ತಿಸಿ ಶಾಂತಿಯುತವಾಗಿ ಹಬ್ಬ ಆಚರಿಸಬೇಕು ಎಂದು ತಹಶೀಲ್ದಾರ ಡಾ. ಮೋಹನ ಭಸ್ಮೆ ಹೇಳಿದರು.

ಇತ್ತೀಚೆಗೆ ನಗರದ ನಗರಸಭೆ ಸಮುದಾಯ ಭವನದಲ್ಲಿ ಪೊಲೀಸ್ ಇಲಾಖೆ ವತಿಯಿಂದ ಹಮ್ಮಿಕೊಂಡ ಶಾಂತಿ ಪಾಲನಾ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಪ್ರತಿ ಹಬ್ಬದ ಹಿಂದೆ ಪೌರಾಣಿಕ, ಐತಿಹಾಸಿಕ ಹಿನ್ನೆಲೆ ಇರುತ್ತದೆ. ಹಬ್ಬಗಳನ್ನು ಸೌಹಾರ್ದತೆಯಿಂದ ಆಚರಿಸಬೇಕು. ಇನ್ನೊಬ್ಬರ ಭಾವನೆಗೆ ಧಕ್ಕೆ ತರುವುದಾಗಲಿ ಅವಹೇಳನ ಮಾಡುವುದಾಗಲಿ ಮಾಡಬಾರದು ಶಾಂತಿ ಸುವ್ಯವಸ್ಥೆ




ಕದಡುವ ಕೆಲಸ ಮಾಡಬಾರದು ಎಂದ ಅವರು ಸಾರ್ವಜನಿಕವಾಗಿ ವಿವಿಧ ಸಂಘ ಸಂಸ್ಥೆಗಳು ಗಣೇಶ ಪ್ರತಿಷ್ಠಾಪಿಸುವ ಮುನ್ನ ಪಾಲಿಸಬೇಕಾದ ನಿಯಮ ಹಾಗೂ ನಿಬಂಧನಗಳನ್ನು ಚಾಚೂ ತಪ್ಪದೆ ಪಾಲಿಸಬೇಕು, ಪೊಲೀಸ್ ಇಲಾಖೆಯ ಅನುಮತಿ ಕಡ್ಡಾಯವಾಗಿರಬೇಕು, ಯಾವುದೇ ಗಣೇಶ ಸಂಘ ಸಂಸ್ಥೆಯವರು, ಗಣೇಶ ಹಬ್ಬವನ್ನು ಶ್ರದ್ಧಾ–ಭಕ್ತಿಯಿಂದ ಶಾಂತಿ ಮತ್ತು ಸೌಹಾರ್ದತೆಯ ಸಂಕೇತವಾಗಿ ಆಚರಿಸಬೇಕು. ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ತೆಗೆದುಕೊಳ್ಳಬೇಕು, ಪೊಲೀಸ್ ಇಲಾಖೆಯ ಆದೇಶಗಳನ್ನು ಚಾಚು ತಪ್ಪದೆ ಪಾಲಿಸುವ ಮೂಲಕ ಪೊಲೀಸರೊಂದಿಗೆ ಸಹಕರಿಸಬೇಕು ಜೊತೆಗೆ ಗಣೇಶೋತ್ಸವಗಳು ಸಾರ್ವಜನಿಕರ ಪ್ರಸಂಶೆಗೆ ಪಾತ್ರವಾಗುವಂತಾಗಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಡಿ.ವಾಯ್. ಎಸ.ಪಿ. ರವಿ ನಾಯಿಕ, ಸಿಪಿಐ ಸುರೇಶ್ ಬಾಬು, ಹೆಸ್ಕಾಂ ಅಧಿಕಾರಿ ಎಸ್.ಪಿ.ವರಾಳೆ, ಪಿ.ಎಸ್.ಐ ಕೆ.ವಾಲಿಕರ, ನಗರಸಭೆ ಅಧ್ಯಕ್ಷ ಪ್ರಕಾಶ ಮುರಾರಿ, ಪೌರಾಯುಕ್ತ ರವಿ ರಂಗಸುಭೆ, ಎಂ.ಎಚ್.ಗಜಾಕೋಶ, ನಗರಸಭೆ ಸದಸ್ಯ ಕುತಬುದ್ದೀನ ಗೋಕಾಕ, ಪ್ರಭು ಚವ್ಹಾಣ, ಶಿವು ಪಾಟೀಲ ಉಪಸ್ಥಿತರಿದ್ದರು.

## ಅಪರಿಚಿತ ವ್ಯಕ್ತಿ ಶವ ಪತ್ತೆ

**ಬೆಳಗಾವಿ, :** ನಗರದ ರೈಲು ನಿಲ್ದಾಣದ ಮಧ್ಯ ಸುಮಾರು 30 ರಿಂದ 35 ವರ್ಷ ವಯಸ್ಸಿನ ಅಪರಿಚಿತ ವ್ಯಕ್ತಿಯು ಚಲಿಸುವ ವಂದೇ ಭಾರತ ಎಕ್ಸಪ್ರೆಸ್ ರೈಲಿಗೆ ಬಿದ್ದು ಸ್ಥಳದಲ್ಲಿ ಮೃತ ಪಟ್ಟಿರುತ್ತಾನೆ ಎಂದು ನಗರದ ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ.

ಮೃತನ ವಯಸ್ಸು 5.6 ಅಡಿ ಎತ್ತರ, ಗೋಧಿ ಮೈಬಣ್ಣ, ಮೈಯಿಂದ ಸದೃಡ, ಮುಖವು ಸಂಪೂರ್ಣ ಜಜ್ಜಿ ಹೋಗಿರುತ್ತದೆ. ಹಳದಿ ಬಣ್ಣದ ಪುಲ್ ಶರ್ಟ, ನೀಲಿ ಹಾಫ್ ಬನಿಯನ ಹಾಗೂ ನೀಲಿ ಬಣ್ಣದ ನೈಟ್ ಪ್ಯಾಂಟ್ ಧರಿಸಿರುತ್ತಾನೆ.

ಅಪರಿತ ವ್ಯಕ್ತಿ ವಾರಸುದಾರರ ಬಗ್ಗೆ ಮಾಹಿತಿ ದೊರೆತಲ್ಲಿ ನಗರದ ರೈಲ್ವೆ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 0831–2405273 ಹಾಗೂ ಪಿ.ಎಸ್.ಐ ಇವರ ದೂರವಾಣಿ ಸಂಖ್ಯೆ: 9480802127 ಅಥವಾ ರೈಲ್ವೆ ಪೊಲೀಸ ಕಂಟ್ರೋಲ್ ರೂಮ್ ಸಂಖ್ಯೆ: 080–22871291 ಗೆ ಸಂಪರ್ಕಿಸಬಹುದಾಗಿದೆ ಎಂದು ರೈಲ್ವೆ ಪೊಲೀಸ್ ಠಾಣೆಯ ತನಿಖಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತ ಬಾಂಧವರ ಗಮನಕ್ಕೆ

**ಬೆಳಗಾವಿ, :** 2025–26 ಸಾಲಿನ ಮುಂಗಾರು ಹಂಗಾಮಿನಲ್ಲಿ ಸಾಲ ಪಡೆದ ರೈತರು ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭಿಮಾ ಯೋಜನೆ ಅಡಿಯಲ್ಲಿ ತಮ್ಮ ಹೊಲದಲ್ಲಿ ಬೆಳೆದ ಸೋಯಾಅವರೆ ಹಾಗೂ ಇತರೆ ಬೆಳೆಗಳಿಗೆ ವಿಮೆ ಮಾಡಿಸಲು ಆಗಸ್ಟ 30, 2025 ಕೊನೆಯ ದಿನಾಂಕವಾಗಿದ್ದು, ರೈತರು ತಾವು ಸಾಲ ಪಡೆದ ಬ್ಯಾಂಕ್ ಅಥವಾ ಸೊಸೈಟಿಯಲ್ಲಿ ಕಂತನ್ನು ಭರಿಸಿ ವಿಮೆ ಮಾಡಬಹುದಾಗಿದೆ.

ಬೆಳಗಾವಿ ತಾಲೂಕಿನ ಎಲ್ಲ ಹೋಬಳಿ ಮಟ್ಟದಲ್ಲಿ ಸೋಯಾಅವರೆ ಅಧಿಸೂಚಿತ ಬೆಳೆಗಳಲ್ಲಿ ಒಂದಾಗಿದ್ದು, ಹೋಬಳಿ ಮಟ್ಟದಲ್ಲಿ ಹಾನಿ ಸಂಭವಿಸಿದಲ್ಲಿ ಇದರ ಪ್ರಯೋಜನವನ್ನು ರೈತರು ಪಡೆಯಬಹುದಾಗಿದೆ ಎಂದು ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ತತ್ವಾದರ್ಶಗಳ ಎಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು



ರಾಯಬಾಗ : 15 : ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ತತ್ವಾದರ್ಶಗಳನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಮಾಜಿ ವಿಧಾನ ಪರಿಷತ್ತು ಸದಸ್ಯ ವಿವೇಕರಾವ ಪಾಟೀಲ ಅವರು ಹೇಳಿದರು.

ಅವರು ತಾಲೂಕಿನ ನಾಗರಾಳ (ರಾಯಬಾಗ ರೈಲ್ವೆ ಸ್ಟೇಶನ್) ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಯುವಕ ಸಂಘದ ಆಶ್ರಯದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಜಯೋತ್ಸೋತ್ಸವ ಹಾಗೂ ಪುತ್ಥಳಿಯ ಕಂಪೌಂಡ ಕಟ್ಟಡದ ಉದ್ಘಾಟನಾ ಸಮಾರಂಭದ ಜ್ಯೋತಿ ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಪರಮಾನಂದವಾಡಿ ಶ್ರೀ ಗುರುದೇವ ಬ್ರಹ್ಮಾನಂದ ಆಶ್ರಮದ ಡಾ.ಅಭಿನವ ಬ್ರಹ್ಮಾನಂದ ಮಹಾಸ್ವಾಮಿಯವರ ದಿವ್ಯಸಾನಿಧ್ಯ ವಹಿಸಿದರು. ಈ ಸಂದರ್ಭದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಯುವಕ ಸಂಘದ ಅಧ್ಯಕ್ಷ ರಾಯಪ್ಪ ಗೊಂಡೆ, ಉಪಾಧ್ಯಕ್ಷ ಬೀರಪ್ಪ ಗೊಂಡೆ, ಕಾರ್ಯದರ್ಶಿ ರಮೇಶ ಗೊಂಡೆ, ಅಪ್ಪಾಸಾಬ ಕೆಂಗನ್ನವರ, ಭೀಮು ಮುಧೋಳೆ, ವಸಂತ ಗೊಂಡೆ ಶಿಕ್ಷಕ ಬಿ.ಎಲ್. ಘಂಟಿ ಉಪನ್ಯಾಸ ನೀಡಿದರು. ಎಸ್.ಬಿ.ಸಲಗರೆ ಕಾರ್ಯಕ್ರಮ ನಿರೂಪಿಸಿದರು.



**ರಾಯಬಾಗ:** ಪಟ್ಟಣದ ಗುರುಶಾಂತೇಶ್ವರ ಸಂಸ್ಥಾನ ಹುಕ್ಕೇರಿ ಹೀರೆಮಠ ರಾಯಬಾಗ ಶಾಖೆಯಲ್ಲಿ ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಯ ರಾಷ್ಟ್ರೀಯ ಉಪಾಧ್ಯಕ್ಷರಾಗಿ ಆಯ್ಕೆಯಾದ ಹುಕ್ಕೇರಿ ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿಯವರನ್ನು ಶಾಸಕ ದುರ್ಯೋಧನ ಐಹೊಳೆ ಅವರು ಶುಕ್ರವಾರ ಸಾಯಂಕಾಲ ಗೌರವಿಸಿ ಆಶೀರ್ವಾದ ಪಡೆದರು. ಹುಣಸ್ಯಾಳ ಸಿದ್ದಲಿಂಗೇಶ್ವರ ಕೈವಲ್ಯ ಆಶ್ರಮದ ನಿಜಗುಣ ದೇವರು, ಬುಡರಕಟ್ಟಿ ಗುರುಮಡಿವಾಳೇಶ್ವರ ಮಠದ ಶಿವಪಂಚಾಕ್ಷರಿ ಸ್ವಾಮೀಜಿ, ಎಲ್.ಬಿ.ಚೌಗುಲೆ, ಅರುಣ ಐಹೊಳೆ, ಸದಾಶಿವ ಘೋರ್ಪಡೆ, ಅಣ್ಣಾಸಾಹೇಬ ಖೇಮಲಾಪೂರೆ, ಪೃಥ್ವಿರಾಜ ಜಾಧವ, ಅಪ್ಪಾಸಾಹೇಬ ಮೈಶಾಳೆ, ಪ್ರಕಾಶ ಮಿರ್ಜೆ, ಸಂಜಯ ಮೈಶಾಳೆ, ಬಸವರಾಜ ಡೋಣವಾಡೆ, ಅಶೋಕ ಮೈಶಾಳೆ, ಡಾ.ಪ್ರಕಾಶ ಸಗರೆ, ಗಜು ಜಲಾಲಪುರೆ, ರಾಜಶೇಖರ ಖಣದಾಳೆ, ಅಲಗೊಂಡ ತಟ್ಟಿಮನಿ, ಅಪ್ಪಾಸಾಹೇಬ ಬ್ಯಾಕೂಡೆ ಸೇರಿ ಅನೇಕರು ಇದ್ದರು.

# ಕನ್ನಡ - ಆಂಗ್ಲ ಮಾಧ್ಯಮ ಪ್ರಾಥಮಿಕ - ಪ್ರೌಢಶಾಲೆಯಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ ಆಚರಣೆ

**ತಾಳಿಕೋಟೆ,** ಪಟ್ಟಣದ ಸರ್ವಜ್ಞ ವಿದ್ಯಾಪೀಠ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಪುಟ್ಟ ಪುಟ್ಟ ಮಕ್ಕಳು ಶ್ರೀ ಕೃಷ್ಣ ವೇಷ ಹಾಕಿಕೊಂಡು ಬಂದಿದ್ದು ವಿಶೇಷವಾಗಿತ್ತು, ತದನಂತರ ಶ್ರೀ ಕೃಷ್ಣನ ವೇಷದಾರಿ ಹಾಕಿಕೊಂಡು ಬಂದ ಮಗುವನ್ನು ತೊಟ್ಟಿಲನಲ್ಲಿ ಮಲಗಿಸಿ ಎಲ್ಲಾ ಗುರು ಮಾತೆಯರು ತೂಗುವುದರ ಮೂಲಕ ಶ್ರೀ ಕೃಷ್ಣ ನಾಮಾಂಕಿತವನ್ನು ಜಪಿಸಿ ವಿಶೇಷವಾಗಿ ಕಾರ್ಯಕ್ರಮವನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಸ್ಥಾಪಕ ಅಧ್ಯಕ್ಷರಾದ ಸಿದ್ದನಗೌಡ ಮಂಗಳೂರ, ಮುಖ್ಯಗುರುಗಳಾದ ಸಂತೋಷ ಪವಾರ, ರಾಜು ಜವಳಗೇರಿ, ದೈಹಿಕ ಶಿಕ್ಷಕರಾದ ಬಸವರಾಜ ಚಳಗಿ, ಶಾಂತಗೌಡ ಬಿರಾದಾರ, ಭೀಮನಗೌಡ ಸಾಸನೂರ, ರಸೂಲಸಾ ತುರ್ಕನಗೇರಿ, ರವಿಕುಮಾರ ಮಲ್ಲಾಬಾದಿ, ಬಸವರಾಜ ಸವದತ್ತಿ, ಸಿದ್ದನಗೌಡ ಮೂದನೂರು, ಸಂಗಮೇಶ ಬಿರಾದಾರ, ಶರಣಗೌಡ ಕಾಚಾಪುರ, ಸಂಜೀವಕುಮಾರ ರಾಠೋಡ. ರೂಪಾ ಪಾಟೀಲ, ಶಿವಲೀಲಾ ಚುಂಚನೂರ, ದೇವಿಂದ್ರ ಗುಳೆದ, ಅನಿತಾ ಚೌದ್ರಿ, ಸಂಗೀತ




ಬಿರಾದಾರ, ಶಿವಕುಮಾರ ಕುಂಬಾರ, ಮೇಘಾ ಪಾಟೀಲ, ರಾಜಬಿ ಬಿದರಿ, ಶ್ರುತಿ ಚೌದ್ರಿ, ತನುಶ್ರೀ ಮಹೇಂದ್ರಕರ್, ಮಾರುತಿ ಕಾರ್ಬಾರಿ, ದೇವರಾಜ್ ದೇಸಾಯಿ, ನಾಗರತ್ನ ಮೈಲೇಶ್ವರ, ಬೋರಮ್ಮ ಜ್ಯೋತಿ ಪೊಲೀಸಪಾಟೀಲ, ಶೃತಿ ಚೌದ್ರಿ, ರವಿಕುಮಾರ ಅನದಿನ್ನಿ, ಹೀನಾಕೌಸರ ಸನದಿ, ಹಾಗೂ ಸರ್ವ ಗುರು ಬಳಗದವರು ಮತ್ತು ಮುದ್ದು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ದಿ.21 ರಂದು ಜಗದಾಳ ಪಿಕೆಪಿಎಸ್‌ನ ಅಮೃತ ಮಹೋತ್ಸವ

**ರಬಕವಿ–ಬನಹಟ್ಟಿ, :** ತಾಲೂಕಿನ ಜಗದಾಳ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ 75ನೇ ವರ್ಷದ 'ಅಮೃತ ಮಹೋತ್ಸವ' ಕಾರ್ಯಕ್ರಮವು ದಿ.21 ರಂದು ಗುರುವಾರ ಬೆಳಿಗ್ಗೆ 11 ಗಂಟೆಗೆ ನೂತನ ಗೋದಾಮು ಆವರಣದಲ್ಲಿ ಜರುಗಲಿದೆಯೆಂದು ಸಂಘದ ಅಧ್ಯಕ್ಷ ಸುಭಾಸ ಉಳ್ಳಾಗಡ್ಡಿ ತಿಳಿಸಿದರು.

ಸಾನಿಧ್ಯವನ್ನು ಬನಹಟ್ಟಿ ಹಿರೇಮಠದ ಶರಣಬಸವ ಶಿವಾಚಾರ್ಯರು ವಹಿಸಲಿದ್ದಾರೆ. ಶಾಸಕ ಸಿದ್ದು ಸವದಿ ಗೋದಾಮು ಉದ್ಘಾಟಿಸಲಿದ್ದು, ವ್ಯಾಪಾರ ಮಳಿಗೆಗಳನ್ನು ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಜಯಕುಮಾರ ಸರನಾಯಕ ಉದ್ಘಾಟಿಸಲಿದ್ದಾರೆ. ಸಹಕಾರ ಧ್ವಜಾರೋಹಣವನ್ನು ವಿಧಾನಪರಿಷತ್ ಸದಸ್ಯೆ ಉಮಾಶ್ರೀ ನೆರವೇರಿಸಲಿದ್ದಾರೆಂದು ಉಳ್ಳಾಗಡ್ಡಿ ತಿಳಿಸಿದರು. ಅತಿಥಿಗಳಾಗಿ ಬಿಡಿಸಿಸಿ ನಿರ್ದೇಶಕ ಬಸನಗೌಡ ಪಾಟೀಲ, ಗ್ರಾಪಂ ಅಧ್ಯಕ್ಷೆ ಇಂದಿರಾ ಹಾದಿಮನಿ, ಸಿದ್ಧನಗೌಡ ನೀಲಪ್ಪನವರ, ದಾನಯ್ಯ ಹಿರೇಮಠ, ವಿ. ಮಹೇಶ್ವರಪ್ಪ, ಮಂಜುನಾಥ ರೆಡ್ಡಿ ಎಸ್. ರಾಮನಗೌಡ



ಪಾಟೀಲ, ಎಸ್.ಆರ್. ನ್ಯಾಮಗೌಡ, ಎಂ.ಎಂ. ಮರನೂರ, ಭರತೇಶ ಹರವಿ ಆಗಮಿಸಲಿದ್ದಾರೆ. ಇದೇ ಸಂಘದ ಮಾಜಿ ಅಧ್ಯಕ್ಷರುಗಳನ್ನು ಸನ್ಮಾನಿಸಲಾಗುವದೆಂದು ತಿಳಿಸಿದರು. ಸಭೆಯಲ್ಲಿ ಸಂಘದ ಉಪಾಧ್ಯಕ್ಷ ಭೀಮಪ್ಪ ವಾಲಿಕಾರ, ಬಾಳಪ್ಪ ದಡ್ಡಿಮನಿ, ಭೀಮಪ್ಪ ಹೊಸೂರ, ಕೃಷ್ಣಪ್ಪ ಉಪ್ಪಾರ, ಬಸವರಾಜ ನೀಲಕಂಠ, ಗಂಗಪ್ಪ ಉಳ್ಳಾಗಡ್ಡಿ, ಶ್ರೀಶೈಲ ಪಾಟೀಲ, ಪರಶುರಾಮ ಬಸವ್ವಗೋಳ, ಈರಪ್ಪ ಮರೇಗುದ್ದಿ, ವೆಂಕವ್ವ ಶಿವಪ್ಪ ಚಿಂಚಲಿ, ಕಾಶವ್ವ ಚನಮಲ್ಲಪ್ಪ ಬಂಗಿ, ಕಾರ್ಯನಿರ್ವಾಹಕ ಶಿವಾಜಿ ಸೊರಗಾಂವಿ ಉಪಸ್ಥಿತರಿದ್ದರು.

# ನಿರಾಣಿ ಪರಿವಾರಕ್ಕೆ ಭೋಜನಮ್ ದರ್ಶನಮ್ ನಿರತಮ್ ಆರ್ಶೀವಾದ



**ಜಮಖಂಡಿ:** ತಾಲೂಕಿನ ಹಿಪ್ಪರಗಿಯ ಸಂಗಮೇಶ್ವರ ದೇವಸ್ಥಾನದ ಆವರಣದಲ್ಲಿ ಎಂ.ಆರ್.ಎನ್. ಫೌಂಡೇಶನ ಮತ್ತು ರೈತ ಸೇವಾ ಸಮೀತಿ ಸಹಯೋಗದಲ್ಲಿ ಕೃಷ್ಣಾನದಿ ತೀರದಲ್ಲಿ ನಾಗಾಸಾಧುಗಳ ಮತ್ತು ಕಾಶಿ ವಿಶ್ವನಾಥ ಅರ್ಚಕರ ನೇತೃತ್ವದಲ್ಲಿ ಕೃಷ್ಣಾ ಪುಣ್ಯಸ್ನಾನ, ಕೃಷ್ಣಾರತಿ ಮತ್ತು ಮಾಜಿಸಚಿವ ಮುರಗೇಶ ನಿರಾಣಿ ಸಂಭ್ರಮದ 60ನೇ ವರ್ಷದ ಹುಟ್ಟುಹಬ್ಬ ಆಚರಣೆ ಸಹಿತ ಸಾಮೂಹಿಕ ಸಾಧುಸಂತರಿಗೆ ದಾಸೋಹ ನಡೆಯಿತು.

ಶ್ರೀಸಂಗಮೇಶ್ವರ ದೇವಸ್ಥಾನದ ಪ್ರಸಾದ ನಿಲಯದಲ್ಲಿ ಹರಿಹರ ಪಂಚಮಸಾಲಿ ಪೀಠದ ಜಗದ್ಗುರು ವಚನಾನಂದ ಶ್ರೀಗಳು, ನಾಗಾಸಾಧು ಅಖಾಡಮುಖ್ಯಸ್ಥ ದೇವನಂದಗಿರಿ ಬಾಬಾ, ಪ.ಪೂ.ಸಿದ್ಧರಾಮೇಶ್ವರ ಶ್ರೀಗಳು, ಹುಕ್ಕೇರಿಯ ಚಂದ್ರಶೇಖರ ಶ್ರೀಗಳು, ನಿಡಸೋಸಿ ಶ್ರೀಗಳು, ಹಿಪ್ಪರಗಿಯ ಪ್ರಭುಜಿ ಮಹಾರಾಜರು, ಮಾಜಿ ಸಚಿವ ಮುರಗೇಶ ನಿರಾಣಿ ಧರ್ಮಪತ್ನಿ ಕಮಲಾ, ಲಕ್ಷ್ಮಣ ನಿರಾಣಿ ಧರ್ಮಪತ್ನಿ ಜ್ಯೋತಿ, ವಿಧಾನ ಪರಿಷತ್ ಸದಸ್ಯ ಹಣಮಂತ ನಿರಾಣಿ ಧರ್ಮಪತ್ನಿ ಶೋಭಾ ಮತ್ತು ಎಂ.ಆರ್.ಎನ್. ಸಮೂಹ ಸಂಸ್ಥೆಗಳ ನಿರ್ದೇಶಕ ಸಂಗಮೇಶ ನಿರಾಣಿ ಧರ್ಮಪತ್ನಿ ದ್ರಾಕ್ಷಾಯಣಿ ದಂಪತಿ ಸಮೇತರಾಗಿ ಸಾಮೂಹಿಕ ದಾಸೋಹದಲ್ಲಿ ಪ್ರಸಾದ ಸ್ವೀಕರಿಸಿದರು.

ಸಾಮೂಹಿಕ ಸಾಧುಸಂತರ ದಾಸೋಹದಲ್ಲಿ ದೇಶದ ವಿವಿಧ ಭಾಗಗಳಿಂದ ಆಗಮಿಸಿದ 25ಕ್ಕೂ ಹೆಚ್ಚು ಜನರು ನಾಗಾಸಾಧುಗಳು, 200ಕ್ಕೂ ಹೆಚ್ಚು ಮಠಾಧೀಶರು, ಶ್ರೀಗಳು, ಶರಣರು, ಪುರೋಹಿತರು, ಸಾಧುಸಂತರು ಸಾಮೂಹಿಕವಾಗಿ ಪ್ರಸಾದ ಸವಿಸುವ ಸಂದರ್ಭದಲ್ಲಿ ನೆರದಿದ್ದ ಸಾಧುಸಂತರು ನಿರಾಣಿ ಪರಿವಾರಕ್ಕೆ ಅನ್ನಭೋಜನಮ್ ದರ್ಶನಮ್ ನಿರತಮ್ ಎಂಬ ಆರ್ಶೀವಾದ ನೀಡುವ ಮೂಲಕ ಸಾಮೂಹಿಕ ದಾಸೋಹ ಪಂಕ್ತಿ ಆರಂಭಗೊಂಡಿತು.

ಕೃಷ್ಣಾರತಿ ನಿರಂತರ ನಡೆಯಲಿದೆ.....

ತಾಲೂಕಿನ ಹಿಪ್ಪರಗಿಯ ಸಂಗಮೇಶ್ವರ ದೇವಸ್ಥಾನ ಆವರಣದಲ್ಲಿ ರೈತರ ಸಹಯೋಗದಲ್ಲಿ ಪ್ರತಿವರ್ಷ ಕೃಷ್ಣಾನದಿಗೆ ಕೃಷ್ಣಾರತಿ ಸಹಿತ ವಿವಿಧ ಕಾರ್ಯಕ್ರಮಗಳು ನಿರಂತರವಾಗಿ ನಡೆಯಲಿವೆ. ಮುಂದೆ ಸರಕಾರದ ಕಾರ್ಯಕ್ರಮ ಆಗುವ ಸಾಧ್ಯತೆಯಿದೆ. ಮುಂದಿನವರ್ಷದ ಕೃಷ್ಣಾರತಿಯಲ್ಲಿ ನಾಗಾಸಾಧುಗಳು, ಸಂತರು, ಮಠಾಧೀಶರು, ಶ್ರೀಗಳು, ಶರಣರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಲಿದ್ದಾರೆ. ನಿರಾಣಿ ಪರಿವಾರ ರೈತರ ಜೊತೆಯಾಗಿ ಕೆಲಸ ಮಾಡುತ್ತದೆ. ನಾಗಾ ಸಾಧುಗಳು, ಶ್ರೀಗಳು, ಮಠಾಧೀಶರು, ಶರಣರ ಜೊತೆಗೆ ಕುಳಿತುಕೊಂಡು ಸಾಮೂಹಿಕ ದಾಸೋಹದಲ್ಲಿ ಪ್ರಸಾದ ಸ್ವೀಕರಿಸಿದ್ದು, ನನ್ನ ಜೀವನದಲ್ಲಿ ಮರೆಯಲಾರದ ಕ್ಷಣವಾಗಿದೆ.

# ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನಂತವರು ಪ್ರತಿ ಮನೆ- ಮನೆಗೂ ಹುಟ್ಟಿ ಬರಬೇಕು :ಬಾಲಚಂದ್ರ ಜಾರಕಿಹೊಳಿ





**ಗೋಕಾಕ:** ಸ್ವಾತಂತ್ರ್ಯ ಸಂಗ್ರಾಮಕ್ಕಾಗಿ ಬ್ರಿಟಿಷ್ ರೊಂದಿಗೆ ಹೋರಾಡಿ ದೇಶವು ಸ್ವತಂತ್ರಗೊಳ್ಳಲು ಕಾರಣೀಕರ್ತರಾದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನಂತವರು ಪ್ರತಿ ಮನೆ- ಮನೆಗೂ ಹುಟ್ಟಿ ಬರಬೇಕು. ರಾಯಣ್ಣನಂತಹ ದೇಶ ಪ್ರೇಮಿಗಳನ್ನು ಒಂದೇ ಜಾತಿಗೆ ಸೀಮಿತಗೊಳಿಸದಂತೆ ಅರಭಾವಿ ಶಾಸಕ, ಬೆಮೂಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ಸಮಾಜ ಬಾಂಧವರಿಗೆ ಕಿವಿಮಾತು ಹೇಳಿದರು.

ಶುಕ್ರವಾರದಂದು ತಾಲ್ಲೂಕಿನ ಬಳೋಬಾಳ ಗ್ರಾಮದಲ್ಲಿ ಸುಮಾರು 40 ಲಕ್ಷ ರೂಪಾಯಿ ವೆಚ್ಚದಲ್ಲಿ ನೂತನವಾಗಿ ನಿರ್ಮಿಸಿರುವ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಕಂಚಿನ ಪುತ್ಥಳಿಯನ್ನು ಅನಾವರಣಗೊಳಿಸಿ ಮಾತನಾಡಿದ ಅವರು, ಸಂಗೊಳ್ಳಿ ರಾಯಣ್ಣ ನಮ್ಮ ದೇಶದ ಹೆಮ್ಮೆಯ ಆಸ್ತಿ ಎಂದು ಪ್ರತಿಪಾದಿಸಿದರು.

ಕಿತ್ತೂರು ಚೆನ್ನಮ್ಮನ ಬಲಗೈ ಬಂಟನಾಗಿ ಆ ಸಂಸ್ಥಾನದ ಸ್ವಾತಂತ್ರ್ಯಕ್ಕಾಗಿ ಹೋರಾಟ ನಡೆಸಿದ ರಾಯಣ್ಣ ಬ್ರಿಟಿಷ್-ರಿಗೆ ಸಿಂಹಸ್ವಪ್ನರಾಗಿದ್ದರು. ಭಾರತವು ಸ್ವಾತಂತ್ರ್ಯಗೊಳ್ಳಲು ರಾಯಣ್ಣನು ತನ್ನ ಜೀವವನ್ನೇ ಪಣಕ್ಕಿಟ್ಟ ದಿಟ್ಟ ಅಪ್ರತೀಮ ಶೂರನಾಗಿದ್ದನು. ಇಂತಹ ಮಹಾನ್ ಪುರುಷರು ಇಡೀ ಮನುಕುಲದ ಆಸ್ತಿಯಾಗಿದ್ದಾರೆ. ಇಂತಹ ಮಹಾನ್ ಚೇತನನ ಸವಿ ನೆನಪಿಗಾಗಿ ಬಳೋಬಾಳ ಗ್ರಾಮದಲ್ಲಿ ಹಾಲುಮತ ಸಮಾಜ ಬಾಂಧವರು ಎಲ್ಲ ಸಮಾಜದವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸುಮಾರು 40 ಲಕ್ಷ ರೂಪಾಯಿ ಕ್ರೋಢೀಕರಿಸಿ ಸುಂದರವಾದ ಕಂಚಿನ ಮೂರ್ತಿಯನ್ನು ಪ್ರತಿಷ್ಠಾಪಿಸಿದ್ದಾರೆ. ಸ್ವಾತಂತ್ರ್ಯ ಉತ್ಸವದಂದು ಸಂಗೊಳ್ಳಿ ರಾಯಣ್ಣನ ಪುತ್ಥಳಿಯನ್ನು ಅನಾವರಣಗೊಳಿಸುವ ಭಾಗ್ಯ ನನ್ನದಾಗಿದೆ. ಇದಕ್ಕಿಂತ ಸಂತೋಷ ಬೇರೊಂದಿಲ್ಲ. ಗ್ರಾಮಸ್ಥರು ಒಗ್ಗಟ್ಟಿನಿಂದ ಸೇರಿಕೊಂಡು ಸಮಾಜಕ್ಕೆ ಮಾದರಿಯಾಗುವ ಕೆಲಸವನ್ನು ಮಾಡುತ್ತಿರುವುದು ಖುಷಿ ನೀಡುತ್ತಿದೆ ಎಂದು ಅವರು ಹೇಳಿದರು.

ಸಂಗೊಳ್ಳಿ ರಾಯಣ್ಣನ ಪುತ್ಥಳಿ ನಿರ್ಮಾಣಕ್ಕಾಗಿ ಕೆ.ಆರ್.ಪುರಂ ಬಿಜೆಪಿ ಶಾಸಕ, ಮಾಜಿ ಸಚಿವ ಭೈರತಿ ಬಸವರಾಜು ಅವರು ಸಹ ನನ್ನ ಕೋರಿಕೆಯ ಮೇರೆಗೆ 5 ಲಕ್ಷ ರೂಪಾಯಿ ಧನ ಸಹಾಯ ಮಾಡಿದ್ದಾರೆ. ಜತೆಗೆ ಹಲವರು ತಮ್ಮ ಕಾಣಿಕೆಯನ್ನು ಅರ್ಪಿಸಿ ರಾಯಣ್ಣನಿಗೆ ಗೌರವ ಸೂಚಿಸಿದ್ದಾರೆ. ಹಾಲಿನಂತಿ-ರುವ ಹಾಲು ಮತ ಸಮಾಜವು ವಿಶ್ವಾಸಕ್ಕೆ ಹೆಸರುವಾಸಿಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಅರಭಾವಿ ದುರದುಂಡೀಶ್ವರ ಮಠದ ಗುರು ಬಸವಲಿಂಗ ಮಹಾಸ್ವಾಮಿಗಳು ವಹಿಸಿ ಆಶೀರ್ವಚನ ನೀಡಿದರು.

ಸಾನಿಧ್ಯವನ್ನು ಹುಲಜಂತಿಯ ಮಾಳಿಂಗರಾಯ ಮಹಾರಾಜರು, ಹಡಗಿನಾಳದ ಮುತ್ತೇಶ್ವರ ಸ್ವಾಮಿಗಳು, ಜೋಕಾನಟ್ಟಿಯ ಬಿಳಿಯಾನ ಸಿದ್ಧ ಸ್ವಾಮಿಗಳು, ಯಾದವಾಡದ ಸಿದ್ಧೇಶ್ವರ ಸ್ವಾಮಿಗಳು, ಸ್ಥಳೀಯ ವೇ.ಮೂ. ಸದಾಶಿವ ಹಿರೇಮಠ ವಹಿಸಿದ್ದರು.

ಶಾಸಕ ಬಾಲಚಂದ್ರ ಜಾರಕಿಹೊಳಿಯವರು ಸಂಗೊಳ್ಳಿ ರಾಯಣ್ಣನ ಕಂಚಿನ ಮೂರ್ತಿಯನ್ನು ಅನಾವರಣಗೊಳಿಸಿ ನಮನ ಸಲ್ಲಿಸಿದರು. ಸಂಗೊಳ್ಳಿ ರಾಯಣ್ಣನ ಪುತ್ಥಳಿ ನಿರ್ಮಾಣ-ಕ್ಕೆ 4 ಲಕ್ಷ ರೂಪಾಯಿ ದೇಣಿಗೆ ನೀಡಿರುವ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರ ಸಮಾಜಮುಖಿ ಕಾರ್ಯಕ್ಕೆ ವಿವಿಧ ಶ್ರೀಗಳು ಮೆಚ್ಚುಗೆ ವ್ಯಕ್ತಪಡಿಸಿ, ಸಮಾಜ ಬಾಂಧವ-ರಿಂದ ಗೌರವ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ವಿನೋದ ಪೂಜೇರಿ, ಭೀಮಪ್ಪ ಕಲ್ಲೊಳ್ಳಿ, ಮುತ್ತೆಪ್ಪ ಕುಳ್ಳೂರ, ಪ್ರಧಾನಿ ಕಳಸಣ್ಣವರ, ಸಿದ್ದಲಿಂಗಪ್ಪ ಕಂಬಳಿ, ಲಕ್ಷ್ಮಣ ಗಣಪ್ಪಗೋಳ, ಲಕ್ಷ್ಮಣ ಮಸಗುಪ್ಪಿ,ಗುರುಸಿದ್ಧ ಪೂಜೇರಿ, ಗುರುಸಿದ್ಧ ವಡೇರ, ಬಸಲಿಂಗ ತೆಳಗಡೆ,ಲಗಮಣ್ಣ ಕಳಸಣ್ಣವರ, ಬಸು ಪೋಟಿ, ರಾಮಪ್ಪ ದುರ್ಗಿ, ಲಕ್ಷ್ಮಣ ದುರ್ಗಿ, ವಿಠ್ಠಲ ಸುಣಧೋಳಿ, ಮಾರುತಿ ಕಾಡಗಿ, ವಿಠ್ಠಲ ಕಾಡಗಿ, ಮಾರುತಿ ಪೂಜೇರಿ, ಸೋಮನಿಂಗ ಕಾಡಗಿ, ಸುನೀಲ ಈರೇಶನವರ, ಗುರುಸಿದ್ದಪ್ಪ ದುರ್ಗಿ, ದೇವಪ್ಪ ಕರಿಗಾರ, ಶ್ರೀಕಾಂತ ಕಾಡಗಿ, ಹಾಲಪ್ಪ ರಾಮಗಾನಟ್ಟಿ, ಬಸಪ್ಪ ತಪಸಿ, ಸಿದ್ದಪ್ಪ ಆಡಿನ, ಸಿದ್ದಪ್ಪ ಘೋಡಗೇರಿ, ರಾಮಲಿಂಗ ಸನದಿ, ಶ್ರೀಶೈಲ ಬೆಳವಿ, ಗ್ರಾಮ ಪಂಚಾಯತಿ ಸದಸ್ಯರು, ವಿವಿಧ ಸಮಾಜಗಳ ಮುಖಂಡರು, ಅಧಿಕಾರಿಗಳು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತು ಬೆಳೆಸಿಕೊಳ್ಳಬೇಕು




**ರಾಯಬಾಗ:** ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತು ಬೆಳೆಸಿಕೊಳ್ಳವುದರ ಜೊತೆಗೆ ಸ್ಪರ್ಧಾತ್ಮಕ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ಒದಗಿಸಿ ಕೊಡಲಾಗುವುದು.ಇದರ ಸದುಪಯೋಗ ಪಡೆದುಕೊಳ್ಳಿ ಎಂದು ಸಂಸದರಾದ ಪ್ರೀಯಂಕಾ ಜಾರಕಿಹೊಳಿ ವಿದ್ಯಾರ್ಥಿಗಳಿಗೆ ಭರವಸೆ ನೀಡಿದ್ದಾರೆ.

ಸಮೀಪದ ಕೆಂಪಟ್ಟಿ ಗ್ರಾಮದಲ್ಲಿನ ಸರಕಾರಿ ಪ್ರೌಢ ಶಾಲೆಗೆ 60 ಬೇಂಚ್ ವಿತರಿಸಿ ಮಾತನಾಡಿದರು. ಇಂದಿನ ದಿನಮಾನಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆ ಬಹಳ ಮುಖ್ಯವಾಗಿರುತ್ತದೆ.

ಯಾರ್ಯಾರು ಸ್ಪರ್ಧಾತ್ಮಕ ಪರೀಕ್ಷೆ ಬರೆಯುವವರಿಗೆ ಪುಸ್ತಕಗಳನ್ನು ನೀಡಿ ಸಹಾಯ ಮಾಡಲಾಗುವುದು. ಹಾಗಾಗಿ ವಿದ್ಯಾರ್ಥಿಗಳು ನಮಗೆ ಮಾಹಿತಿ ಕೊಡಿ ಎಂದರಲ್ಲದೇ ಈವಾಗಿನಿಂದಲೇ ಸ್ಪರ್ಧಾತ್ಮಕ ಪರೀಕ್ಷೆ ಬಗ್ಗೆ ಮಾಹಿತಿಪಡೆದು ಪರೀಕ್ಷೆ ಎದುರಿಸಬೇಕು ಎಂದು ಸಲಹೆ ನೀಡಿದರು.

ಗ್ರಾಮೀಣ ಭಾಗದ ಶಾಲಾ ವಿದ್ಯಾರ್ಥಿಗಳಿಗೆ ಬೇಕಾದ ಸೌಲಭ್ಯಗಳನ್ನು ಶೀಘ್ರದಲ್ಲಿ ಒದಗಿಸಲಾಗುವುದು. ಅದೇರೀತಿ ಉತ್ತಮ ವಿದ್ಯಾಭ್ಯಾಸ ಮಾಡುವುದರ ಮೂಲಕ ಜಿಲ್ಲೆಯಲ್ಲಿ ಹೆಸರು ಮಾಡಿ ಕೀರ್ತಿ ತರಬೇಕು ಎಂದು ಹೇಳಿದರು.

ಡಿಡಿಪಿಐ ಸಿತಾರಾಮ್ ಮಾತನಾಡಿ, ಗ್ರಾಮೀಣ ಭಾಗದಲ್ಲಿನ ಸರಕಾರಿ ಶಾಲೆಗಳು ಅಭಿವೃದ್ಧಿಯಾದರೆ ಗ್ರಾಮವೇ ಅಭಿವೃದ್ಧಿಯಾದಂತ್ತೆ. ಮಕ್ಕಳಿಗೆ ಶಿಸ್ತು ಕಲಿಸಬೇಕು. ಶಾಲೆಗಳಿಗೆ ಮೂಲಭೂತ ಸೌಲಭ್ಯಗಳು ಹಾಗೂ ಕಂಪ್ಯೂಟರ್ ವ್ಯವಸ್ಥೆ ಆಗಬೇಕಿದೆ ಎಂದು ಹೇಳಿದರು.

ಈ ವೇಳೆ ಕೆ.ಪಿ.ಸಿ.ಸಿ ಪ್ರಧಾನ ಕಾರ್ಯದರ್ಶಿ ಮಹಾವೀರ ಮೋಹಿತೆ, ಸಚಿವರ ಆಪ್ತ ಶಿವನಗೌಡ ಪಾಟೀಲ, ಜಿಲ್ಲಾ ಕಾಂಗ್ರೇಸ್ ಕಮಿಟಿ ಅಧ್ಯಕ್ಷ ಲಕ್ಷ್ಮರಾವ್ ಚಿಂಗಳೆ, ನಿರ್ಮಲಾ ಪಾಟೀಲ, ಬ್ಲಾಕ ಕಾಂಗ್ರೇಸ್ ಅಧ್ಯಕ್ಷ ಸಿದ್ದಾರೂಢ ಬಂಡಗರ, ಗ್ರಾಪಂ ಅಧ್ಯಕ್ಷ ಕೃಷ್ಣಾ ಕುಂದರಗಿ, ಹಾಜೀ ಮುಲ್ಲಾ, ಬಿ.ಇ.ಓ ಬಸವರಾಜಪ್ಪ ಆರ್., ದೀಲಿಪ ಜಮಾದಾರ, ಮಹಾದೇವ ನಾಯಿಕ, ಸ್ವಪ್ನಿಲ ನಾಯಿಕ, ಮಾರುತಿ ನಾಯಿಕ, ಹರೀಶ ಕುಲಗುಡೆ, ಜ್ಯೋತಿ ನಾಯಿಕ, ಅಕ್ಕವ್ವಾ ಕಾಂಬಳೆ, ಪ್ರಕಾಶ ನಾಯಿಕ, ಸಿದ್ದಪ್ಪ ಪೂಜೇರಿ, ಜ್ಞಾನೇಶ್ವರ ವಾಲಿಕಾರ, ಅರ್ಜುನ ಬಂಡಗರ, ಶಿವಪ್ಪ ನಾಯಿಕ,ರಾಜು ಪಾಟೀಲ, ಬಸವರಾಜ ಮಗದುಮ್ಮ, ಮಾಳಪ್ಪ ಹೆಗನ್ನವರ, ಅಜೀತ ಪೋತದಾರ, ಆಕಾಶ ನಾಯಿಕ, ರಾಣಪ್ಪ ಭಜಂತ್ರಿ, ಶ್ರೀಕಾಂತ ನಾಯಿಕ, ಮುಖ್ಯಾದ್ಯಪಕ ಸಂತೋಷ ಗಿಂಡೆ ಹಾಗೂ ಶಿಕ್ಷಕರು, ವಿದ್ಯಾರ್ಥಿ ವಿದ್ಯಾರ್ಥಿನಿಯರು ಉಪಸ್ಥಿತ-ರಿದ್ದರು. ಶಿಕ್ಷಕರಾದ ಗೋವಿಂದಪ್ಪ ಸ್ವಾಗತಿಸಿ, ಎನ್ ಎಂ ಹಂಜ್ಯಾನಟ್ಟಿ ನಿರೂಪಿಸಿ, ಮಾರುತಿ ಖಾಂಡೇಕರ ವಂದಿಸಿದರು.

# ರಾಷ್ಟ್ರಧ್ವಜವು ದೇಶದ ವೈವಿಧ್ಯಮಯ ಸಂಸ್ಕೃತಿಯ ಪ್ರತೀಕ -ಚನ್ನಮಲ್ಲಿಕಾರ್ಜುನ ಶ್ರೀಗಳು



**ವಿಜಯಪುರ:** ರಾಷ್ಟ್ರಧ್ವಜವು ನಮ್ಮ ದೇಶದ ಗೌರವದ ಸಂಕೇತವಾಗಿದೆ. ಇದು ನಮ್ಮ ದೇಶದ ಶ್ರೀಮಂತ ಪರಂಪರೆ, ವೈವಿಧ್ಯಮಯ ಸಂಸ್ಕೃತಿ,ದೇಶದ ಪ್ರಗತಿ ಮತ್ತು ಏಕತೆಯನ್ನು ಪ್ರತಿನಿಧಿಸುತ್ತದೆ ಎಂದು ಮ ಘ ಚ ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ತಾಲೂಕಿನ ನಾಗಠಾಣ ಗ್ರಾಮದ ಉದಯಲಿಂಗೇಶ್ವರ ಮಠದಲ್ಲಿ ಗುರುವಾರ ಸಂಜೆ ಹಮ್ಮಿಕೊಂಡ 'ರಾಷ್ಟ್ರಧ್ವಜದ ಮಹತ್ವ' ಕುರಿತ ಚಿಂತನಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ರಾಷ್ಟ್ರಧ್ವಜವು ಭಾರತದ ಸ್ವಾತಂತ್ರ್ಯ ಹೋರಾಟದ ಮೌಲ್ಯ-ತ್ಯಾಗಗಳನ್ನು ಎತ್ತಿಹಿಡಿಯುತ್ತದೆ. ಅದು ದೇಶದ ಇತಿಹಾಸ, ಸಂಸ್ಕೃತಿ, ಮತ್ತು ಜನರ ಭಾವನೆಗಳನ್ನು ಪ್ರತಿನಿಧಿಸುತ್ತದೆ ಎಂದು ಹೇಳಿದರು.

ಶಿಕ್ಷಕ ಸಾಹಿತಿ ಸಂತೋಷ ಬಂಡೆ ಉಪನ್ಯಾಸ ನೀಡಿ, ಭಾರತದ ಹೆಗ್ಗುರುತಾಗಿರುವ ತ್ರಿವರ್ಣ ಧ್ವಜವು, ಭಾರತೀಯರ ಆತ್ಮಾಭಿಮಾನದ ಸಂಕೇತ. ತ್ರಿವರ್ಣ ಧ್ವಜದಲ್ಲಿ, ಕೇಸರಿ-ಧೈರ್ಯ, ಬಿಳಿ-ಶಾಂತಿ, ಹಸಿರು-ಸಮೃದ್ಧತೆ, ಮಧ್ಯದ ಚಕ್ರವು ಚಲನೆ-ಬೆಳವಣಿಗೆಯನ್ನು ಪ್ರತಿನಿಧಿಸುತ್ತದೆ. ಸ್ವಾತಂತ್ರ್ಯದ ಆದರ್ಶಗಳ ಪ್ರತಿಬಿಂಬವಾದ ರಾಷ್ಟ್ರಧ್ವಜಕ್ಕೆ ಗೌರವ ವಂದನೆ ಸಲ್ಲಿಸುವುದು ಪ್ರತಿಯೊಬ್ಬ ಭಾರತೀಯನ ಕರ್ತವ್ಯ ಎಂದು ಹೇಳಿದರು.

ವೇದಮೂರ್ತಿ ಮುರುಗೇಂದ್ರ ಶಾಸ್ತ್ರಿಗಳು ಪುರಾಣ ಕಾರ್ಯಕ್ರಮ ನಡೆಸಿಕೊಟ್ಟರು. ಶರಣಬಸು ಪೂಜಾರಿ, ಗಾಯಕ ವಿರೂಪಾಕ್ಷಯ್ಯ ಗೌಡಗಾಂವ, ತಬಲಾ ವಾದಕ ಬಸವರಾಜ ಆಳಂದ, ಗ್ರಾಮಸ್ಥರಾದ ಅಶೋಕ ಕತ್ನಳ್ಳಿ, ರಾವುತಪ್ಪ ಬಿಜ್ಜರಗಿ, ಶಂಕರಗೌಡ ಪಾಟೀಲ, ಸಿದ್ದನಗೌಡ ಪಾಟೀಲ, ಬಾಬು ಕೋಲಾರ, ಸುರೇಶ ಕತ್ನಳ್ಳಿ, ಮಹಾದೇವ ಲೋಣಿ, ಮುತ್ತು ಕತ್ನಳ್ಳಿ, ಹಣಮಂತ ಬಕಾಟಿ ಸೇರಿದಂತೆ ಗ್ರಾಮದ ಮಹಿಳೆಯರು, ಮಕ್ಕಳು ಪಾಲ್ಗೊಂಡಿದ್ದರು.

# ಸಂತೆಯ ಸದುಪಯೋಗ ಪಡೆಯಿರಿ : ಮಲ್ಲಿಕಾರ್ಜುನ ತುಬಾಕಿ



**ನೇಸರಗಿ.** ನೂತನವಾಗಿ ಪ್ರತಿ ಶನಿವಾರದಂದು ಸುತಗಟ್ಟಿ ಗ್ರಾಮದಲ್ಲಿ ಇಂದಿನಿಂದ ಪ್ರಾರಂಭ ಅಗಿದ್ದು ಇದರ ಪ್ರಯೋಜನವನ್ನು ಸುತಗಟ್ಟಿ, ಮತ್ತಿಕೊಪ್ಪ, ಹೋಗರ್ತಿ, ಕೊಳ್ಳನಟ್ಟಿ, ಹನುಮನಹಟ್ಟಿ, ದೇಶನೂರ ಹಾಗೂ ಸುತ್ತಮುತ್ತಲಿನ ಗ್ರಾಮದ ಜನತೆ ವ್ಯಾಪಾರ, ವಹಿವಾಟು ಮಾಡಿ ಸಂತೆಯ ಸದುಪಯೋಗ ಪಡೆಯಬೇಕೆಂದು ಮಾಜಿ ಮದ್ಯಪಾನ ಸಂಯಮ ಮಂಡಳಿಯ ಅಧ್ಯಕ್ಷರಾದ ಮಲ್ಲಿಕಾರ್ಜುನ ತುಬಾಕಿ ಹೇಳಿದರು.

ಅವರು ಸಮೀಪದ ಸುತಗಟ್ಟಿ ಗ್ರಾಮದಲ್ಲಿ ನೂತನವಾಗಿ ಪ್ರಾರಂಭವಾಗಿರುವ ವಾರದ ಸಂತೆ ಉದ್ಘಾಟನೆ ಮಾಡಿ ಮಾತನಾಡಿದರು.

ಗ್ರಾಮ ಅಭಿವೃದ್ಧಿ ಅಧಿಕಾರಿ ಶ್ರೀಮತಿ ವನಜಾಕ್ಷಿ ಪಾಟೀಲ ಮಾತನಾಡಿ ತರಕಾರಿ, ಪ್ರಮುಖ ಬೆಳೆಗಳನ್ನು ಬೆಳೆಯುವ ಪ್ರಮುಖ ಕೇಂದ್ರವಾಗಿದ್ದು, ಈ ಭಾಗದ ಜನ ಸಂತೆಯನ್ನು ಯಶಸ್ವಿಗೊಳಿಸಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ನೇಸರಗಿ ಕೆನರಾ ಬ್ಯಾಂಕ ವ್ಯವಸ್ಥಾಪಕರಾದ ಗಂಗಪ್ಪ ಪಾಲಬಾವಿ, ಗ್ರಾ ಪಂ ಅಧ್ಯಕ್ಷರಾದ ಶ್ರೀಮತಿ ಶಾಂತವ್ವ ದೇಯಣ್ಣವರ, ಸದಸ್ಯರಾದ ನಿಂಗಣ್ಣ ಚೋಭಾರಿ, ಅನಸೂಯಾ ಬಾಳಿಗಡ್ಡಿ, ಭೀಮಸಿ ಕಲನಾಯ್ಕರ,ಸುವರ್ಣಾ ಜಮಾದಾರ ಸೇರಿದಂತೆ ಸುತಗಟ್ಟಿ ಗ್ರಾಮದ ಹಿರಿಯರು, ಮುಖಂಡರು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಉಪಸ್ಥಿತರಿದ್ದರು.

****

# ಸಂಗೊಳ್ಳಿ ರಾಯಣ್ಣ ಜಯಂತಿ ಆಚರಣೆ

**ಬಸವನಬಾಗೇವಾಡಿ,** ಸ್ವಾತಂತ್ರ್ಯ ಹೋರಾಟಗಾರರಲ್ಲಿ ಪ್ರಮುಖರಾಗಿರುವ ಸಂಗೊಳ್ಳಿ ರಾಯಣ್ಣ ಅವರ ಚರಿತೆ ಇಂದಿನ ಯುವಜನಾಂಗಕ್ಕೆ ತಿಳಿಸಿಕೊಡಬೇಕು. ಈ ಮೂಲಕ ಯುವಜನಾಂಗವು ದೇಶಾಭಿಮಾನ ಬೆಳೆಸಿಕೊಳ್ಳಲು ಪೂರಕವಾಗುತ್ತದೆ ಎಂದು ಮುಖಂಡ ಜಟ್ಟಿಂಗರಾಯ ಮಾಲಗಾರ ಹೇಳಿದರು.

ಪಟ್ಟಣದ ಜಾಲಿಹಾಳದ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಸಂಗೊಳ್ಳಿ ರಾಯಣ್ಣ ಜಯಂತಿ ಕಾರ್ಯಕ್ರಮದಲ್ಲಿ ಸಂಗೊಳ್ಳಿ ರಾಯಣ್ಣನವರಿಗೆ ನಮನ ಸಲ್ಲಿಸಿ ಮಾತನಾಡಿದ ಅವರು,ಕಿತ್ತೂರು ರಾಣಿ ಚನ್ನಮ್ಮಳ ಬಲಗೈ ಬಂಟನಾಗಿದ್ದ ಸಂಗೊಳ್ಳಿ ರಾಯಣ್ಣ ಶೂರತನದಿಂದಾಗಿ ಬ್ರಿಟಿಷರಿಗೆ ಸಿಂಹಸ್ವಪ್ನನಾಗಿದ್ದನು. ರಾಯಣ್ಣನು ಬ್ರಿಟಿಷ್ ಸರ್ಕಾರದ ಸೊಕ್ಕಡಗಿಸಲು ತನ್ನ ಸೈನ್ಯದೊಂದಿಗೆ ದಟ್ಟಡವಿಯಲ್ಲಿ ಅಡಗಿಕೊಂಡು ರಣ-ತಂತ್ರ ಹೆಣೆದು ಯುದ್ಧ ಸಾರುತ್ತಿದ್ದ. ತನ್ನ ಕೆಚ್ಚದೆಯ ಮಾತುಗಳಿಂದ ಮೂಲಕವೇ ಬ್ರಿಟಿಷರಲ್ಲಿ ನಡುಕ ಹುಟ್ಟಿಸುತ್ತಿದ್ದನು. ಕನ್ನಡಾಭಿಮಾನ, ನಾಡಾಭಿಮಾನ ಮೈಗೂಡಿಸಿದ್ದ ರಾಯಣ್ಣ ತನ್ನ ತ್ಯಾಗ ಬಲಿದಾನದಿಂದ ಇತಿಹಾಸದ ಪುಟಗಳಲ್ಲಿ ಚಿರಸ್ಥಾಯಿಯಾಗಿದ್ದಾನೆ. ಇಂತಹ ವೀರನು ಜನಿಸಿದ ಆಗಸ್ಟ್ 15 ರಂದು ಭಾರತಕ್ಕೆ



ಸ್ವಾತಂತ್ರ್ಯ ದೊರೆತ ದಿನವಾದರೆ ಇವನ ನಿಧನವಾದ ಜನವರಿ 26 ರಂದು ಭಾರತವು ಗಣರಾಜ್ಯವೆಂದು ಘೋಷಿಸಿದ ದಿನವಾಗಿರುವದು ವಿಶೇಷವಾಗಿದೆ ಎಂದರು.

ಈ ಸಂದರ್ಭದಲ್ಲಿ ಈರಪ್ಪ ಸುಂಕದ, ಅಶೋಕ ನಾಡಗೌಡ, ಮಹೇಶ ಮೊಕಾಶಿ, ಶಿವಾನಂದ ಬಸ್ತಾಳ, ಬಸವರಾಜ ಪೂಜಾರಿ, ಪರಮಾನಂದ ಪೂಜಾರಿ, ಬಸು ಅಂಬಳನೂರ, ಬಸವರಾಜ ಅಂಗಡಿ, ಸಂಗಪ್ಪ ಮಟ್ಯಾಳ, ಬಸವರಾಜ ಹಂಗರಗಿ, ಮುದಕಪ್ಪ ಉಕ್ಕಲಿ, ಯಮನವ್ವ ಬಸ್ತಾಳ, ಯಲ್ಲವ್ವ ಬಸ್ತಾಳ, ಸೀಮಾ ಪೂಜಾರಿ, ಸುವರ್ಣ ಅಂಬಳನೂರ, ಸರೋಜಿನಿ ಮಟ್ಯಾಳ, ಗಂಗುಬಾಯಿ ಕೂಡಗಿ,ಭಾಗ್ಯ ಅಂಬಳನೂರ ಇತರರು ಇದ್ದರು.

# ಸಕಾಲಕ್ಕೆ ಮಳೆರಾಯ ಆಗಮನದಿಂದ ನಮ್ಮ ಭಾಗದ ಪ್ರತಿಯೊಬ್ಬರ ರೈತರ ಮೊಗದಲ್ಲಿ ಮಂದಹಾಸ



**ಇಂಡಿ:** ಕುಡಿಯುವ ನೀರಿಗೂ ವ್ಯತೆ ಪಡುತ್ತಿದ್ದ ನಮ್ಮ ಭಾಗದ ಜನ ಇಂದು ಕೆರೆ ತುಂಬುವ ಯೋಜನೆ ಸಕಾರಗೊಂಡಿದ್ದ-ರಿಂದ ಹರ್ಷಪಡುವಂತಾಗಿದ್ದು ಅಲ್ಲದೆ ಸಕಾಲಕ್ಕೆ ಮಳೆರಾಯ ಕೂಡಾ ಆಗಮನದಿಂದ ನಮ್ಮ ಭಾಗದ ಪ್ರತಿಯೊಬ್ಬರ ರೈತರ ಮೊಗದಲ್ಲಿ ಮಂದಹಾಸ ಮುಡಿದ್ದು ಸಂತೋಷ ತಂದಿದೆ ಎಂದು ಶಾಸಕ ಯಶವಂತರಾಯಗೌಡ ಪಾಟೀಲ ಹೇಳಿದರು.

ಅವರು ಪಟ್ಟಣದ ತಾಲೂಕಾ ಕ್ರೀಡಾಂಗಣದ ಕಾರ್ಯಾಲಯದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೆಶಿಸಿ ಮಾತನಾಡಿ ನಮ್ಮ ಭಾಗ ನೀರಾವರಿಯಾಗಬೇಕು ಎಂಬ ಸದಾಶಯದಿಂದ ಎಲ್ಲ ನೀರಾವರಿ ಯೋಜನೆಗಳು ಜಾರಿಗೆ ಬರಬೇಕು. ಈ ಯೋಜನೆಗಳು ನೀರು ಸಾಕಾರಕ್ಕೆ ಆಲಮಟ್ಟಿ ಆಣೆ ಕಟ್ಟು 524ಕ್ಕೆ ಎತ್ತರಿಸಿದಾಗ ಮಾತ್ರ ಇಂಡಿ ಭಾಗದ ಬಹತೇಕ ನೀರಾವರಿಗೆ ಒಳಪಡಲಿದೆ. ನಮ್ಮ ಪಾಲೀನ 80ಟಿಎಮ್‌ಸಿ ನೀರನ್ನು ದೊರೆಯುವುದ-ರಿಂದ ರೈತರಿಗೆ ವರದಾನವಾಗಲಿದೆ. ಕೃಷ್ಣಾ ಕೊಳ್ಳದ ಯೋಜನೆಯನ್ನು ರಾಷ್ಟ್ರೀಕರಣ ಗೊಳಿಸಿದಾಗ ಮಾತ್ರ ನಮ್ಮ ಎಲ್ಲ ಯೋಜನೆಗಳು ಸಾಕಾರಗೊಳ್ಳುತ್ತವೆ. ಆದ-ರಿಂದ ಈ ಯೋಜನೆಯನ್ನು ರಾಷ್ಟ್ರೀಯ ಯೋಜನೆ ಎಂದು ಘೋಸಿಸಬೇಕು ಎಂದು ಕೇಂದ್ರ ಸರ್ಕಾರಕ್ಕೆ ಆಗ್ರಹಿಸಿದರು. ಬುದಿಹಾಳ ಹತ್ತಿರ ಕೈಗಾರಿಕೆ ವಸಾಹತು ಕಾಮಗಾರಿ ನಡೆದಿದ್ದು ರೈಲು ನಿಲ್ದಾಣ ಸಮಿಪ ಇರುವುದ-ರಿಂದ ಅದು ಸೂಕ್ತವಾದ ಸ್ಥಳವಾಗಿದೆ. ಅಲ್ಲದೆ ಜಿಲ್ಲಾ ಕೇಂದ್ರದಲ್ಲಿರಬೇಕಾದ ಜಿಟಿಟಿಸಿ ಕಾಲೇಜು, ಕಾರ್ಮಿಕ ವರ್ಗದ ಮಕ್ಕಳಿಗಾಗಿ ಮಕ್ಕಳಿಗಾಗಿ ನೂತನವಾಗಿ ಹಳಗುಣಕ್ಕಿ ಗ್ರಾಮದಲ್ಲಿ ಕಾರ್ಮಿಕ ವಸತಿ ಶಾಲೆ ಒದಗಿ ಬಂದಿದೆ. ಇದಕ್ಕೆಲ್ಲ ಕಾರಣ ಮಾನ್ಯ ಮುಖ್ಯಮಂತ್ರಿಗಳ ಇಚ್ಛಾಶಕ್ತಿ ಹಾಗು ಸಚಿವರ ಉದಾರತೆ ಕಾರಣದಿಂದ ರಾಜ್ಯದ ಗಡಿ ಭಾಗಕ್ಕೆ ನೀಡಿದ ಅವರಿಗೆ ಅಭಿನಂದಿಸುವುದಾಗಿ ಹೇಳಿದರು. ಇಂಡಿ ನಿಂಬೆಗೆ ಜಿಐ ಟ್ಯಾಗ ಸಿಕ್ಕಿದ್ದರಿಂದ ನಿಂಬೆಯನ್ನು ವಿಶ್ವಮಾರುಕಟ್ಟೆಗೆ ಪರಿಚಯಿಸುವ ಕಾರ್ಯ ನಮ್ಮ ಮಾಡಲಾಗುತ್ತಿದೆ. ಹೀಗಾಗಿ ನಿಂಬೆ ನಾಡು ಎಂಬ ಹೆಗ್ಗಳಿಕೆ ಪಾತ್ರವಾಗಿದ್ದು ವಿಶ್ವಮಟ್ಟಕ್ಕೆ ಕೊಂಡ್ಯೊಯಿಯುವ ಕಾರ್ಯ ಮಾಡಲಾಗುತ್ತಿದೆ. ಮುಂದೊಂದಿನ ಜಿಲ್ಲಾ ಕೇಂದ್ರಕ್ಕೆ ಸರಿಸಮಾನಾಗಿ ನಿಲ್ಲುವಂತ ವಾತವರಣ ಸೃಷ್ಟಿಯಾಗುತ್ತಿದ್ದು ರಾಜ್ಯದಲ್ಲಿ ಇಂಡಿ ಮಾದರಿ ತಾಲೂಕಾಗಿ ಮಾಡುವುದೆ ನನ್ನ ಮುಂದಿರುವ ಗುರಿಯಾಗಿದೆ ಎಂದರು.

ಇಂಡಿ ವಿಧಾನಸಭೆಯ ಅಭಿವೃದ್ಧಿ ಪಥದತ್ತ ಸಾಗುತ್ತಿದ್ದು ಹಿಂದುಳಿದ ತಾಲೂಕು ಮುಂದು ವರೆದ ತಾಲೂಕಾಗಿ ಪರಿವರ್ತನೆಯಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಆಡಿದ ಮಾತು ನೀವೆಲ್ಲರು ಕೇಳಿದ್ದಿರಿ. ಈಗಾಲೆ ನಗರಕ್ಕೆ ಏನು ಸೌಲಭ್ಯ ಬೇಕು ಅದನ್ನು ಒದಗಿಸುವ ಪ್ರಯತ್ನ ಮಾಡಿದ್ದೆನೆ. ಇಂದು ಪುರಸಭೆ ಇದ್ದ ಇಂಡಿ ನಗರಸಭೆಯಾಗಿ ಮೇಲ್ದರ್ಜೆಗೆರಿದ್ದು ಎಲ್ಲ ವಿಧದಲ್ಲು ಅಭಿವೃದ್ಧಿ ಹೊಂದುತ್ತಿದೆ. ಅಲ್ಲದೆ ಸಾಮಾಜಿಕ ನ್ಯಾಯ ಕಾಪಾಡುವ ನಿಟ್ಟಿನಲ್ಲಿ ಎಲ್ಲ ಸಮುದಾಯಗಳಿಗೆ ಅಧಿಕಾರ ಹಂಚಿಕೆ ಮಾಡುವ ಮೂಲಕ ಸಾಮಾಜಿಕ ನ್ಯಾಯ ಕಾಪಾಡಿದ ಸಂತೃಪ್ತಿ ನನಗಿದೆ ಎಂದರು. ಈ ಸಂದರ್ಭದಲ್ಲಿ ಡಿ.ವಾಯ್.ಎಸ್.ಪಿ ಜಗದೀಶ ಎಚ್.ಎಸ್, ತಾಪಂ ಇಒ ಡಾ॥ಭೀಮಾಶಂಕರ ಕನ್ನೂರ, ಕ್ಷೇತ್ರಶಿಕ್ಷಣಾಧಿಕಾರಿ ಶ್ರೀಮತಿ ಜಮಾದಾರ, ಪಿಡಬ್ಲುಡಿ ಇಲಾಖೆಯ ದಯಾನಂದ ಮಠ, ತೊಟಗಾರಿಕೆ ಅಧಿಕಾರಿ ಎಚ್.ಎಸ್.ಪಾಟೀಲ, ಕೃಷಿ ಇಲಾಖೆ ಮಹಾದೇವಪ್ಪ ಏವೂರ, ಹೇಸ್ಕಾಂ ಅಧಿಕಾರಿ ಮೆಂಡೆಗಾರ, ಸಮಾಜ ಕಲ್ಯಾಣಾಧಿಕಾರಿ ಉಮೇಶ ಲಮಾಣಿ ಇತರರು ಇದ್ದರು.

# ದೇಶವು ಎಲ್ಲ ಕ್ಷೇತ್ರದಲ್ಲಿ ಮುನ್ನಡೆಯುತ್ತಿದೆ:ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ

**ಬಸವನಬಾಗೇವಾಡಿ,** ರಾಷ್ಟ್ರಪಿತ ಮಹಾತ್ಮಗಾಂಜಿ ನೇತೃತ್ವದಲ್ಲಿ ಅನೇಕ ಸ್ವಾತಂತ್ರ್ಯ ಹೋರಾಟಗಾರರು ಬ್ರಿಟಿಷರ ವಿರುದ್ಧ ವಿವಿಧ ಸತ್ಯಾಗ್ರಹ, ಹೋರಾಟ ಮಾಡುವ ಮೂಲಕ ದೇಶಕ್ಕೆ ಸ್ವಾತಂತ್ರ್ಯ ಲಭಿಸಿದೆ. ಇಂದು ನಾವೆಲ್ಲರೂ ನೆಮ್ಮದಿಯಿಂದ ಬದುಕಲು ಸ್ವಾತಂತ್ರ್ಯ ಹೋರಾಟಗಾರರು ಕಾರಣವೆಂದರೆ ತಪ್ಪಾಗಲಾರದು ಎಂದು ತಹಸೀಲ್ದಾರ ವೈ. ಎಸ್.ಸೋಮನಕಟ್ಟಿ ಹೇಳಿದರು.

ಪಟ್ಟಣದ ಬಸವೇಶ್ವರ ಸರ್ಕಾರ ಪದವಿ ಪೂರ್ವ ಕಾಲೇಜಿನ ಮೈದಾನದಲ್ಲಿ ತಾಲೂಕಾಡಳಿತದಿಂದ ಶುಕ್ರವಾರ ಹಮ್ಮಿಕೊಂಡಿದ್ದ ಸ್ವಾತಂತ್ರ್ಯೋತ್ಸವ ಸಮಾರಂಭದಲ್ಲಿ ಧ್ವಜಾರೋಹಣ ನೆರವೇರಿಸಿ ಧ್ವಜ ವಂದನೆ ಸಲ್ಲಿಸಿದ ನಂತರ ಮಾತನಾಡಿದ ಅವರು, ದೇಶದ ಸ್ವಾತಂತ್ರ್ಯಕ್ಕಾಗಿ ಭಗತ್‌ಸಿಂಗ, ಲಾಲಾಲಜಪತರಾಯ, ಬಾಲಗಂಗಾಧರತಿಲಕ, ಸುಖದೇವ ಸೇರಿದಂತೆ ಅನೇಕ ಮಹನೀಯರು ತಮ್ಮ ತ್ಯಾಗ,ಬಲಿದಾನ ಮಾಡಿದ್ದಾರೆ. ಚೌ-ರಿಚೌರ, ದಂಡಿಸತ್ಯಾಗ್ರಹ, ಕ್ವಿಟ್ ಇಂಡಿಂ-ಯಾ ಚಳುವಳಿ ಸೇರಿದಂತೆ ಅನೇಕ ಹೋರಾಟ ಫಲವಾಗಿ ದೇಶವು ಸ್ವಾತಂತ್ರ್ಯ ಹೊಂದಿದೆ. ಡಾ.ಬಿ.ಆರ್.ಅಂಬೇಡ್ಕರ ಅವರು ಎಲ್ಲ ಜನಾಂಗಕ್ಕೂ ಸಮಾನತೆ, ಸಾಮಾಜಿಕ ನ್ಯಾಯ, ಎಲ್ಲ ಹಕ್ಕುಗಳನ್ನು ನೀಡುವ ಮೂಲಕ ದೇಶಕ್ಕೆ ಉತ್ತಮ ಸಂವಿಧಾನ ನೀಡಿದ್ದಾರೆ. ಡಾ.ಅಂಬೇಡ್ಕರ ಅವರನ್ನು ಎಷ್ಟು ಸ್ಮರಿಸಿದರೂ ಕಡಿಮೆಯೆಂದರು. ಇತಿಹಾಸ ಅರಿತವರು ಮಾತ್ರ ಇತಿಹಾಸ ಸೃಷ್ಟಿಸಲು ಸಾಧ್ಯ. ಇದನ್ನು ಪ್ರತಿಯೊಬ್ಬರೂ ಅರಿತುಕೊಂಡು ದೇಶದ ಪ್ರಗತಿಗೆ ನಾವೆಲ್ಲರೂ ಶ್ರಮಿಸಬೇಕಿದೆ. ದೇಶಕ್ಕೆ ಸ್ವಾತಂತ್ರ್ಯ ಲಭಿಸಿ 78 ವರ್ಷಗಳು ಗತಿಸಿವೆ. ಕೇಂದ್ರ, ರಾಜ್ಯ ಸರ್ಕಾರಗಳು ಅನೇಕ ಯೋಜನೆಗಳನ್ನು ಜಾರಿಗೆ ತರುವ ಮೂಲಕ ದೇಶದ ಬಡತನ, ನಿರುದ್ಯೋಗ ಸೇರಿದಂತೆ ಅನೇಕ ಸಮಸ್ಯೆಗಳನ್ನು ಪರಿಹರಿಸುವ ಮೂಲಕ ದೇಶವು ಅಭಿವೃದ್ಧಿಯಲ್ಲಿ ಮುನ್ನಡೆಯುತ್ತಿದೆ.



ಜಗತ್ತಿನಲ್ಲಿಯೇ ದೇಶವು ರಕ್ಷಣಾ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿದೆ. ದೇಶವು ಎಲ್ಲ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡುತ್ತಿದೆ. ಇಂದು ಯುವಜನಾಂಗವು ಮೊಬೈಲ್ ದಾಸರಾಗುವ ಜೊತೆಗೆ ದುಶ್ಚಟಗಳಿಗೆ ದಾಸರಾಗುತ್ತಿರುವದು ವಿಷಾದಕರ ಸಂಗತಿ. ಈ ಮೂಲಕ ಅವರು ತಮ್ಮ ಜೀವನ ನಾಶ ಮಾಡಿಕೊಳ್ಳುತ್ತಿದ್ದಾರೆ. ಯುವಜನಾಂಗದಲ್ಲಿ ದೇಶಪ್ರೇಮ ಬೆಳೆಯುವಂತೆ ಶಿಕ್ಷಕರು, ಅಧಿಕಾರಿಗಳು ಗಮನ ಹ-ರಿಸುವಂತಾಗಬೇಕು. ದೇಶಪ್ರೇಮ ಬೆಳೆದರೆ ದೇಶವು ಇನ್ನಷ್ಟು ಪ್ರಗತಿಯಾಗಲು ಸಾಧ್ಯವೆಂದರು. ಪುರಸಭೆ ಉಪಾಧ್ಯಕ್ಷ ಅಶೋಕ ಹಾರಿವಾಳ ಮಾತನಾಡಿ, ನಮ್ಮದು ಶಾಂತಿಪ್ರಿಯ ದೇಶವಾಗಿದೆ. ದೇಶದಲ್ಲಿ ದೇಶ ವಿರೋsಚಟುವಟಿಕೆಗಳು ನಡೆಯುವದು ಕಂಡುಬಂದರೆ ತಕ್ಷಣವೇ ಪೊಲೀಸ್ ಇಲಾಖೆಗೆ ಮಾಹಿತಿ ನೀಡಬೇಕು. ಮತಾಂತರ ನಡೆಯದಂತೆ ನೋಡಿಕೊಳ್ಳಬೇಕಿದೆ. ದೇಶದಲ್ಲಿ ಭಯೋತ್ಪಾದಕರು ನುಸುಳದಂತೆ ನಮ್ಮ ಸೈನಿಕರು ಹಗಲಿರುಳು ನೋಡುತ್ತಿರುವದರಿಂದಾಗಿ ನಾವೆಲ್ಲರೂ ದೇಶದಲ್ಲಿ ಶಾಂತಿ,ನೆಮ್ಮದಿಯಿಂದ ಇರಲು ಸಾಧ್ಯವಾಗಿದೆ. ಪ್ರತಿಯೊಬ್ಬರೂ ದೇಶಾಭಿಮಾನ ಬೆಳೆಸಿಕೊಳ್ಳಬೇಕು. ದೇಶ ಉಳಿಸಿ ಬೆಳೆಸುವ ಜವಾಬ್ದಾರಿ ಯುವಜನಾಂಗದ ಮೇಲಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪುರಸಭೆ ಅಧ್ಯಕ್ಷೆ ಜಗದೇವಿ ಮುತ್ತಪ್ಪ ಗುಂಡಳ್ಳಿ ಮಾತನಾಡಿ, ನಮ್ಮ ದೇಶದ ಇತಿಹಾಸ ಭವ್ಯವಾಗಿದೆ. ಸ್ವಾತಂತ್ರ್ಯ ದಿನೋತ್ಸವದಂದು ವಿವಿಧ ಶಾಲೆಗಳ ವಿದ್ಯಾರ್ಥಿಗಳು ನಡೆಸಿಕೊಡುವ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ದೇಶಪ್ರೇಮ ಮೈಗೂಡಿಸಿಕೊಳ್ಳಲು ಪೂರಕ. ಇಂತಹ ಕಾರ್ಯಕ್ರಮಗಳು ಹೆಚ್ಚು ನಡೆಯುವಂತಾಗಲೆಂದರು.

ವೇದಿಕೆಯಲ್ಲಿ ಡಿವೈಎಸ್ಪಿ ಬಲ್ಲಪ್ಪ ನಂದಗಾಂವಿ, ತಾಪಂ ಇಓ ಪ್ರಕಾಶ ದೇಸಾಯಿ, ಕ್ಷೇತ್ರಶಿಕ್ಷಣಾsಕಾರಿ ವಸಂತ ರಾಠೋಡ, ಪುರಸಭೆ ಮುಖ್ಯಾsಕಾರಿ ವ್ಹಿ. ಎಸ್.ಕಲಾದಗಿ, ಗ್ರೇಡ್-2 ತಹಸೀಲ್ದಾರ ಎಚ್. ಎಸ್.ಅರಕೇರಿ, ಸಮಾಜ ಕಲ್ಯಾಣ ಇಲಾಖೆಯ ಗ್ರೇಡ್-1 ನಿರ್ದೇಶಕಿ ಮಂಜು ಹಿರೇಮನಿ ಇತರರು ಇದ್ದರು. ಕ್ಷೇತ್ರಸಮನ್ವಾಧಿಕಾರಿ ಸುನೀಲ ರಾಠೋಡ ಸ್ವಾಗತಿಸಿದರು. ಶಿಕ್ಷಕರಾದ ಕೊಟ್ರೇಶ ಹೆಗ್ಡಾಳ, ಬಿ.ವ್ಹಿ.ಚಕ್ರಮನಿ ನಿರೂಪಿಸಿದರು. ದೈಹಿಕ ಶಿಕ್ಷಣಾಧಿಕಾರಿ ಎಸ್.ಎಸ್.ಅವಟಿ ವಂದಿಸಿದರು. ಸಮಾರಂಭದಲ್ಲಿ ಪಟ್ಟಣದ ವಿವಿಧ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಂದ ಜರುಗಿದ ಸಾಂಸ್ಕೃತಿ-ಕ ಕಾರ್ಯಕ್ರಮಗಳು ಜನಮನಸೂರೆಗೊಂಡವು. ಬಿಎಂಇಎಸ್ ಶಾಲೆಯ ವಿದ್ಯಾರ್ಥಿಗಳು ಪ್ರದರ್ಶಿಸಿದ ಪಲ್ಗಾಮ್ ದಾಳಿ, ಸಿಂಧೂರ ಆಪರೇಷನ್ ಸಾಂಸ್ಕತಿಕ ಕಾರ್ಯಕ್ರಮ ಗಮನ ಸೆಳೆಯಿತು. ಇದೇ ಸಂದರ್ಭದಲ್ಲಿ ದ್ವಿತೀಯ ಪಿಯುಸಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಪ್ರಥಮ, ದ್ವಿತೀಯ ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳನ್ನು, ಸೇವಾ ಸರ್ವೋತ್ತಮ ಪ್ರಶಸ್ತಿ ಪುರಸ್ಕತರನ್ನು, ಕಾನೂನು ಪಾಲಕರಾದ ಡಿವೈಎಸ್ಪಿ ಬಲ್ಲಪ್ಪ ನಂದಗಾವಿ, ಪಿಐ ಗುರುಶಾಂತ ದಾಶ್ಯಾಳ, ಪತ್ರಕರ್ತರಾದ ಪ್ರಕಾಶ ಬೆಣ್ಣೂರ, ಮಂಜು ಕಲಾಲ, ಮಾಜಿಸೈನಿಕರನ್ನು ತಾಲೂಕಾಡಳಿತದಿಂದ ಸನ್ಮಾನಿಸಲಾಯಿತು.ಪೊಲೀಸ್ ಇಲಾಖೆ, ಗೃಹ ರಕ್ಷಕ ದಳ, ಭಾರತ ಸೇವಾದಳ, ಸ್ಕೌಟ್ಸ್ ಆಯಂಡ್ ಗೈಡ್ಸ್ ವಿದ್ಯಾರ್ಥಿಗಳಿಂದ ಪಥ-ಸಂಚಲನ ಜರುಗಿತು.

**

# ಜನಮನರಂಜಿಸಿದ ಹಾಸ್ಯರಸಮಂಜರಿ ಕಾರ್ಯಕ್ರಮ

**ಬಸವನಬಾಗೇವಾಡಿ,** : ಪಟ್ಟಣದ ಆರಾಧ್ಯದೈವ ಮೂಲನಂದೀಶ್ವರ(ಬಸವೇಶ್ವರ) ಜಾತ್ರೆಯಂಗವಾಗಿ ಗುರುವಾರ ಸಂಜೆ ನಂದೀಶ್ವರ ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ಹಾಸ್ಯ ರಸಮಂಜರಿ ಕಾರ್ಯಕ್ರಮವು ರಾತ್ರಿ ಒಂಬತ್ತು ಗಂಟೆಗೆ ಆರಂಭವಾಗಿ ತಡರಾತ್ರಿ ಒಂದು ಗಂಟೆಯವರೆಗೂ ಜರುಗಿ ನೆರೆದ ಜನರ ಮನರಂಜಿಸಿತ್ತು.

ಈ ಕಾರ್ಯಕ್ರಮದಲ್ಲಿ ಮಹನ್ಯ ಪಾಟೀಲ ಅವರ ವ್ಹಿಜಿಎಂ ಇವೆಂಟ್ಸ್ ತಂಡದ ಕಲಾವಿದರಾದ ರಾಘವೇಂದ್ರ(ರಾಗಿಣಿ), ಚಿಲ್ಲರೆ ಮಂಜು, ಮಹನ್ಯ ಗುರು ಪಾಟೀಲ, ಮೌರ್ಯ, ಬಸವರಾಜ, ಸವಿತಾ ಸೇರಿದಂತೆ ಅನೇಕ ಕಲಾವಿದರು ನಡೆಸಿಕೊಟ್ಟ ಹಾಡು, ಹಾಸ್ಯ ಜನರಿಗೆ ಸಂತೋಷ, ರಂಜನೆ ನೀಡಿತು.

ಕಾರ್ಯಕ್ರಮ ಉದ್ಘಾಟಿಸಿದ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಜನಪದ ಗಾಯಕ ಬಸವರಾಜ ಹಾರಿವಾಳ ಮಾತನಾಡಿ, ಜಾತ್ರೆಯಂಗವಾಗಿ ಎಲ್ಲರ ಸಹಕಾರದಿಂದ ಇಂತಹ ಕಾರ್ಯಕ್ರಮ ಆಯೋಜನೆ ಮಾಡುವ



ಮೂಲಕ ಎಲ್ಲರೂ ನಮ್ಮವರು ಎಂಬ ಸಂದೇಶ ಸಾರಲು ಪೂರಕವಾಗುತ್ತದೆ. ಬಸವಾದಿ ಶರಣರ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದರು.

ಪಿಐ ಗುರುಶಾಂತ ದಾಶ್ಯಾಳ ಮಾತನಾಡಿ, ಈ ವರ್ಷದ ಜಾತ್ರೆಗೆ ಯಾವುದೇ ಕಪ್ಪು ಚುಕ್ಕೆ ಬಾರದಂತೆ ಎಲ್ಲರ ಸಹಕಾರದೊಂದಿಗೆ ಬಹಳ ಅಚ್ಚುಕಟ್ಟಾಗಿ ನಡೆಯುತ್ತಿದೆ. ನಮ್ಮ ಇಲಾಖೆಯ ಬಂದೋಬಸ್ತಿಗೆ ಎಲ್ಲರೂ ಸಹಕಾರ ನೀಡಿದ್ದು ಸ್ವಾಗತಾರ್ಹ.ಜಾತ್ರಾ ಉತ್ಸವ ಸಮಿತಿ, ಬಸವೇಶ್ವರ ಸೇವಾ ಸಮಿತಿ ಸೇ-ರಿದಂತೆ ಅನೇಕ ಹಿರಿಯರ ಸಹಕಾರ ನೀಡುತ್ತಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಬಸವೇಶ್ವರ ಸೇವಾ ಸಮಿತಿ ಅಧ್ಯಕ್ಷ ಈರಣ್ಣ ಪಟ್ಟಣಶೆಟ್ಟಿ ಮಾತನಾಡಿ, ಈ ವರ್ಷದ ಜಾತ್ರೆಯ ಎಲ್ಲರೂ ಸಹಕಾರ ನೀಡುತ್ತಿರುವದ-ರಿಂದ ಅಭೂತಪೂರ್ವವಾಗಿ ಯಶಸ್ವಿಯಾಗುತ್ತಿದೆ. ಜಾತ್ರೆಯಲ್ಲಿ ಪೊಲೀಸ್ ಇಲಾಖೆ, ಪುರಸಭೆ, ಹೆಸ್ಕಾಂ ಇಲಾಖೆಯು ತುಂಬಾ ಸಹಕಾರ ನೀಡುತ್ತಿರುವದು ಅಭಿನಂದನೀಯ. ಎಲ್ಲ ಸಮುದಾಯಕ್ಕೆ ಸೇ-ರಿದ ಜನರು ಜಾತ್ರಾ ಉತ್ಸವ ಸಮಿತಿಯಲ್ಲಿ ಕಾರ್ಯನಿರ್ವಹಿಸುವ ಮೂಲಕ ಜಾತ್ರೆಯನ್ನು ಯಶಸ್ವಿಯಾಗಿ ಮಾಡುತ್ತಿರುವುದು ಶ್ಲಾಘನೀಯ ಎಂದರು.

ವೇದಿಕೆಯಲ್ಲಿ ಜಾತ್ರಾ ಉತ್ಸವ ಸಮಿತಿ ಅಧ್ಯಕ್ಷ ರವಿ ರಾಠೋಡ, ಸಂಗಯ್ಯ ಕಾಳಹಸ್ತೇಶ್ವರಮಠ, ಬಸವರಾಜ ಗೊಳಸಂಗಿ, ಸುರೇಶಗೌಡ ಪಾಟೀಲ, ಚನ್ನಗೌಡ ಬಿರಾದಾರ, ಚಂದ್ರಶೇಖರಗೌಡ ಪಾಟೀಲ,ಸಿದ್ದಣ್ಣ ಕಲ್ಲೂರ, ರಮೇಶ ಯಳಮೇಲಿ, ರಾಜೇಂದ್ರ ಪತ್ತಾರ, ಬಸವರಾಜ ರಾಯಗೊಂಡ, ಮೀರಾಸಾ ಕೊರಬು, ದಯಾನಂದ ಜಾಲಗೇರಿ, ವಿಶ್ವನಾಥ ನಿಡಗುಂದಿ, ಸಮಿತಿಯ ಪದಾsಕಾರಿಗಳಾದ ಮಹೇಶ ಹಿರೇಕುರಬರ, ನಂದೀಶ ಪಾಟೀಲ, ಮಂಜು ಜಾಲಗೇರಿ, ರಮೇಶ ಮಸಬಿನಾಳ, ಸಿದ್ರಾಮ ಪಾತ್ರೋಟಿ, ಲಾಳೇಸಾ ಕೊರಬು ಇತರರು ಇದ್ದರು. ಶಂಕರಗೌಡ ಬಿರಾದಾರ ಸ್ವಾಗತಿಸಿದರು. ಕೊಟ್ರೇಶ ಹೆಗ್ಡಾಳ ನಿರೂಪಿಸಿ,ವಂದಿಸಿದರು.

# ಲಿಂಗನಮಕ್ಕಿ ಜಲಾಶಯದಿಂದ ನೀರು ಬಿಡುಗಡೆ : ಎಚ್ಚರ ವಹಿಸಿ



**ಕಾರವಾರ,** ಭಾರತೀಯ ಹವಾಮಾನ ಇಲಾಖೆ/ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಬೆಂಗಳೂರು ರವರ ಮುನ್ಸೂಚನೆಯಂತೆ, ಉತ್ತರ ಕನ್ನಡ ಜಿಲ್ಲೆಯ ಕರಾವಳಿ ತಾಲ್ಲೂಕುಗಳಲ್ಲಿ ಆ.20 ಬೆಳಗ್ಗೆ 8.30 ಗಂಟೆಯವರೆ ರೆಡ್ ಅಲರ್ಟ್‌ನ್ನು ಘೋಷಿಸಲಾಗಿರುತ್ತದೆ ಲಿಂಗನಮಕ್ಕಿ ಜಲಾಶಯಕ್ಕೆ ಭಾರಿ ಪ್ರಮಾಣದಲ್ಲಿ ನೀರು ಹರಿದು ಬರುತ್ತಿದ್ದು, ಲಿಂಗನಮಕ್ಕಿ ಜಲಾಶಯದ ನೀರಿನ ಮಟ್ಟವು ಗಣನೀಯವಾಗಿ ಏರುತ್ತಿರುತ್ತದೆ.

ಜಲಾಶಯದ ಗರಿಷ್ಠ ಮಟ್ಟವು 1819.00 ಅಡಿಗಳಾಗಿದ್ದು ಆ.18 ರಂದು ಮಧ್ಯಾಹ್ನ 1 ಗಂಟೆಗೆ ಜಲಾಶಯದ ನೀರಿನ ಮಟ್ಟವು 1815.50 ಅಡಿಗಳಿಗೆ ತಲುಪಿರುತ್ತದೆ. ಈ ದಿನ ಲಿಂಗನಮಕ್ಕಿ ಜಲಾಶಯದ ಒಳ ಹರಿವು ಸುಮಾರು 59,891 ಕ್ಯೂಸೆಕ್ಸ್ ಗಳಿಗಿಂತಲೂ ಅಧಿಕವಾಗಿದ್ದು ಇದೇ ರೀತಿಯಲ್ಲಿ ಜಲಾಶಯಕ್ಕೆ ಹರಿದು ಬರುವ ನೀರಿನ ಪ್ರಮಾಣವು ಮುಂದುವರೆದ ಪಕ್ಷದಲ್ಲಿ ಜಲಾಶಯವು ಶೀಘ್ರದಲ್ಲಿ ಗರಿಷ್ಠ ಮಟ್ಟವನ್ನು ತಲುಪುವ ಸಾಧ್ಯತೆ ಇರುತ್ತದೆ. ಅದರಂತೆ, ಅಣೆಕಟ್ಟೆಯ ಸುರಕ್ಷತೆ ದೃಷ್ಟಿಯಿಂದ ಹೆಚ್ಚುವರಿ ನೀರನ್ನು ಜಲಾಶಯದಿಂದ ಆ.19 ರಂದು ಬೆಳಗ್ಗೆ 10 ಗಂಟೆಯಿಂದ ಹೊರಬಿಡಲಾಗುವುದೆಂದು ಜಲಾಶಯದ ಕಾರ್ಯನಿರ್ವಾಹಕ ಅಭಿಯಂತರರು ಕೆ ಪಿ ಸಿ ಲಿಂಗನಮಕ್ಕಿ ರವರು ಆ.18 ತಿಳಿಸಿದ್ದು, ಸಾರ್ವಜನಿಕರು ಈ ಮುಂದಿನಂತೆ ಸೂಚನೆಗಳನ್ನು ಪಾಲಿಸುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷೆ ಲಕ್ಷ್ಮೀಪ್ರಿಯಾ ಕೆ. ತಿಳಿಸಿದ್ದಾರೆ. ಲಿಂಗನಮಕ್ಕಿ ಜಲಾಶಯದ ತಗ್ಗು ಪ್ರದೇಶದಲ್ಲಿ ಶರಾವತಿ ನದಿಯ ಇಕ್ಕೆಲಗಳ ಪ್ರದೇಶದಲ್ಲಿರುವ ಹೊನ್ನಾವರ ತಾಲ್ಲೂಕಿನ ವ್ಯಾಪ್ತಿಯಲ್ಲಿರುವ ತಳಮಟ್ಟದ ಗ್ರಾಮಗಳ ಜನರು ಎಚ್ಚರಿಕೆಯಿಂದ ಇರುವಂತೆ ಸೂಚಿಸಲಾಗಿದೆ. ಪ್ರವಾಹ ಸಂಭವನೀಯ ಸ್ಥಳಗಳ ಸಾರ್ವಜನಿಕರು ಅಮೂಲ್ಯ ವಸ್ತುಗಳನ್ನು ತೆಗೆದುಕೊಂಡು ಕಾಳಜಿ ಕೇಂದ್ರಗಳಲ್ಲಿ ಆಶ್ರಯ ಪಡೆಯುವುದು.

ಶರಾವತಿ ನದಿಯ ತಗ್ಗು ಪ್ರದೇಶಗಳಲ್ಲಿರುವ ಸಾರ್ವಜನಿಕರ ಕುರಿತು ಕಾಳಜಿ ಕೇಂದ್ರಗಳನ್ನು ಅಣಿಗೊಳಿಸಲಾಗಿರುತ್ತದೆ. ಮೀನುಗಾರರು, ಪ್ರವಾಸಿಗರು ಹಾಗೂ ಸಾರ್ವಜನಿಕರು ನದಿಯ ಒಳಗೆ ಅಥವಾ ಅದರ ಸುತ್ತಲಿನ ಪ್ರದೇಶಗಳಿಗೆ ತೆರಳದಂತೆ ಕಟ್ಟೆಚ್ಚರ ವಹಿಸುವುದು. ಪ್ರವಾಸಿಗರು, ಹಾಗೂ ಸಾರ್ವಜನಿಕರು ನದಿ/ನೀರಿರುವ ಪ್ರದೇಶ ಮತ್ತು ಸಮುದ್ರಕ್ಕೆ ಇಳಿಯದಂತೆ ಕಟ್ಟೆಚ್ಚರ ವಹಿಸುವುದು. ತುರ್ತು ಸೇವೆಗೆ 24*7 ಕಂಟ್ರೋಲ್ ರೂಮ್ ಟೋಲ್ ಫ್ರೀ ಸಂಖ್ಯೆ 08382-229857 ಮತ್ತು ವಾಟ್ಸಪ್ ಸಂಖ್ಯೆ 9483511015 ಸಂಪರ್ಕಿಸುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಡ ಕುಟುಂಬಗಳಿಗೆ ಶವ ಸಂಸ್ಕಾರಕ್ಕೆ ಆರ್ಥಿಕ ನೆರವು: ಪಿಡಿಓ ಅಮಿತ್ ನಾಯಿಕ




**ಯರಗಟ್ಟಿ:** ಸಮೀಪದ ಮುಗಳಿಹಾಳ ಗ್ರಾಮ ಪಂಚಾಯತಿಯಲ್ಲಿ ಆಗಸ್ಟ್ 7 ರಂದು ನಡೆದ ಸಾಮಾನ್ಯ ಸಭೆಯಲ್ಲಿ ಗ್ರಾಮಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು ಸೇರಿಕೊಂಡು ಮುಗಳಿಹಾಳ, ಮೆಳ್ಳಿಕೇರಿ, ದಾಸನಾಳ ಗ್ರಾಮಗಳಲ್ಲಿ ಮರಣ ಹೊಂದಿದರೆ ಮೃತರ ಕುಟುಂಬಕ್ಕೆ ಶವಸಂಸ್ಕಾರ ಮಾಡಲು ಗ್ರಾಮ ಪಂಚಾಯತಿ ವತಿಯಿಂದ ಐದು ಸಾವಿರ ರುಪಾಯಿಗಳ ಸಹಾಯಧನವನ್ನು ನೀಡಲು ತೀರ್ಮಾನಿಸಿದರು. ಅದರಂತೆ ಆಗಸ್ಟ್ 11 ರಂದು ಮುಗಳಿಹಾಳ ಗ್ರಾಮದ ನಿವಾಸಿ ಈರಪ್ಪ ರುದ್ರಪ್ಪ ಬೆಲ್ಲದ ಮರಣ ಹೊಂದಿದ್ದರು.ಮೃತರ ಕುಟುಂಬದ ಸದಸ್ಯರಾದ ಮಹಾಂತೇಶ ಬೆಲ್ಲದರವರಿಗೆ ಶನಿವಾರ ಗ್ರಾಮ ಪಂಚಾಯತಿ ವತಿಯಿಂದ ಐದು ಸಾವಿರ ರುಪಾಯಿಗಳ ಚೆಕ್ ನ್ನು ಗ್ರಾಮ ಪಂಚಾಯತ್ ಸದಸ್ಯರುಗಳ ನೇತೃತ್ವದಲ್ಲಿ ವಿತರಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಆಡಳಿತ ಅಧಿಕಾರಿ ಶೋಭಾ ಸಿದ್ನಾಳ, ಸದಸ್ಯರುಗಳಾದ ರಾಮನಗೌಡ ಗಂಗರಡ್ಡಿ, ರಾಮಸಿದ್ದಪ್ಪ ಧರ್ಮಟ್ಟಿ, ನಾಗಪ್ಪ ಪುಂಜಿ, ಕಾರ್ಯದರ್ಶಿ ಕರೆಪ್ಪ ದೊಡ್ಡನ್ನವರ, ಯರಗಟ್ಟಿ- ಮುನವಳ್ಳಿ ಯೂತ್ ಕಾಂಗ್ರೆಸ್ ಉಪಾಧ್ಯಕ್ಷ ಮುತ್ತು ದಳವಾಯಿ, ಗ್ರಂಥಪಾಲಕ ರಾಜು ಗಾಣಿಗೇರ, ಮಂಜು ದಳವಾಯಿ, ಕಾಯಕ ಬಂಧು ಪ್ರೇಮಾ ದಳವಾಯಿ, ಅಶೋಕ ದಳವಾಯಿ, ಸುರೇಶ್ ಇಳಿಗೇರ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

> ಮುಗಳಿಹಾಳ ಗ್ರಾಮ ಪಂಚಾಯತಿ ವ್ಯಾಪ್ತಿಯ ಮುಗಳಿಹಾಳ, ಮೆಳ್ಳಿಕೇರಿ, ದಾಸನಾಳ, ಗ್ರಾಮದ ನಿವಾಸಿಗಳು ಯಾರಾದರೂ ಮರಣ ಹೊಂದಿದರೆ ಶವ ಸಂಸ್ಕಾರ ಮಾಡಲು ಮೃತರ ಕುಟುಂಬಕ್ಕೆ ಅನುಕೂಲವಾಗಲೆಂದು ಐದು ಸಾವಿರ ರುಪಾಯಿಗಳ ಸಹಾಯಧನವನ್ನು ನೀಡಲು ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರುಗಳು ತೀರ್ಮಾನಿಸಿದ್ದಾರೆ. ಬಡ ಕುಟುಂಬಗಳಿಗೆ ಆರ್ಥಿಕ ನೆರವು ಒದಗಿಸಲು ಇದೊಂದು ಮಹತ್ವವಾದ ತೀರ್ಮಾನ ಎಂದರು.
>
> **ಅಮಿತ ನಾಯಿಕ**
> **ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ**

# ಜಾನಪದ ರಸಮಂಜರಿ ಕಾರ್ಯಕ್ರಮದೊಂದಿಗೆ ಜಾತ್ರೆಯ ಎಲ್ಲ ಕಾರ್ಯಕ್ರಮಗಳು ಸಂಪನ್ನ



**ಬಸವನಬಾಗೇವಾಡಿ,** ಪಟ್ಟಣದ ಆರಾಧ್ಯದೈವ ಮೂಲನಂದೀಶ್ವರ(ಬಸವೇಶ್ವರ) ಜಾತ್ರಾಮಹೋತ್ಸವದಂಗವಾಗಿ ಶುಕ್ರವಾರ ಸಂಜೆ ನಂದೀಶ್ವರ ರಂಗಮಂದಿರದಲ್ಲಿ ಕಲಾ ಸಿಂಚನ ಮೆಲೋಡಿಸ್ ತಂಡದಿಂದ ಹಮ್ಮಿಕೊಂಡಿದ್ದ ಜಾನಪದ ರಸಮಂಜರಿ ಕಾರ್ಯಕ್ರಮದೊಂದಿಗೆ ಐದು ದಿನಗಳ ಕಾಲ ನಡೆಯುತ್ತಿದ್ದ ಬಸವೇಶ್ವರ ಜಾತ್ರಾಮಹೋತ್ಸವದ ಕಾರ್ಯಕ್ರಮಗಳು ಸಂಪನ್ನಹೊಂದಿದವು.

ಕಲಾ ಸಿಂಚನ ಮೆಲೋಡಿಸ್ ತಂಡದ ಗೋಪಾಲ ಹೂಗಾರ, ಗೋಪಾಲ ಇಂಚಗೇರಿ ನೇತೃತ್ವದಲ್ಲಿ ಗಾಯಕರಾದ ಮ್ಯೂಸಿಕ್ ಮೈಲಾರಿ, ಮಾಳು ನಿಪನಾಳ, ಪರಶು ಕೊಲೂರ, ದ್ಯಾಮೇಶ, ಮಲ್ಲು ತಟ್ಟಿ, ತೃಪ್ತಿ ಧಾರವಾಡ, ಪ್ರಿಯಾ, ಶಿವಾನಿ ಸೇರಿದಂತೆ ಇತರರು ಆಧುನಿಕ ಜಾನಪದ ಶೈಲಿ ಹಾಡುಗಳು, ಸಿನಿಮಾ ಹಾಡುಗಳು ಸೇರಿದಂತೆ ವಿವಿಧ ಹಾಡುಗಳು ಜನರ ಮನತಣಿಸಿದವು. ಈ ಕಾರ್ಯಕ್ರಮ ನೋಡಲು ಪಟ್ಟಣ ಸೇರಿದಂತೆ ವಿವಿಧೆಡೆಗಳಿಂದ ಆಗಮಿಸಿದ್ದ ಅಪಾರ ಸಂಖ್ಯೆಯ ಜನರನ್ನು ನಿಯಂತ್ರಿಸುವಲ್ಲಿ ಪೊಲೀಸ್ ಇಲಾಖೆ, ಜಾತ್ರಾ ಉತ್ಸವ ಸಮಿತಿ ಮುಖಂಡರು, ಪದಾಧಿಕಾರಿಗಳು ಹರಸಾಹಸ ಪಟ್ಟರು. ಕೊನೆಯಲ್ಲಿ ಡಿವೈಎಸ್ಪಿ ಬಲ್ಲಪ್ಪ ನಂದಗಾವಿ,ಪಿಐ ಗುರುಶಾಂತ ದಾಶ್ಯಾಳ , ಬಸವೇಶ್ವರ ಸೇವಾ ಸಮಿತಿ ಅಧ್ಯಕ್ಷ ಈರಣ್ಣ ಪಟ್ಟಣಶೆಟ್ಟಿ , ಜಾತ್ರಾ ಉತ್ಸವ ಸಮಿತಿ ಅಧ್ಯಕ್ಷ ರವಿ ರಾಠೋಡ ಹಾಗೂ ಜಾತ್ರಾ ಉತ್ಸವ ಸಮಿತಿ ಮುಖಂಡರು, ಪದಾಧಿಕಾರಿಗಳು ಎಲ್ಲರೂ ಜನರ ಮಧ್ಯೆ ಹೋಗಿ ಜನರು ಸುಮ್ಮನೆ ಕುಳಿತುಕೊಂಡು ಹಾಡುಗಳನ್ನು ತಡರಾತ್ರಿ 12.30 ಗಂಟೆಯವರೆಗೂ ಕೇಳುವಂತೆ ಮಾಡಿದರು.

ಕಾರ್ಯಕ್ರಮ ನೋಡಲು ಜನರು ಬೈಕ್, ಕಾರುಗಳನ್ನು ತಂದಿದ್ದರಿಂದಾಗಿ ಮಾರುಕಟ್ಟೆ ಪ್ರದೇಶದಲ್ಲಿ ಎಲ್ಲಿ ನೋಡಿದರೂ ಬೈಕ್, ಕಾರುಗಳು ಕಂಡುಬಂದವು. ಬಸ್ ನಿಲ್ದಾಣದ ತುಂಬಾ ಬೈಕ್, ಕಾರು ನಿಂತಿದ್ದು ಕಂಡುಬಂದವು. ಜಾನಪದ ಸಂಜೆ ಕಾರ್ಯಕ್ರಮವನ್ನು ಡಿವೈಎಸ್ಪಿ ಬಲ್ಲಪ್ಪ ನಂದಗಾಂವಿ ಉದ್ಘಾಟಿಸಿದರು. ಅಧ್ಯಕ್ಷತೆ ವಹಿಸಿದ್ದ ಬಸವೇಶ್ವರ ಸೇವಾ ಸಮಿತಿ ಅಧ್ಯಕ್ಷ ಈರಣ್ಣ ಪಟ್ಟಣಶೆಟ್ಟಿ ಮಾತನಾಡಿ, ಕಳೆದ ಐದು ದಿನಗಳಿಂದ ನಡೆದು ಬಸವೇಶ್ವರ ಜಾತ್ರೆಯ ಯಶಸ್ವಿಗೆ ತಹಸೀಲ್ದಾರರು, ಪೊಲೀಸ್ ಇಲಾಖೆ, ಪುರಸಭೆ, ಹೆಸ್ಕಾಂ ಇಲಾಖೆ, ಜಾತ್ರಾ ಉತ್ಸವ ಸಮಿತಿ ಸೇರಿದಂತೆ ಪಟ್ಟಣದ ಎಲ್ಲ ಮುಖಂಡರು,ಜನರು, ಪ್ರಾಧಿಕಾರದ ಶಾಲೆಯ ಸಿಬ್ಬಂದಿ, ದೇವಸ್ಥಾನದ ಸಿಬ್ಬಂದಿ ತುಂಬಾ ಸಹಕಾರ ನೀಡಿದ್ದಾರೆ. ಮೊದಲು ಮೂರು ದಿನ ಮಾತ್ರ ಬಸವೇಶ್ವರ ಜಾತ್ರೆ ನಡೆಯುತ್ತಿತ್ತು. ಕಳೆದ ಮೂರು ವರ್ಷಗಳಿಂದ ಐದು ದಿನಗಳ ಜಾತ್ರೆ ಮಾಡುತ್ತಾ ಬರಲಾಗುತ್ತಿದೆ. ಇದಕ್ಕೆ ಎಲ್ಲ ಜನರು ಸಹಕಾರ ನೀಡುತ್ತಿರುವದು ಶ್ಲಾಘನೀಯ ಎಂದರು.

ಕಾರ್ಯಕ್ರಮದಲ್ಲಿ ಜಾತ್ರಾ ಉತ್ಸವ ಸಮಿತಿ ಅಧ್ಯಕ್ಷ ರವಿ ರಾಠೋಡ, ಮುಖಂಡರಾದ ಅಶೋಕ ಕಲ್ಲೂರ, ಜಗದೀಶ ಕೊಟ್ರಶೆಟ್ಟಿ, ಶಂಕರಗೌಡ ಬಿರಾದಾರ, ಉಮೇಶ ಹಾರಿವಾಳ, ರವಿ ಪಟ್ಟಣಶೆಟ್ಟಿ, ಅನಿಲ ದುಂಬಾಳಿ, ಶಂಕರಗೌಡ ಪಾಟೀಲ, ಡಾ.ಕರುಣಾಕರ ಚೌಧರಿ, ಡಾ.ಬಸವರಾಜ ಕೋಟಿ, ರವಿ ಚಿಕ್ಕೊಂಡ, ಎಂ.ಬಿ.ತೋಟದ, ವಿಶ್ವನಾಥ ಹಾರಿವಾಳ, ಜಟ್ಟಿಂಗರಾಯ ಮಾಲಗಾರ, ಸಂಜು ಬಿರಾದಾರ, ಬಸವರಾಜ ಅಳ್ಳಗಿ, ಜಾತ್ರಾ ಉತ್ಸವದ ಸಮಿತಿ ಪದಾಧಿಕಾರಿಗಳು ಸೇರಿದಂತೆ ಇತರರು ಇದ್ದರು.

ಗುರುಸ್ಪಂದನದ ಸದುಪಯೋಗ ಪಡೆಯಿರಿ:ಬಿಇಓ ವಸಂತ ರಾಠೋಡ.

16ಬಿಎಸ್ವಿ01- ಬಸವನಬಾಗೇವಾಡಿಯ ಎಂಪಿಎಸ್ ಶಾಲೆಯಲ್ಲಿ ಶನಿವಾರ ಹಮ್ಮಿಕೊಂಡಿದ್ದ ಗುರುಸ್ಪಂದನ ಕಾರ್ಯಕ್ರಮವನ್ನು ಅಧ್ಯಕ್ಷತೆ ವಹಿಸಿದ್ದ ಬಿಇಓ ವಸಂತ ರಾಠೋಡ, ಶಿಕ್ಷಕರ ಸಂಘದ ಮುಖಂಡರು ಉದ್ಘಾಟಿಸಿದರು.

ಕನ್ನಡಪ್ರಭವಾರ್ತೆ, ಬಸವನಬಾಗೇವಾಡಿ,ಆ.16 ಶಿಕ್ಷಕರ ಸೇವೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಪರಿಹರಿಸುವ ನಿಟ್ಟಿನಲ್ಲಿ ಗುರುಸ್ಪಂದನಾ ಕಾರ್ಯಕ್ರಮ ಅಖಂಡ ತಾಲೂಕಿನಲ್ಲಿ ಏಳು ಹಂತಗಳಲ್ಲಿ ಆಯೋಜಿಸಿದೆ. ಶಿಕ್ಷಕರು ಗುರು ಸ್ಪಂದನಾ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿ ವಸಂತ ರಾಠೋಡ ಹೇಳಿದರು.

ಪಟ್ಟಣದ ಎಂಪಿಎಸ್ ಶಾಲೆಯಲ್ಲಿ ಜಿಲ್ಲಾ ಪಂಚಾಯತ, ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಕ್ಷೇತ್ರಸಮನ್ವಯಾಧಿಕಾರಿಗಳ ಕಾರ್ಯಾಲಯ ಮತ್ತು ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಸಹಯೋಗದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಗುರುಸ್ಪಂದನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಕರ ವರ್ಷದ ಟೈಮ್ ಬಾಂಡ್‌ಗಳನ್ನು ಹಾಕುವದು, ಶಿಕ್ಷಕರ ಗಳಿಕೆ ರಜೆಯನ್ನು ಸೇವಾ ಪುಸ್ತಕದಲ್ಲಿ ನಮೂದಿಸುವದು, ಶಿಕ್ಷಕರ ಶೈಕ್ಷಣಿಕ ಅರ್ಹತೆಯನ್ನು ಸೇವಾ ಪುಸ್ತಕದಲ್ಲಿ ನಮೂದಿಸುವದು ಸೇರಿದಂತೆ ಸೇವಾ ಪುಸ್ತಕದಲ್ಲಿರುವ ಲೋಪದೋಷಗಳನ್ನು ತಿದ್ದುಪಡಿ ಮಾಡುವದು ಸೇರಿದಂತೆ ಶಿಕ್ಷಕರ ಸೇವೆಗೆ ಸಂಬಂಧಿಸಿದ ಕಾರ್ಯಗಳನ್ನು ಗುರುಸ್ಪಂದನಾ ಕಾರ್ಯಕ್ರಮದಲ್ಲಿ ಮಾಡಲಾಗುವದು. ಶಿಕ್ಷಕರ ತಮ್ಮ ವಲಯದಲ್ಲಿ ನಡೆಯುವ ಗುರುಸ್ಪಂದನಾ ಕಾರ್ಯಕ್ರಮದಲ್ಲಿ ತಮ್ಮ ಸೇವಾ ಪುಸ್ತಕ ಪರಿಶೀಲಿಸಿ ತಮ್ಮ ಜನ್ಮದಿನಾಂಕ ಸೇರಿದಂತೆ ಎಲ್ಲ ವಿವರಗಳನ್ನು ಸರಿಯಾಗಿ ನೋಡಿಕೊಂಡು ಸರಿಯಾದ ಮಾಹಿತಿಯನ್ನು ನಮೂದಿಸಬೇಕು. ಅಖಂಡ ತಾಲೂಕಿನಲ್ಲಿ 1600ಕ್ಕೂ ಹೆಚ್ಚು ಪ್ರಾಥಮಿಕ ಶಾಲಾ ಶಿಕ್ಷಕರು ಸೇವೆ ಸಲ್ಲಿಸುತ್ತಿದ್ದಾರೆ. ಶೇ.98 ರಷ್ಟು ಸೇವಾ ಪುಸ್ತಕಗಳಲ್ಲಿ ನಾಮಿನಿ ಫಾರ್ಮೆಟ್ ಇಲ್ಲ. ಇದರ ಬಗ್ಗೆ ಶಿಕ್ಷಕರು ಗಮನ ಹರಿಸಿ ನಾಮಿನಿ ಫಾರ್ಮೆಟ್ ಲಗತ್ತಿಸಬೇಕು. ಸೇವಾ ಪುಸ್ತಕ ಸರಿಪಡಿಸಲು ಮೂರು ತಿಂಗಳ ಕಾಲಾವಧಿ ನಿಗದಿಪಡಿಸಲಾಗಿದೆ. ಸೇವಾ ಪುಸ್ತಕಗಳನ್ನು ಇ-ಸೇವಾ ಪುಸ್ತಕಕ್ಕೆ ಒಳಪಡಿಸಬೇಕಾಗಿದೆ. ಇದಕ್ಕೆ ಎಲ್ಲ ಶಿಕ್ಷಕರ ಸಹಕಾರ ನೀಡಬೇಕೆಂದ ಅವರು ಇಂದು ಎನ್‌ಪಿಎಸ್, ಎಸ್‌ಎಸ್‌ಎ, ಎನ್‌ಪಿಎಸ್, ಬಿಆರ್‌ಪಿ, ಸಿಆರ್ಪಿ, ಟಿಜಿಟಿ ಮತ್ತು ಬಿಐಇಆರ್‌ಟಿ ಸೇರಿ ಒಟ್ಟು 288 ಶಿಕ್ಷಕರ ಸೇವಾ ಪುಸ್ತಕ ಪರಿಶೀಲನೆ ಮಾಡಲಾಗುವದು ಎಂದರು.

ಆದರ್ಶ ಶಿಕ್ಷಕರ ವೇದಿಕೆಯ ಜಿಲ್ಲಾಧ್ಯಕ್ಷ ಉಮೇಶ ಕವಲಗಿ ಮಾತನಾಡಿ, ಶಿಕ್ಷಕರ ಸಮಸ್ಯೆ ಹಾಗೂ ಅಭಿಪ್ರಾಯ ಹಂಚಿಕೊಳ್ಳಲು ಗುರು ಸ್ಪಂದನ ಕಾರ್ಯಕ್ರಮ ಸಹಕಾರಿಯಾಗಿದೆ. ಈ ಕಾರ್ಯಕ್ರಮದಲ್ಲಿ ಶಿಕ್ಷಕರು ಒಟ್ಟಾಗಿ ತಮ್ಮ ಸಮಸ್ಯೆಗಳನ್ನು ಹೇಳಲು ಅವಕಾಶವಿದೆ. ಆ.30 ರಂದು ಬಸವನಬಾಗೇವಾಡಿಯ ಎಂಪಿಎಸ್ ಶಾಲೆಯಲ್ಲಿ ಬಸವನಬಾಗೇವಾಡಿ ವಲಯದ ಶಿಕ್ಷಕರಿಗೆ, ಸೆ.6 ರಂದು ಮನಗೂಳಿ ಎಂಪಿಎಸ್ ಶಾಲೆಯಲ್ಲಿ ಮನಗೂಳಿ ವಲಯದ ಶಿಕ್ಷಕರಿಗೆ, ಸೆ.13 ರಂದು ನಿಡಗುಂದಿ ಎಂಪಿಎಸ್ ಶಾಲೆಯಲ್ಲಿ ನಿಡಗುಂದಿ ವಲಯದ ಶಿಕ್ಷಕರಿಗೆ, ಸೆ.20 ರಂದು ಕೊಲ್ಹಾರ ಎಂಪಿಎಸ್ ಶಾಲೆಯಲ್ಲಿ ಕೊಲ್ಹಾರ ವಲಯದ ಶಿಕ್ಷಕರಿಗೆ, ಅ.11 ರಂದು ಬಸವನಬಾಗೇವಾಡಿ ಎಂಪಿಎಸ್ ಶಾಲೆಯಲ್ಲಿ ಜಿಪಿಟಿ ಶಿಕ್ಷಕರಿಗೆ, ಅ.18 ರಂದು ಹೂವಿನಹಿಪ್ಪರಗಿ ಕೆಜಿಎಸ್ ಶಾಲೆಯಲ್ಲಿ ಹೂವಿನಹಿಪ್ಪರಗಿ ವಲಯದ ಶಿಕ್ಷಕರಿಗೆ ಕ್ಷೇತ್ರಶಿಕ್ಷಣಾಧಿಕಾರಿಗಳು ಗುರುಸ್ಪಂದನಾ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಆಯಾ ವಲಯದ ಶಿಕ್ಷಕರು ಇದರ ಪ್ರಯೋಜನ ಪಡೆದುಕೊಳ್ಳಬೇಕೆಂದರು.

ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಎಚ್.ಬಿ.ಬಾರಿಕಾಯಿ ಮಾತನಾಡಿ, ಇದೊಂದು ಅರ್ಥಪೂರ್ಣ, ಅಪರೂಪದ ಕಾರ್ಯಕ್ರಮ.ಸರ್ಕಾರಿ ನೌಕರರಿಗೆ ಸೇವಾ ಪುಸ್ತಕ ಬೆನ್ನೆಲುಬು. ಇದರಲ್ಲಿ ಲೋಪದೋಷವಿದ್ದರೆ ನೌಕರರು ಇಲಾಖೆಗೆ ಅಲೆದಾಡಬೇಕಾಗುತ್ತದೆ. ಇದನ್ನು ತಪ್ಪಿಸಲು ನಮ್ಮ ಸಂಘವು ಬಿಇಓ ಅವರಿಗೆ ಗುರುಸ್ಪಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲು ಮನವಿ ಮಾಡಿಕೊಂಡಾಗ ಬಿಇಓ ಅವರು ನಮ್ಮ ಮನವಿಗೆ ಸ್ಪಂದಿಸಿ ಅಖಂಡ ತಾಲೂಕಿನಲ್ಲಿರುವ 1600 ಶಿಕ್ಷಕರಿಗೆ ಅನುಕೂಲವಾಗಲು ಗುರುಸ್ಪಂದನಾ ಕಾರ್ಯಕ್ರಮ ಹಮ್ಮಿಕೊಂಡಿರುವದು ಶ್ಲಾಘನೀಯ. ಶಿಕ್ಷಕರ ಸಮಸ್ಯೆಗಳಿಗೆ ನಮ್ಮ ಸಂಘವು ಸದಾ ಸನ್ನದವಾಗಿ ಶಿಕ್ಷಕರ ದನಿಯಾಗಿ ಕಾರ್ಯ ಮಾಡಲು ಸದಾ ಬದ್ಧವಿದೆ ಎಂದರು.

ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಉಪಾಧ್ಯಕ್ಷ ಅಶೋಕ ಗಿಡ್ಡಪ್ಪಗೋಳ, ಸಂಘಟನಾ ಕಾರ್ಯದರ್ಶಿ ಎಂ.ಎಂ.ಮುಲ್ಲಾ, ನಿಡಗುಂದಿ ತಾಲೂಕಾಧ್ಯಕ್ಷ ಸಲೀಂ ದಡೇದ ಮಾತನಾಡಿದರು. ಕಾರ್ಯಕ್ರಮದಲ್ಲಿ ಎಂ.ಎಸ್.ಮುಕಾರ್ತಿಹಾಳ, ಸುರೇಶ ಬಿರಾದಾರ, ರಮೇಶ ಬೆಳ್ಳುಬ್ಬಿ, ಹೊನ್ನಪ್ಪ ಗೊಳಸಂಗಿ, ಟಿ.ಪಿ.ದಳವಾಯಿ, ಕೃಷ್ಣಾ ರಜಪೂತ, ಬಸವರಾಜ ಚಿಂಚೋಳಿ, ಬಿ.ಪಿ.ನಾಗಾವಿ, ಎಂ.ಎನ್.ಯಾಳವಾರ, ಆನಂದ ಪವಾರ, ಆರ್.ಡಿ.ಕಾಳಗಿ, ಸಿ.ಟಿ.ಮಾದರ, ಆನಂದ ಲಮಾಣಿ, ಎ.ಎಚ್.ಬಾಗೇವಾಡಿ, ಅನುಜಾ ಗುಬ್ಬಾ ಇತರರು ಇದ್ದರು. ಸವಿತಾ ಚಿಕ್ಕೊಂಡ ಪ್ರಾರ್ಥಿಸಿದರು. ಎಂ.ವ್ಹಿ.ಗಬ್ಬೂರ ಪ್ರಾಸ್ತವಿಕವಾಗಿ ಮಾತನಾಡಿದರು. ಎಸ್.ಪಿ.ಮಡಿಕೇಶ್ವರ ನಿರೂಪಿಸಿದರು. ಬಸವರಾಜ ಚಿಂಚೋಳಿ ವಂದಿಸಿದರು.

# ಗೌರಿ ಗಣೇಶ ಹಬ್ಬ ಹಾಗೂ ಈದ್ ಮಿಲಾದ್ ಶಾಂತಿ ಸೌಹಾರ್ದತೆಯಿಂದ ಆಚರಿಸಿ




**ಯರಗಟ್ಟಿ :** ಗೌರಿ ಗಣೇಶ ಹಬ್ಬ ಹಾಗೂ ಈದ್ ಮಿಲಾದ್ ಶಾಂತಿ ಸೌಹಾರ್ದತಿವಾಗಿ ಆಚರಿಸುವಂತೆ ರಾಮದುರ್ಗ ಡಿಎಸ್ಪಿ ಚಿದಂಬರ ಮಡಿವಾಳರ ಸವದತ್ತಿ ಪೊಲೀಸ್ ಠಾಣೆ ಸಿಪಿಐ ಡಿ ಎಸ್ ಧರ್ಮಟ್ಟಿ ಪಿ.ಎಸ್.ಐ ಕಲ್ಮೇಶ್ ಬನ್ನೂರ್ ಹೇಳಿದರು.

ಸಮೀಪದ ಮುನವಳ್ಳಿ ಪಟ್ಟಣದ ಪೊಲೀಸ್ ಠಾಣೆಯಲ್ಲಿ ಗೌರಿ ಗಣೇಶ ಈದ್ ಮಿಲಾದ್ ಹಬ್ಬದ ಪ್ರಯುಕ್ತ ಹಮ್ಮಿಕೊಂಡಿದ್ದ ಮುನವಳ್ಳಿ ಪಟ್ಟಣದ ಸುತ್ತಮುತ್ತಲಿನ ಸಾರ್ವಜನಿಕರ ಶಾಂತಿ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಹಬ್ಬಗಳ ಆಚರಣೆಯಲ್ಲಿ ಯಾವುದೇ ರೀತಿಯಾದ ಕೋಮುಗಲಭೆ ಸೃಷ್ಟಿಯಾಗದಂತೆ ಶಾಂತಿಯುತವಾಗಿ ಆಚರಿಸಬೇಕು ಇನ್ನೊಬ್ಬರಿಗೆ ಕಿರುಕುಳ ಆಗುವ ರೀತಿಯಲ್ಲಿ ಧ್ವನಿವರ್ಧಕಗಳನ್ನು ಬಳಸಬಾರದು ಗಣೇಶ ಕುರಿಸುವವರು ಸಂಬಂಧಿಸಿದ ಅಧಿಕಾರಿಗಳ ಪರವಾನಿಗೆ

ಪಡೆಯಬೇಕು ಮತ್ತು ಸಮಾಜದಲ್ಲಿ ಅಶಾಂತಿ ಉಂಟುಮಾಡುವ ಕಿಡಿಗೇಡಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಎಚ್ಚರಿಸಿದರು.ಈ ಸಂದರ್ಭದಲ್ಲಿ ಪಟ್ಟಣದ ಹಿರಿಯರು ಹಾಗೂ ಯುವಕರು ವಿವಿಧ ಸಂಘಟನೆಯ ಮುಖಂಡರು ಸುತ್ತಮುತ್ತಲಿನ ಹಳ್ಳಿಯ ಗ್ರಾಮಸ್ಥರು ಪೊಲೀಸ್ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ರೆಡ್ ಅಲರ್ಟ್: ಭಾರೀ ಮಳೆ ಎಚ್ಚರವಹಿಸಿ

**ಕಾರವಾರ.** ಭಾರತೀಯ ಹವಾಮಾನ ಇಲಾಖೆ/ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಬೆಂಗಳೂರು ರವರ ಮುನ್ಸೂಚನೆಯಂತೆ, ಬಂಗಾಲ ಕೊಲ್ಲಿಯಲ್ಲಿ ವಾಯು ಭಾರ ಕುಸಿತ ಉಂಟಾಗಿ ಚಂಡಮಾರುತ ಬೀಸುವ ಸಾಧ್ಯತೆಯ ಹಿನ್ನೆಲೆಯಲ್ಲಿ ಕರ್ನಾಟಕದ ಕರಾವಳಿಯಲ್ಲಿ ದಿನಾಂಕ 17-8-2025 ರಿಂದ 19-8-2025 ರ ವರೆಗೆ ಹವಾಮಾನ ಇಲಾಖೆಯು ರೆಡ್ ಅಲರ್ಟ ಘೋಷಿಸಿದ ಹಿನ್ನೆಲೆಯಲ್ಲಿ ಹೆಚ್ಚಿನ ಮಳೆಯಾಗುವ ಸಾಧ್ಯತೆಯಿರುತ್ತದೆ ಸಾರ್ವಜನಿಕರು ಹಾಗೂ ಮೀನುಗಾರರು ಈ ಮುಂದಿನಂತೆ ಸೂಚನೆಗಳನ್ನು ಪಾಲಿಸುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷೆ ಲಕ್ಷ್ಮಿಪ್ರಿಯಾ ಕೆ. ತಿಳಿಸಿದ್ದಾರೆ.

ಮೀನುಗಾರರು ಸಮುದ್ರಕ್ಕೆ ಮೀನುಗಾರಿಕೆ ತೆರಳದಂತೆ ಸೂಚಿಸಲಾಗಿದ್ದು ಮುಂದಿನ ಹವಾಮಾನ ಮುನ್ಸೂಚನೆಯನ್ವಯ ಮೀನುಗಾರಿಕೆಯನ್ನು ನಡೆಸಲು ತಿಳಿಸಿದೆ. ಸದರಿ ದಿನಗಳಲ್ಲಿ ಸಾರ್ವಜನಿಕರು ಸಮುದ್ರ ಪ್ರದೇಶಗಳಿಗೆ ಹೋಗದಂತೆ ಸೂಚಿಸಲಾಗಿದೆ. ಪ್ರವಾಸಿಗರು, ಹಾಗೂ ಸಾರ್ವಜನಿಕರು ನದಿ/ನೀರಿರುವ ಪ್ರದೇಶ ಮತ್ತು ಸಮುದ್ರಕ್ಕೆ ಇಳಿಯದಂತೆ ಕಟ್ಟೆಚ್ಚರ ವಹಿಸುವುದು.

ನದಿ ತೀರದಲ್ಲಿ ವಾಸಿಸುವವರು ಹಠಾತ್ ಪ್ರವಾಹ ಉಂಟಾಗಬಹುದಾದ ಹಿನ್ನೆಲೆಯಲ್ಲಿ ಸುರಕ್ಷಿತ ಸ್ಥಳಕ್ಕೆ ತೆರಳುವುದು. ಜಿಲ್ಲೆಯ ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿರುವುದರಿಂದ ನದಿಯ ದಡದಲ್ಲಿ ಯಾವುದೇ ಸಮಯದಲ್ಲಿ ಪ್ರವಾಹ ಉಂಟಾಗಬಹುದಾದ ಸಾಧ್ಯತೆ ಇರುವುದರಿಂದ ಅಂತಹ ಸಾರ್ವಜನಿಕರು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಗೊಳ್ಳುವುದು.

ಮಳೆಯ ಜೊತೆಗೆ ಗಾಳಿ ಕೂಡಾ 40-60 ಕಿ.ಮೀ ವೇಗದಿಂದ ಬೀಸುವ ಸಾಧ್ಯತೆಯಿರುವುದರಿಂದ ಅಪಾಯಕಾರಿ ಮರಗಳಿರುವ ಮನೆಗಳಲ್ಲಿಯ ಜನರು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಗೊಳ್ಳುವುದು ಮತ್ತು ಮರಗಳ ಕೆಳಗೆ ಆಶ್ರಯ ಪಡೆಯದಂತೆ ಸೂಚಿಸಲಾಗಿದೆ. ಗುಡ್ಡದ ಇಳಿಜಾರಿನ ಪ್ರದೇಶದಲ್ಲಿ ವಾಸಿಸುವರು ಕೂಡಾ ಮಳೆಯ ತೀವ್ರತೆಯನುಸಾರ ಸುರಕ್ಷತಾ ಸ್ಥಳಕ್ಕೆ ಸ್ಥಳಾಂತರಗೊಳ್ಳುವುದು. ಸಮುದ್ರತೀರಕ್ಕೆ ಮಕ್ಕಳು ಹೋಗದಂತೆ ಪಾಲಕರು ಜಾಗ್ರತೆವಹಿಸುವುದು. ಸಮುದ್ರ ತೀರದಲ್ಲಿ ಯಾವುದೇ ಮನರಂಜನಾ ಚಟುವಟಿಕೆಗಳನ್ನು ಹಮ್ಮಿಕೊಳ್ಳಬಾರದು. ತುರ್ತು ಸೇವೆಗೆ 24*7 ಕಂಟ್ರೋಲ್ ರೂಮ್ ಟೋಲ್ ಫ್ರೀ ಸಂಖ್ಯೆ 08382-229857 ಮತ್ತು ವಾಟ್ಸಪ್ ಸಂಖ್ಯೆ 9483511015 ಸಂಪರ್ಕಿಸುವಂತೆ ಜಿಲ್ಲಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯಶಸ್ವಿ ಬದುಕಿಗಾಗಿ ಭಗವದ್ಗೀತೆಯ ಓದು ಅಗತ್ಯ: ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ




ಧಾರವಾಡ : ಭಗವದ್ಗೀತೆಯ 18 ಅಧ್ಯಾಯವು ತ್ಯಾಗದಿಂದ ಆಗಿರುವ ಒಂದು ಪುಸ್ತಕ. ಅದನ್ನು ಓದಿದರೆ ನಮ್ಮ ಜೀವನ ಸಾರ್ಥಕವಾಗುತ್ತದೆ. ಭಗವದ್ಗೀತೆಯನ್ನು ನಾವು ನಮ್ಮ ದಿನನಿತ್ಯದ ಜೀವನದಲ್ಲಿ ಅಳವಡಿಸಿಕೊಂಡರೆ ಯಶಸ್ವಿ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಅವರು ಹೇಳಿದರು.

ಅವರು ಇಂದು (ಆ.16) ಬೆಳಿಗ್ಗೆ ನಗರದ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಜರುಗಿದ ಭಗವಾನ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡಿದರು.

ಭಾರತ ದೇಶದ ಸಾಂಸ್ಕೃತಿಕ ಪರಂಪರೆಯಲ್ಲಿ ಅನೇಕ ಹಬ್ಬಗಳಿವೆ. ಪ್ರತಿಯೊಂದು ಹಬ್ಬವೂ ತನ್ನದೇ ಆದ ವಿಶೇಷತೆ, ಪೌರಾಣಿಕತೆ ಹಾಗೂ ಆಧ್ಯಾತ್ಮಿಕ ಸಂದೇಶವನ್ನು ಹೊಂದಿದೆ. ಅವುಗಳಲ್ಲಿ ಅತ್ಯಂತ ಪವಿತ್ರ ಹಾಗೂ ಭಕ್ತಿಯಿಂದ ಆಚರಿಸಲಾಗುವ ಹಬ್ಬವೆಂದರೆ ಶ್ರೀಕೃಷ್ಣ ಜಯಂತಿ. ಈ ಹಬ್ಬವು ಕೇವಲ ಧಾರ್ಮಿಕ ಆಚರಣೆಯಾಗಿಯೇ ಸೀಮಿತವಾಗಿಲ್ಲ, ಅದು ಜೀವನದ ಮೌಲ್ಯಗಳನ್ನು ನೆನಪಿಸುವ ಒಂದು ಆತ್ಮಸ್ಪರ್ಶಿ ಸಂಭ್ರಮವಾಗಿದೆ.

ಭಗವಾನ ಶ್ರೀ ಕೃಷ್ಣನ ಸಂದೇಶಗಳನ್ನು ನಮ್ಮ ನಿಜ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಜಯಂತಿಯ ಆಚರಣೆ ಸಾರ್ಥಕವಾಗುತ್ತದೆ. ದುರ್ನಡತೆಯನ್ನು ಬಿಟ್ಟು ಸನ್ನಡತೆಯಲ್ಲಿ ನಡೆಯುವವರ ಪರವಾಗಿ ಇರುವುದನ್ನು ಮಹಾಭಾರತದ ಚರಿತ್ರೆ ಹೇಳುತ್ತದೆ. ಅದೇ ರೀತಿ ಒಳ್ಳೆಯತನಕ್ಕೆ ಯಾವಾಗಲೂ ಜಯ ಸಿಗುವುದು ಎಂದು ಮಹಾಭಾರತವೂ ನಮಗೆ ತಿಳಿಸಿಕೊಡುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಅವರು ಹೇಳಿದರು.

ದಾವಣಗೇರಿ ವಿನ್ನರ್ಸ್ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ. ನಾಗರಾಜ ಎಸ್. ಅವರು ಭಗವಾನ ಶ್ರೀ ಕೃಷ್ಣ ಅವರ ಕುರಿತು ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಆರತಿ ದೇವಶಿಖಾಮಣಿ ಅವರು ಕಾರ್ಯಕ್ರಮ ನಿರೂಪಿಸಿ, ವಂದಿಸಿದರು. ಜಿಲ್ಲಾ ಗೊಲ್ಲ,ಯಾದವ ಸಮಾಜದ ಅಧ್ಯಕ್ಷ ಕೆ.ಕೆ.ರಂಗಸ್ವಾಮಿ, ಕಾರ್ಯದರ್ಶಿ ಎಚ್.ಪರಮೇಶ್ವರಪ್ಪ, ಕಾರ್ಯಾಧ್ಯಕ್ಷೆ ನೇತ್ರಾವತಿ ಗೊಲ್ಲರ, ನಿಕಟಪೂರ್ವ ಗೌರವ ಅಧ್ಯಕ್ಷ ಮಹದೇವ್ ದಂಡಿನ, ಮಂಡಿಹಾಳ ಗ್ರಾಮ ಪಂಚಾಯತ್ ಅಧ್ಯಕ್ಷ ವಿಶಾಲ ಗೌಳಿ, ಬಾಬು ಬುರಾನ ಗೌಳಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಗುರು ಹಿರಿಯರು, ಪ್ರಾಧ್ಯಾಪಕರು, ಶಿಕ್ಷಕರು, ಶಾಲಾ ವಿದ್ಯಾರ್ಥಿಗಳು, ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಪರಿಸರ ಸಂರಕ್ಷಣೆಯ ಸಂದೇಶ ಸಾರಿದ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮತ್ತು ಉಪ ಲೋಕಾಯುಕ್ತರು

ಕಾರವಾರ, : ಪರಿಸರದ ಮಹತ್ವ, ಅಗತ್ಯತೆ ಮತ್ತು ಸಂರಕ್ಷಣೆಯ ಕುರಿತಂತೆ ಉಚ್ಚ ನ್ಯಾಯಾಲಯದ ಐವರು ನ್ಯಾಯಾಧೀಶರು ಮತ್ತು ರಾಜ್ಯದ ಇಬ್ಬರು ಉಪ ಲೋಕಾಯುಕ್ತರು ಹೊನ್ನಾವರದಲ್ಲಿ ಭಾನುವಾರ ನಡೆದ ವಿಶ್ವ ಪರಿಸರ ದಿನಾಚರಣೆಯ ಕಾರ್ಯಕ್ರಮದಲ್ಲಿ ಒಗ್ಗಟ್ಟಿನ ಜಾಗೃತಿಯ ಸಂದೇಶ ಸಾರಿದರು.

ಹೊನ್ನಾವರದ ಸಾಲಕೋಡದ ಶ್ರೀ ಕರಿಕಾನ ಪರಮೇಶ್ವರಿ ಸತ್ಯಸಾಯಿ ಶಿಕ್ಷಣ ಸಂಸ್ಥೆ ಆವಾರ ಅರೇ ಅಂಗಡಿಯಲ್ಲಿ , ವಕೀಲರ ಸಂಘ (ರಿ) ಹೊನ್ನಾವರದ ಆಯೋಜನೆಯಲ್ಲಿ, ಕರ್ನಾಟಕ ಲೋಕಾಯುಕ್ತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಾರವಾರ, ಜಿಲ್ಲಾಡಳಿತ, ಉತ್ತರ ಕನ್ನಡ , ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಮಾತೃ ಫೌಂಡೇಶನ್ (ರಿ), ಬೆಂಗಳೂರು, ಇವರ ಸಂಯುಕ್ತ ಆಶ್ರಯದಲ್ಲಿ ಅಯೋಜಿಸಲಾದ ವಿಶ್ವ ಪರಿಸರ ದಿನಾಚರಣೆ (ಸಹಸ್ರಾರು ವೃಕ್ಷಾರೋಪಣ ಅಭಿಯಾನ) ಯನ್ನು ಉದ್ಘಾಟಿಸಿ ಮಾತನಾಡಿದರು. ನ್ಯಾ. ಎಸ್.ಜಿ ಪಂಡಿತ್ ಮಾತನಾಡಿ, ಪರಿಸರ ದಿನಾಚರಣೆಯ ಕಾರ್ಯಕ್ರಮ ಒಂದು ದಿನಕ್ಕೆ ಮಾತ್ರ ಸೀಮಿತವಾಗಿರದೇ, ವರ್ಷ ಪೂರ್ತಿ ನಡೆಯಬೇಕು, ಸಾರ್ವಜನಿಕರಲ್ಲಿ ಪರಿಸರದ ಬಗ್ಗೆ ಅರಿವು ಮತ್ತು ಜಾಗೃತಿ ಮೂಡಬೇಕು. ಪರಿಸರ ಉಳಿಸುವ ಹಾಗೂ ಸಂರಕ್ಷಣೆ ಮಾಡುವ ಕೆಲಸ ಒಂದು ಇಲಾಖೆಗೆ ಮಾತ್ರ ಸೀಮಿತವಾಗದೇ ಪ್ರತ್ರಿಯೊಬ್ಬರ ಜವಾಬ್ದಾರಿಯಾಗಿದ್ದು, ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಒಂದನೇ ತರಗತಿಯಿಂದಲೇ ಈ ಬಗ್ಗೆ ಶಿಕ್ಷಕರು ಜಾಗೃತಿ ಮೂಡಿಸಬೇಕು ಎಂದರು.

ನ್ಯಾ.ಸಚಿನ್ ಶಂಕರ್ ಮಗದುಮ್ ಮಾತನಾಡಿ,ಗಿಡಗಳನ್ನು ನೆಡುವುದು ಮಾತ್ರವಲ್ಲದೆ ಅವುಗಳನ್ನು ಪೋಷಣೆ ಸಂರಕ್ಷಣೆ ಮಾಡಬೇಕು, 4 ವರ್ಷ ಅವುಗಳನ್ನು ಪೋಷಿಸಿದರೆ 500 ವರ್ಷ ಅವುಗಳು ನಮ್ಮನ್ನು ಕಾಪಾಡುತ್ತವೆ ಎಂದರು.

ಕೋವಿಡ್ ಸಂದರ್ಭದಲ್ಲಿ ಆಮ್ಲಜನಕದ ಮಹತ್ವ ಎಲ್ಲರಿಗೂ ಅರಿವಾಗಿದೆ. ವಿದ್ಯಾರ್ಥಿಗಳಿಗೆ ಪರಿಸರ ಸಂರಕ್ಷಣೆ ಜೊತೆಗೆ ಪ್ಲಾಸ್ಟಿಕ್ ಬಳಕೆಯ ದುಷ್ಪರಿಣಾಮ, ಅವುಗಳ ನಿಯಂತ್ರಣ ಹಾಗೂ ನಿಷೇಧದ ಬಗ್ಗೆಯೂ ತಿಳಿಸಬೇಕು ಎಂದು ನ್ಯಾ.ಪ್ರದೀಪ್ ಸಿಂಗ್ ಯೆರೂರ್ ತಿಳಿಸಿದರು.

ಇಂದು ನಾವು ಪರಿಸರ ಉಳಿಸುವ ಕಾರ್ಯ ಮಾಡುವ ಮೂಲಕ ಮುಂದಿನ ಪೀಳಿಗೆಗೆ ಸಂದೇಶ ನೀಡಬೇಕು, ನಮ್ಮ ಜಿಲ್ಲೆ ಹಾಗೂ ರಾಜ್ಯ ಹಸಿರುನಿಂದ ಕೂಡಿರುವಂತಾಗಲಿ ಎಂದು ನ್ಯಾ. ಅನಂತ ರಾಮನಾಥ ಹೆಗಡೆ ಹೇಳಿದರು.

ನ್ಯಾ. ಸಿ. ಎಂ. ಜೋಷಿ ಮಾತನಾಡಿ, ಏಕ ಬಳಕೆಯ ಪ್ಲಾಸ್ಟಿಕ್ ಬಳಸುವುದಿಲ್ಲ, ಪ್ಲಾಸ್ಟಿಕ್ ವಸ್ತುಗಳ ಬಳಕೆಯ ನಿಯಂತ್ರಣ, ಪರಿಸರದಿಂದ ಅಗತ್ಯವಿರುವಷ್ಟು ಮಾತ್ರ ಪಡೆದು ಸಮತೋಲನ ಕಾಪಾಡುವಂತೆ ಪ್ರತಿಯೊಬ್ಬರೂ ಸ್ವಯಂ ಪ್ರತಿಜ್ಞೆ ಸ್ವೀಕರಿಸಬೇಕು, ಸುಸ್ಥಿರ ಅಭಿವೃದ್ಧಿಯಡೆಗೆ ನಡೆಯುವಾಗ ಪರಿಸರದ ಬಗ್ಗೆ ಹೆಚ್ಚು ಕಾಳಜಿ ವಹಿಸಬೇಕು ಎಂದರು.

# ಶ್ರೀ ಕೃಷ್ಣ ಜನ್ಮಾಷ್ಟಮಿ : ಕೃಷ್ಣ ಭಗವಾನರ ಸಂದೇಶ - ಉಪದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಜೀವನ ಸಂತೋಷದಿಂದ ಸಾಗುತ್ತದೆ : ಉಪ ಆಯುಕ್ತ ಉದಯಕುಮಾರ ತಳವಾರ

ಬೆಳಗಾವಿ, : ಶ್ರಾವಣ ಮಾಸದಲ್ಲಿ ಮುಂಗಾರು ಮಳೆ ಇರುವ ಸಂದರ್ಭದಲ್ಲಿ ಜಗತ್ತೆ ಹಸಿರಿನಿಂದ ತುಂಬಿರುತ್ತದೆ ಇಂತಹ ಸಂದರ್ಭದಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ ಆಚರಿಸುವುದು ಎಂದರೆ ಭಗವಂತನೆ ನಮಗೆ ಆಶೀರ್ವಾದ ಮಾಡಿದಂತೆ ತೋರುತ್ತದೆ. ಶ್ರೀ ಕೃಷ್ಣನ ಸಂದೇಶ ಮತ್ತು ಉಪದೇಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಬದುಕಿದರೆ ನಮ್ಮ ಜೀವನ ಸಂತೋಷದಿಂದ ಸಾಗುತ್ತದೆ ಎಂದು ಮಹಾನಗರ ಪಾಲಿಕೆ ಉಪ ಆಯುಕ್ತ ಉದಯಕುಮಾರ ತಳವಾರ ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ಮಂಗಳವಾರ (ಆ.19) ನಗರದ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶ್ರೀ ಕೃಷ್ಣರನ್ನು ನಾವೆಲ್ಲರು ನೆನೆಯಬೇಕು, ಬಾಲಕೃಷ್ಣನಾಗಿ ಜನಿಸಿ ಹಲವಾರು ಪವಾಡಗಳನ್ನು ಮಾಡಿ ದೇವರಾದಂತವರು ಶ್ರೀ ಕೃಷ್ಣ ಭಗವಾನರು, ಇವರು ಜಗತ್ತಿಗೆ ಬೆಳಕನ್ನು ನೀಡಿದಂತವರು ಇವರ ಸಂದೇಶಗಳು ನಮ್ಮ ಜೀವನಕ್ಕೆ ಬಹಳಷ್ಟು ಉತ್ತಮ ದಾರಿಗಳನ್ನು ತೋರಿಸುತ್ತವೆ ಎಂದು ಮಹಾನಗರ ಪಾಲಿಕೆ ಉಪ ಆಯುಕ್ತ ಉದಯಕುಮಾರ ತಳವಾರ ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ ಡಾ. ಸಂಜಯ ಶಿಂದಿಹಟ್ಟಿ ಅವರು ಮಾತನಾಡಿ ಹಲವಾರು ವರ್ಷಗಳಿಂದ ಕಲಾವಿದರಿಗೆ, ಸಾಹಿತಿಗಳಿಗೆ ಮತ್ತು ನಾಟಕಕಾರರ ಮನಸ್ಸಿನಲ್ಲಿ ನಿಂತು ಎಲ್ಲರ ಮನಸ್ಸನ್ನು ಮೃದು ಮಾಡಿರುವವರು ಆದ್ಯಾತ್ಮ ಶಕ್ತಿ ಯಾವುದಾದರು ಇದ್ದರೆ ಅದು ಕೃಷ್ಣ ಪರಾಮಾತ್ಮರು. ಶ್ರೀ ಕೃಷ್ಣ ಹಿಂದೂ ದೇವರುಗಳಲ್ಲಿ ಪ್ರಮುಖರಾಗಿ, ವಿಷ್ಣುವಿನ ಎಂಟನೆ ಅವತಾರವಾಗಿ, ಭಗವದ್ಗೀತೆಯ ಕೇಂದ್ರ ವ್ಯಕ್ತಿಯಾಗಿ, ದೇವರ ನೇರ ವಂಶಸ್ತನಾಗಿ ನಾವು ಕಾಣಬಹುದು.



ಉತ್ತರ ಪ್ರದೇಶದ ಮಥುರಾದಲ್ಲಿ ಜನಿಸಿ, ತಮ್ಮಲ್ಲಿರುವ ದೈವಿ ಶಕ್ತಿಯಿಂದ ಬಾಲ್ಯದಲ್ಲೆ ಹಲಾವಾರು ಪವಾಡಗಳನ್ನು ಮಾಡಿದ್ದನ್ನು ನಾವು ತಿಳಿದುಕೊಳ್ಳಬಹುದು, ಜನರಿಗೆ ತೊಂದರೆ ಕೊಡುತ್ತಿದ್ದ ರಾಕ್ಷಸರನ್ನ ತಮ್ಮ ಬಾಲ್ಯದಲ್ಲೆ ವದೆ ಮಾಡಿದವರು ಶ್ರೀ ಕೃಷ್ಣ ಭಗವಾನರು. ಹೀಗೆ ಮುಂದೆ ಪಾಂಡವರ ರಾಜನಾಗಿರತಕ್ಕಂತಹ ಅರ್ಜುನನ ಸ್ನೇಹಿತನಾಗಿ ಮತ್ತು ಅವನ ಸಲಹೆಗಾರ ಆಗುತ್ತಾರೆ. ಕುರುಕ್ಷೇತ್ರದಲ್ಲಿ ಪಾಂಡವರಿಗೆ ಶ್ರೀ ಕೃಷ್ಣ ತನ್ನ ಸಂಪೂರ್ಣ ಸಾಕ್ಷಾತ್ಕಾರವನ್ನ , ಆದ್ಯಾತ್ಮಿಕ ಸಾರ್ವತ್ರಿಕ ರೂಪವನ್ನ ಅಷ್ಟೇಅಲ್ಲದೆ ಮಾನವ ಹಾಗೂ ದೈವಿಕ ಅಂಶಗಳನ್ನ ತಿಳಿಸಿಕೊಡುತ್ತಾನೆ. ಒಟ್ಟಾರೆಯಾಗಿ ದೈವಿಕ, ಸ್ನೇಹಿತ, ಆದ್ಯಾತ್ಮಿಕ ಶಿಕ್ಷಕರಾಗಿ ನಾವು ನೋಡಬಹುದು ಎಂದು ವಿವರಿಸಿದರು.

ಮನುಷ್ಯನಿಗೆ ಕೋಪ ಒಳ್ಳೆಯದಲ್ಲಾ, ಮನುಷ್ಯ ತಾಳ್ಮೆ ಹಾಗೂ ಶಾಂತಿಯಿಂದ ಜಗತ್ತನ್ನೆ ಗೆಲ್ಲಬಹುದುದು ಮತ್ತು ತ್ಯಾಗಗಳನ್ನು ಮಾಡಿದರೆ ಮಾತ್ರ ಜೀವನದಲ್ಲಿ ಸಾಧನೆ ಮಾಡಲು ಸಾಧ್ಯ. ನಾವು ಮಾಡುವ ಕಾಯದಲ್ಲಿ ತನು ಮನ ಧನದಿಂದ ಮಾಡಿದರೆ ಅದು ದೇವರಿಗೆ ಸಲ್ಲುತ್ತದೆ. ನಾಳೆ ಕುರಿತು ಚಿಂತೆ ಮಾಡಬೇಡಿ ಎಂದಿದ್ದಾರೆ, ಇಂದಿನ ಕ್ಷಣವನ್ನು ಆನಂದದಿಂದ ಅನುಭವಿಸಬೇಕು. ಶ್ರೀ ಕೃಷ್ಣ ಪರಮಾತ್ಮರ ಉಪದೇಶಗಳು, ಸಂದೇಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಗೋಕಾಕ ಕನ್ನಡ ಸಾಹಿತ್ಯ ಪರಿಷತ್ತಿನ ಆದ್ಯಕ್ಷರಾದ ಡಾ.ಸಂಜಯ ಶಿಂದಿಹಟ್ಟಿ ಅವರು ವಿಶೇಷ ಉಪನ್ಯಾಸ ನೀಡಿದರು.

ಮಹಾನಗರ ಪಾಲಿಕೆ ಮಹಪೌರ ಮಂಗೇಶ ಪವಾರ, ಮಹಾನಗರ ಪಾಲಿಕೆ ಉಪ ಆಯುಕ್ತ ಉದಯಕುಮಾರ ತಳವಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಜಿಲ್ಲಾ ಹಣಬರ ಯಾದವ ಸಂಘದ ಅಧ್ಯಕ್ಷ ಎಸ್ ಎ ಮುಂಡೆ ಸೇರಿದಂತೆ ಸಮಾಜದ ಗಣ್ಯರು ಉಪಸ್ಥಿತಿತರಿದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :165, Postal Reg No. PMG/KA/NK/BM/135/25-27 / POST AT Vantamury Colony Post Office